# ಅಧಿಕಾರಿಗಳಿಗೆ ಜನಜೀವನದ ಕಾಳಜಿ ಇರಲಿ: ಜಿ ಕುಮಾರ ನಾಯಕ

ಮಲ್ಲಮ್ಮ ನುಡಿ ವಾರ್ತೆ
ರಾಯಚೂರು ಜೂ 16 : ಜನ ಜೀವನದ ಬಗ್ಗೆ ಅಧಿಕಾರಿಗಳಿಗೆ ಕಾಳಜಿ ಇರಬೇಕು. ಈ ನಿಟ್ಟಿನಲ್ಲಿ ಬೇರೆ ಜಿಲ್ಲೆಗಳಿಗೆ ಮಾದರಿಯಾಗುವ ಹಾಗೆ ಪ್ರತಿಯೊಂದು ಯೋಜನೆಗಳು ಅಚ್ಚುಕಟ್ಟಾಗಿ ಅನುಷ್ಠಾನಗೊಳಿಸಲು ಮುತುವರ್ಜಿ ವಹಿಸಬೇಕು ಎಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ಅಧ್ಯಕ್ಷರು ಆಗಿರುವ ರಾಯಚೂರ ಲೋಕಸಭಾ ಸದಸ್ಯರಾದ ಜಿ ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜೂನ್ 16ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಿಕಿತ್ಸೆ ಸಿಗುತ್ತಿಲ್ಲ ಅನ್ನುವ ಕಾರಣಕ್ಕೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಗರ್ಭಿಣಿಯರು ಸಾವಿಗೀಡಾಗುವ ಪ್ರಕರಣಗಳು ವರದಿಯಾಗಬಾರದು. ಈ ಬಗ್ಗೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಸಾಕಷ್ಟು ಮುಂಜಾಗ್ರತೆ ವಹಿಸಬೇಕು. ಜಿಲ್ಲಾ, ತಾಲೂಕು, ಹೋಬಳಿ, ಗ್ರಾಮಮಟ್ಟದ ಎಲ್ಲ ಕಡೆಗಳಲ್ಲಿ ಮಹಿಳೆಯರು ಮತ್ತು ಮಕ್ಕಳಿಗೆ ಸಕಾಲಕ್ಕೆ ಚಿಕಿತ್ಸೆ ಸಿಗುವಂತೆ ನೋಡಿಕೊಳ್ಳಬೇಕು ಎಂದು ಸಂಸದರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಶಿಶುಮರಣ ಮತ್ತು ತಾಯಿಮರಣ ಪ್ರಮಾಣವು ಶೂನ್ಯಕ್ಕಿಳಿಸಬೇಕು ಎಂದರು.

ಬಾಲ್ಯವಿವಾಹ ಪದ್ಧತಿಯು ನಿಷೇಧವಿದ್ದರೂ ಇನ್ನು ಗ್ರಾಮೀಣ ಭಾಗದ ಅಲ್ಲಲ್ಲಿ ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗುತ್ತಿವೆ. ಕಾನೂನುಕ್ರಮಗಳನ್ನು ಬಿಗಿಗೊಳಿಸಿ ಈ ಪದ್ಧತಿಯನ್ನು ತೊಲಗಿಸಬೇಕು. ಇದಕ್ಕೆ ಪ್ರೋತ್ಸಾಹಿಸುವವರನ್ನು ಕಠಿಣ ಶಿಕ್ಷೆಗೊಳಪಡಿಸಬೇಕು ಎಂದು ಸಂಸದರು ಸೂಚನೆ ನೀಡಿದರು.



ಗ್ರಾಮೀಣ ಭಾಗದಲ್ಲಿ ಇತ್ತೀಚೆಗೆ ಸಾರ್ವಜನಿಕರಲ್ಲಿ ಅಧಿಕ ರಕ್ತದೊತ್ತಡ, ಶುಗರ್ ಹೆಚ್ಚುತ್ತಿವೆ. ಈ ಬಗ್ಗೆ ಗ್ರಾಮಮಟ್ಟದ ವೈದ್ಯಾಧಿಕಾರಿಗಳು ಗಮನ ಹರಿಸಬೇಕು. ಗ್ರಾಮೀಣ ಜನರಲ್ಲಿ ಹೆಚ್ಚುತ್ತಿರುವ ಬಿಪಿ, ಶುಗರ್ ತಡೆಗಾಗಿ ಇದುವರೆಗೆ ಆರೋಗ್ಯ ಇಲಾಖೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡಬೇಕು ಎಂದು ಸಂಸದರು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ವಿವಿಧ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ಎಂಬಿಬಿಎಸ್ ಪದವೀಧರರು ಖಾಲಿ ಇರುವ ಹುದ್ದೆಗಳಿಗೆ ಬಾರದಿರಲು ಇರುವ ತೊಡಕುಗಳನ್ನು ಕೂಡಲೇ ಸರಿಪಡಿಸಲು ಕ್ರಮ ವಹಿಸಬೇಕು. ಜನತೆಗೆ ಸರಿಯಾದ ಚಿಕಿತ್ಸೆ ಸಿಗುವ ನಿಟ್ಟಿನಲ್ಲಿ ಎಲ್ಲಾ ಆಸ್ಪತ್ರೆಗಳಲ್ಲಿ ಸಮರ್ಪಕ ಪ್ರಮಾಣದಲ್ಲಿ ಔಷಧಿ, ಸಲಕರಣೆಗಳು ಇರುವಂತೆ ನೋಡಿಕೊಳ್ಳಬೇಕು ಎಂದು ಸಂಸದರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಣ್ಣುಪರೀಕ್ಷೆಗೆ ಒತ್ತು ಕೊಡಿ: ಮಾಹಿತಿ ಕೊರತೆಯಿಂದಾಗಿ ರೈತರಿಗೆ ಯಾವ ಮಣ್ಣಿನಲ್ಲಿ ಯಾವ ಬಗೆಯ ಬಿತ್ತನೆ ಬೀಜ ಬಿತ್ತನೆ ಮಾಡಬೇಕು ಎಂಬುದು ತಿಳಿಯುವುದಿಲ್ಲ. ರಾಯಚೂರ ಜಿಲ್ಲೆಯಲ್ಲಿ ಕೃಷಿ ಇಲಾಖೆ ಮತ್ತು ರೈತರ ಮಧ್ಯೆ ಸರಿಯಾದ ಸಮನ್ವಯ ಇಲ್ಲದ್ದಕ್ಕೆ ರೈತರು ಖಾಸಗಿ ಕೇಂದ್ರಗಳತ್ತ ಮುಖ ಮಾಡುವಂತಾಗಿದೆ. ಇದು ತಪ್ಪಬೇಕು. ಕೃಷಿ ಅಧಿಕಾರಿಗಳು ರೈತರ ಬಳಿ ಹೋಗಬೇಕು. ಬಿತ್ತನೆ ಬೀಜ, ರಸಗೊಬ್ಬರದ ಬಗ್ಗೆ ರೈತರಿಗೆ ಸರಿಯಾದ ಮಾಹಿತಿ ನೀಡಬೇಕು. ಮಣ್ಣಿನ ಪರೀಕ್ಷೆಯನ್ನು ನಿಯಮಿತವಾಗಿ ನಡೆಸಬೇಕು ಎಂದು ಸಂಸದರು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ತಳಿಗಳ ಬಗ್ಗೆ ತಿಳುವಳಿಕೆ ನೀಡಿ: ತೋಟಗಾರಿಕಾ ಬೆಳೆಗಳ ವಿವಿಧ ತಳಿಗಳ ಬಗ್ಗೆ ರೈತರಿಗೆ ಮಾಹಿತಿ ನೀಡುತ್ತಿಲ್ಲ. ಇದುವರೆಗೆ ಬಹುತೇಕ ರೈತರಿಗೆ ಇಲಾಖೆಯಿಂದ ಸಹಾಯಧನ ಸಮರ್ಪಕವಾಗಿ ತಲುಪಿಲ್ಲ ಎಂದು ಸಂಸದರು ತೋಟಗಾರಿಕಾ ಇಲಾಖೆಯ ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಮಾವಿನ ಹಣ್ಣಿನ ಉತ್ಪಾದನಾ ಪ್ರಮಾಣವು ರಾಯಚೂರ ಜಿಲ್ಲೆಯಲ್ಲೆ ಏಕೆ ಕಡಿಮೆ ಆಗಿದೆ ಎಂದು ಪ್ರಶ್ನಿಸಿದ ಸಂಸದರು, ಜಿಲ್ಲೆಯಲ್ಲಿನ ಮಾವು ಬೆಳೆಗಾರರನ್ನು ಗುರುತಿಸಬೇಕು. ಇಲ್ಲಿ ಬೆಳೆದ ಮಾವನ್ನು ಬೇರೆ ರಾಜ್ಯಗಳಿಗೆ ಸಾಗಿಸಲು ಪೂರಕವಾದ ರಸ್ತೆ ಸೌಕರ್ಯ ಜಿಲ್ಲೆಯಲ್ಲಿದೆ ಎಂದು ತಿಳಿಸಿ ಅವರಿಗೆ ಪ್ರೋತ್ಸಾಹ ನೀಡುವ ಕಾರ್ಯ ಮಾಡಬೇಕು ಎಂದು ನಿರ್ದೇಶನ ನೀಡಿದರು.

## ಒಂದನೇ ಪುಟದಿಂದ

## ಅಧಿಸೂಚನೆ ಪ್ರಕಟ; 2 ಹಂತದಲ್ಲಿ ಸರ್ವೇ

ಭಾರತದ ಮೊದಲ ಡಿಜಿಟಲ್ ಜನಗಣತಿಯಾಗಿರುವುದರಿಂದ, ಮೊದಲ ಬಾರಿಗೆ ಪ್ರತಿಕ್ರಿಯಿಸುವವರು ಮನೆಯಿಂದಲೇ ಪ್ರಶ್ನೆಗಳಿಗೆ ಉತ್ತರಿಸಲು ಸಾಧ್ಯವಾಗುತ್ತದೆ.

ಎರಡನೇ ಹಂತವಾದ ಜನಸಂಖ್ಯಾ ಗಣತಿ (ಕಇ), ಮನೆಯಲ್ಲಿ ವಾಸಿಸುವ ಪ್ರತಿಯೊಬ್ಬ ವ್ಯಕ್ತಿಯ ಬಗ್ಗೆ ಜನಸಂಖ್ಯಾ, ಸಾಮಾಜಿಕ–ಆರ್ಥಿಕ, ಸಾಂಸ್ಕೃತಿಕ ಮತ್ತು ಇತರ ವೈಯಕ್ತಿಕ ಮಾಹಿತಿಯನ್ನು ಸಂಗ್ರಹಿಸುತ್ತದೆ. ಮೊದಲ ಬಾರಿಗೆ, ಜಾತಿ ಗಣತಿಯು ಜನಗಣತಿ ಆಯಾಮದ ಭಾಗವಾಗಲಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾನುವಾರ ಕೇಂದ್ರ ಗೃಹ ಕಾರ್ಯದರ್ಶಿ, ರಿಜಿಸ್ಟ್ರಾರ್ ಜನರಲ್ ಮತ್ತು ಭಾರತದ ಜನಗಣತಿ ಆಯುಕ್ತ ಮೃತ್ಯುಂಜಯ್ ಕುಮಾರ್ ನಾರಾಯಣ್ ಮತ್ತು ಇತರ ಹಿರಿಯ ಅಧಿಕಾರಿಗಳೊಂದಿಗೆ ಜನಗಣತಿಯ ಸಿದ್ಧತೆಗಳನ್ನು ಪರಿಶೀಲಿಸಿದರು.

## ಮಾಜಿ ಸಿಎಂ ವಿಜಯ್ ರೂಪಾನಿ ಅಂತ್ಯಕ್ರಿಯೆ

ಆಸ್ಪತ್ರೆಯಲ್ಲಿದ್ದ ರೂಪಾನಿ ಅವರ ಪಾರ್ಥಿವ ಶರೀರವನ್ನು ಹೊತ್ತೊಯ್ಯುವ ವಾಹನಕ್ಕೆ 2,000 ಕೆ.ಜಿ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು ಮತ್ತು ಮೃತದೇಹದ ಮೇಲೆ ತ್ರಿವರ್ಣ ಧ್ವಜ ಹೊದಿಸಲಾಗಿತ್ತು.

ಜೂನ್ 12ರಂದು ಲಂಡನ್‌ಗೆ ಹಾರುತ್ತಿದ್ದ ಏರ್ ಇಂಡಿಯಾ ಬೋಯಿಂಗ್ 787–8 ಡ್ರೀಮ್‌ಲೈನರ್ ವಿಮಾನ ಅವಘಡದಲ್ಲಿ ಸಾವನ್ನಪ್ಪಿದ 241 ಪ್ರಯಾಣಿಕರ ಪೈಕಿ ರೂಪಾನಿ ಕೂಡಾ ಒಬ್ಬರು. ಡಿಎನ್‌ಎ ಪರೀಕ್ಷೆ ಮೂಲಕ ಅವರ ಮೃತದೇಹವನ್ನು ಪತ್ತೆ ಮಾಡಿರುವ ಕುರಿತು ನಿನ್ನೆ ಆಸ್ಪತ್ರೆ ಅಧಿಕಾರಿಗಳು ದೃಢಪಡಿಸಿದ್ದರು.

ಅಧಿಕೃತ ಹೇಳಿಕೆಯಲ್ಲಿ, ರಾಜ್ಯ ಸರ್ಕಾರವು ವಿಜಯ್‌ಭಾಯ್ ರೂಪಾನಿ ಅವರನ್ನು ಕೇವಲ ರಾಜಕೀಯ ವ್ಯಕ್ತಿಯಾಗಿ ಮಾತ್ರವಲ್ಲದೆ, ಸಮಗ್ರತೆ, ಸಹಾನುಭೂತಿ ಮತ್ತು ಸಾರ್ವಜನಿಕ ಕಲ್ಯಾಣಕ್ಕಾಗಿ ಅಚಲ ಸಮರ್ಪಣೆಗೆ ಹೆಸರುವಾಸಿಯಾದ ನಾಯಕರಾಗಿದ್ದರು ಎಂದು ಸ್ಮರಿಸಿದೆ.

## ಬಲದಿಂದ ಅಧಿಕಾರಕ್ಕೆ ಬರಲ್ಲ: ಚಲುವರಾಯಸ್ವಾಮಿ

ಜಾಸ್ತಿ ಮಾಡಿಕೊಂಡಿದ್ದೇವೆ. ಕುಮಾರಸ್ವಾಮಿ ಆರೋಗ್ಯದ ಬಗ್ಗೆ ಯಾರು ಮಾತಾಡಿಲ್ಲ. ಅವರನ್ನು ಯಾರು ಕಾಂಗ್ರೆಸ್‌ಗೆ ಕರೆದಿಲ್ಲ. ಕುಮಾರಸ್ವಾಮಿ ಅರೋಗ್ಯ ಚೆನ್ನಾಗಿ ಇರಲಿ. ಆರೋಗ್ಯಕ್ಕೂ ಪಕ್ಷಕ್ಕೂ ಸಂಬಂಧವಿಲ್ಲ. ಅವರ ತಂದೆ ಸಕ್ರಿಯವಾಗಿ ಇದ್ದಾರೆ. ಹೀಗಿದ್ರು ರಾಜ್ಯದಲ್ಲಿ ಜೆಡಿಎಸ್ ಶಕ್ತಿ ಕ್ಷೀಣವಾಗಿದೆ ಎಂದು ತಿಳಿಸಿದ್ದಾರೆ.

ನಿಖಿಲ್ ಕುಮಾರಸ್ವಾಮಿ ನೇತೃತ್ವದ ಪಕ್ಷ ಕಟ್ಟುತ್ತೇನೆ ಎಂದರೆ ಕಟ್ಟಲಿ. ರೇವಣ್ಣ, ಸೂರಜ್, ಪ್ರಜ್ವಲ್ ಯಾರ ನೇತೃತ್ವದಲ್ಲಿ ಬೇಕಾದರೂ ಪಕ್ಷ ಕಟ್ಟಲಿ. ಅದು ಅವರ ಪಕ್ಷದ ವಿಚಾರ. ಅವರಲ್ಲಿ ಆ ಕುಟುಂಬ ಹೇಳಿದ್ದೇ ನಡೆಯೋದು. ಕುಮಾರಸ್ವಾಮಿ ಅವರಿಗೆ ಕಾಂಗ್ರೆಸ್‌ನ್ನು ಟೀಕೆ ಮಾಡುವ ನೈತಿಕತೆ ಇಲ್ಲ. ಕುಮಾರಸ್ವಾಮಿ ಯಾವ ಗ್ಯಾರಂಟಿ ಕೊಡೋಕೆ ಆಗಲಿಲ್ಲ. ಕುಮಾರಸ್ವಾಮಿ ಸಾಲಮನ್ನಾ ಮಾಡಿದ್ದು, ಇನ್ನೂ 8 ಸಾವಿರ ಕೋಟಿ ರೂ. ಬಾಕಿ ಇದೆ ಎಂದು ಕಿಡಿಕಾರಿದ್ದಾರೆ.

ಸಿದ್ದರಾಮಯ್ಯ ಅವರು ಘೋಷಣೆ ಮಾಡಿದ್ರೆ, ಅದೇ ವರ್ಷ ಜಾರಿ ಮಾಡ್ತೇವೆ. ಅವರು ಯಾವ ನೈತಿಕತೆಯಿಂದ ನಮ್ಮ ಪಕ್ಷವನ್ನ ಟೀಕೆ ಮಾಡ್ತಾರೆ ಗೊತ್ತಿಲ್ಲ. ನಮ್ಮ ಪಕ್ಷ ಸದೃಢವಾಗಿದೆ. ನಮ್ಮ ನಾಯಕತ್ವ ಗಟ್ಟಿಯಾಗಿದೆ. ಜೆಡಿಎಸ್ ರಾಮನಗರದಲ್ಲಿ ಝೀರೋ ಲೆವೆಲ್‌ಗೆ ಬಂದಿದೆ. ತಮ್ಮ ಮಗನನ್ನ ಗೆಲ್ಲಿಸಿಕೊಳ್ಳುವ ಸ್ಥಿತಿಗೆ ಬಂದಿದ್ದಾರೆ. ಜೆಡಿಎಸ್‌ಗೆ ಹಿನ್ನಡೆ ಆಗಿದೆ. ಕುಮಾರಸ್ವಾಮಿ ಅಸ್ಥಿತ್ವ ಉಳಿಸಿಕೊಳ್ಳೋಕೆ ಮಾತಾಡ್ತಾರೆ ಅಷ್ಟೆ. ಎಂದು ತಿರುಗೇಟು ನೀಡಿದ್ದಾರೆ.

ಬೆಲೆ ಏರಿಕೆ ಮಾಡಿ ಗ್ಯಾರಂಟಿ ಕೊಡೋದಾಗಿದ್ರೆ ನಾನು ಕೊಡ್ತಿದ್ದೆ ಎಂಬ ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಟೀ ಅಂಗಡಿ, ಬಟ್ಟೆ ಅಂಗಡಿ ಎಲ್ಲದ್ರಲ್ಲೂ ಪ್ರತಿ ವರ್ಷ ಜಾಸ್ತಿ ಮಾಡ್ತಾರೆ. ಸಂಬಳ ಜಾಸ್ತಿ ಮಾಡಿದ್ದೇವೆ. ಬೆಲೆ ಏರಿಕೆ ಮಾಡದೇ ಸರ್ಕಾರ ನಡೆಸಲು ಆಗುವುದಿಲ್ಲ. ಮನಮೋಹನ್ ಸಿಂಗ್ ಇದ್ದಾಗ ಪೆಟ್ರೋಲ್, ಡಿಸೇಲ್ ಎಷ್ಟಿತ್ತು? ಈಗ ಎಷ್ಟಾಗಿದೆ. ಏನಾದ್ರು ಟೀಕೆ ಮಾಡೋದಾದ್ರೆ ಮಾಹಿತಿ ಇಟ್ಟುಕೊಂಡು ಟೀಕೆ ಮಾಡಿ. ಟೀಕೆ ಮಾಡಬೇಕೆಂದು ಟೀಕೆ ಮಾಡೋದು ಸರಿಯಲ್ಲ ಗುಡುಗಿದ್ದಾರೆ.

ಸರ್ಕಾರ ಮಾತು ಕೊಟ್ಟಂತೆ ಗ್ಯಾರಂಟಿ ಕೊಟ್ಟಿದ್ದೇವೆ. ಕುಮಾರಸ್ವಾಮಿ ಏನು ಮಾಡಿದ್ದಾರೆ ಹೇಳಲಿ. ಟ್ಯಾಕ್ಸ್ ಜಾಸ್ತಿ ಮಾಡಿರೋದು ರೊಟೀನ್ ವಿಷಯ. ಆಗಾಗ ಮಾಡ್ತಿರಬೇಕು. ಹಾಸನ, ಮಂಡ್ಯ, ರಾಮನಗರ ಏನು ಅಭಿವೃದ್ಧಿ ಆಗಿದೆ ಕುಮಾರಸ್ವಾಮಿ ಹೇಳಲಿ. ಅವರು ರಾಜಕೀಯ ಹಾಗೂ ಅಭಿವೃದ್ಧಿ ವಿಚಾರದಲ್ಲೂ ಅವರು ಹಿಂದೆ ಬಿದ್ದಿದ್ದಾರೆ. ಹೀಗಿರುವಾಗ ಕಾಂಗ್ರೆಸ್ ಅನ್ನು ಯಾಕೆ ಟೀಕೆ ಮಾಡ್ತಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಒಂದು ಪಕ್ಷವೇ ಕುಟುಂಬಕ್ಕೆ ಮಾಡಿಕೊಂಡಿರೋ ಪಕ್ಷ ಜೆಡಿಎಸ್. ಇಡೀ ಕುಟುಂಬ ಅವರ ಪಕ್ಷ ಆವರಿಸಿಕೊಂಡಿದೆ. ಅವರ ಮನೆಯಲ್ಲಿ ಎಷ್ಟು ಜನ ಇದ್ದಾರೆ ನಿಂತುಕೊಳ್ಳಿ. ನಮಗೇನು ಹೊಟ್ಟೆ ಉರಿ ಇಲ್ಲ ಅಂತ ಟಾಂಗ್ ಕೊಟ್ಟಿದ್ದಾರೆ.

# ಮೈಲೂರ ಭೇಟಿ ನೀಡಿದ ನಗರ ಸಭೆ ಪೌರಾಯುಕ್ತ ಶಿವರಾಜ ರಾಠೋಡ ರವರಿಗೆ ಮನವಿ



ಬೀದರ. ಜೂ. 16 : ಬೀದರ ನಗರದ ಮೈಲೂರ ಭೇಟಿ ನೀಡಿ ತುರ್ತಾಗಿ ಕೈಗೊಳಬೇಕಾದ ಕುಡಿಯುವ ನೀರಿನ ವ್ಯವಸ್ಥೆ, ರಸ್ತೆಗಳು , ಚರಂಡಿ ಕಾಮಗಾರಿಗಳ ಸ್ಥಳವನ್ನು ಪರಿಶೀಲನೆಗೆ ಬಂದಾಗ ನಗರ ಸಭೆ ಪೌರಾಯುಕ್ತ ಶಿವರಾಜ ರಾಠೋಡ ರವರಿಗೆ ಆರ್.ಪಿ.ಐ ಅಂಬೇಡ್ಕರ್ ಪಕ್ಷದ ರಾಜ್ಯಾಧ್ಯಕ್ಷ ಮಹೇಶ ಗೋರನಾಳಕರ್ ಶಾಲು ಹೊದಿಸಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಪುಸ್ತಕ ನೀಡಿ ಸನ್ಮಾನ ಮಾಡಿ ಓಣಿಯಲ್ಲಿ ಚರಂಡಿ ಇಲ್ಲದೆ ಮನೆಗಳಲ್ಲಿ ನೀರು ಬರುತ್ತಿವೆ, ರಸ್ತೆಗಳು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಬಹಳಷ್ಟು ಸಮಸ್ಯಗಳು ಆಗುತ್ತಿವೆ. ಕೂಡಲೇ ಈ ಕೆಳಕಂಡ ಕಾಮಗಾರಿಗಳು ಕೈಗೆತಿಕೊಳ್ಳಲು ಮನವಿ ಮಾಡಿದರು.

ಮಹೇಶ ಗೋರನಾಳಕರ್ ಮನೆಯಿಂದ ಅಂಬರೀಶ್ ಕುದರೆ ಮನೆಯವರೆಗೆ 120 ಮೀಟರ್ ಚರಂಡಿ ನಿರ್ಮಾಣ, ದೇವೇಂದ್ರ ನರನಾಳ ರವರ ಮನೆಯಿಂದ ಮುತ್ತಲು ಚೆನಗೆಪಲ್ಲಿ ಮನೆಯವರೆಗೆ 70 ಮೀಟರ್ ಸಿ.ಸಿ ರಸ್ತೆ, ಕಾಶಿನಾಥ ಬಡಿಗೇರ ಮನೆಯಿಂದ ಮೆಹಬೂಬ್ ಮನೆಯವರೆಗೆ 50 ಮೀಟರ್ ಸಿ.ಸಿ ರಸ್ತೆ ನಿರ್ಮಾಣ, ಲಲೀತಾ ಪಂಡರಿ ಮನೆಯಿಂದ ಮಾರುತಿ ಅಮೃತ ಮನೆಯವರೆಗೆ 25 ಮೀಟರ್ ಸಿ.ಸಿ ರಸ್ತೆ ನಿರ್ಮಾಣ, ಸಿ.ಎಂ.ಸಿ ಕಾಲೋನಿಯಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇದಕ್ಕೆ ಸ್ಪಂದಿಸಿದ ಪೌರಾಯುಕ್ತರಾದ ಶಿವರಾಜ ರಾಠೋಡ ರವರು ಆದಷ್ಟು ಬೇಗ ಕಾಮಗಾರಿಗಳು ಕೈಗೆತಿಕೊಳ್ಳಲಾಗುವುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಸಭೆ ಇಂಜಿನಿಯರ್ ಖಾದ್ರಿ ಸರ್, ನಾಗೇಶ ಸರ್

ಹಾಗೂ ಸ್ಥಳಿಯ ಮುಖಂಡರಾದ ಮೊಹಮ್ಮದ್ ಖಾಜಾ, ದೇವೇಂದ್ರ ನರನಾಳ ಇನಿತರರು ಉಪಸ್ಥಿತರಿದ್ದರು.

# ಸಿದ್ದರಾಮಯ್ಯನವರೇ ಐದೂ ವರ್ಷ ಮುಖ್ಯಮಂತ್ರಿ: ಸಚಿವ ಮಹಾದೇವಪ್ಪ

ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ:ಜೂ.16: ರಾಜ್ಯದಲ್ಲಿ ಸೆಪ್ಟೆಂಬರ್ ನಂತರ ಸಿಎಂ ಬದಲಾವಣೆ ಆಗುತ್ತದೆ ಎಂದು ಎಚ್. ವಿಶ್ವನಾಥ ಅವರಿಗೆ ನಮ್ಮ ಹೈಕಮಾಂಡ್ ಆ ರೀತಿ ಯಾವಾಗ ಹೇಳಿದ್ದಾರೋ ಗೊತ್ತಿಲ್ಲ, ಸಿಎಂ ಬದಲಾವಣೆ ಪ್ರಸ್ತಾವನೆ ಸರಕಾರದ ಮುಂದೆ ಇಲ್ಲ, ಸಿದ್ದರಾಮಯ್ಯನವರೇ ಐದೂ ವರ್ಷ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವ ಡಾ.ಎಚ್.ಸಿ.ಮಹಾದೇವಪ್ಪ ಹೇಳಿದ್ದಾರೆ.



ನಗರದ ಐವಾನ್ ಇ ಶಾಹಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, ಜನಾಶೀರ್ವಾದದಿಂದ ಅಧಿಕಾರಕ್ಕೆ ಬಂದಿರುವ ನಮ್ಮ ಸರಕಾರದ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯನವರೇ ಇರಲಿದ್ದಾರೆ ಎಂದು ಪುನರುಚ್ಚರಿಸಿದರು.

ಆರ್‌ಸಿಬಿ ವಿಜಯೋತ್ಸವದಲ್ಲಿ ಕಾಲ್ತುಳಿದಿಂದಾಗಿ 11 ಮಂದಿ ಸಾವಿಗೀಡಾಗಿದ್ದಾರೆ, ಇದು ಆಗಬಾರದಿತ್ತು, ಇದರಿಂದ ಸರಕಾರಕ್ಕೆ ನೋವುಂಟಾಗಿದೆ, ಆದರೆ ಬಿಜೆಪಿಗರು ಇದರಲ್ಲಿ ರಾಜಕಾರಣ ಮಾಡುತ್ತಿರುವುದು ಸರಿಯಲ್ಲ, ಘಟನೆಗೆ ಲೋಪದೋಷ ಕಂಡುಹಿಡಿಯಲು ಕಮಿಷನ್ ನೇಮಕ ಮಾಡಲಾಗಿದೆ, ಸಂಪೂರ್ಣ ತನಿಖೆಯಾಗಬೇಕಾಗಿದೆ ಅಂತಹದಲ್ಲಿ ರಾಜಕೀಯ ಮಾಡುವುದು ಬಿಜೆಪಿಗರ ಮೂರ್ಖತನ ಎಂದರು.

ಕಾಲ್ತುಳಿತದಂತಹ ಘಟನೆಗಳು ಅಲ್ಲಲ್ಲಿ ನಡೆದಿವೆ, ಮೊನ್ನೆ ಮೊನ್ನೆ ವಿಮಾನದುರಂತವಾಗಿ 250ಕ್ಕೂ ಹೆಚ್ಚು ಜನ ಸಾವಿಗೀಡಾದ ಘಟನೆ ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆದಿದೆ, ಹೆಲಿಕಾಪ್ಟರ್ ಪತನವಾಗಿ 6ಕ್ಕೂ ಹೆಚ್ಚು ಜನ ಮೃತಪಟ್ಟಿರುವ ಘಟನೆ ಇಂದೇ (ರವಿವಾರ) ಬೆಳಕಿಗೆ ಬಂದಿದೆ. ಇದೆಲ್ಲವನ್ನು ಮುಂದಿಟ್ಟುಕೊಂಡು ನಾವು ಪ್ರಧಾನಿಯವರು ರಾಜೀನಾಮೆ ಕೇಳಿದ್ದೀವಾ? ಇಂತಹದರಲ್ಲಿ ರಾಜಕೀಯ ಬೆರೆಸಬಾರದು ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಯಾವುದೇ ದೇಶದಲ್ಲಿ ವ್ಯಕ್ತಿಪೂಜೆ ಹೆಚ್ಚಾದಾಗ ಸರ್ವಾಧಿಕಾರದತ್ತ ದೇಶ ಸಾಗುತ್ತದೆ, ಇದಕ್ಕೆ ಸಾಕಷ್ಟು ಉದಾಹರಣೆಗಳಿವೆ. ಆ ನಿಟ್ಟಿನಲ್ಲಿ ಪ್ರಜಾಪ್ರಭುತ್ವದ ಬಲವರ್ಧನೆಗೆ ಕಾಂಗ್ರೆಸ್ ಪಕ್ಷದಿಂದ ಇತ್ತೀಚೆಗೆ 2500 ಕಿ.ಮಿ.ನಷ್ಟು ಉದ್ದದ ಮಾನವ ಸರಪಳಿ ನಿರ್ಮಿಸಿ ಸುಮಾರು 25 ಲಕ್ಷಕ್ಕೂ ಹೆಚ್ಚು ಜನ ಸೇರಿಸಿ ಸಂವಿಧಾನದ ಜಾಗೃತಿ ಮಾಡಲಾಗಿದೆ. ಇದೇ ಜಾಗೃತಿ ಮಾಡುವ ಮತ್ತು ಸಂವಿಧಾನದ ಮೂಲಕ ಸಮೃದ್ಧ ಭಾರತ ಕಟ್ಟುವ ಕೆಲಸ ಬುದ್ಧನು ಬಿಕ್ಕುಗಳಿಂದ, ಬಸವಣ್ಣ ವಚನಗಳ ಮೂಲಕ ಮತ್ತು ಡಾ. ಬಾಬಾಸಾಹೇಬ್ ಅಂಬೇಡ್ಕರರು ಸಂವಿಧಾನದ ಮೂಲಕ ಮಾಡಿದ್ದಾರೆ. ಇದನ್ನು ನಾವು ಮುಂದುವರಿಸುತ್ತೇವೆ. ವ್ಯಕ್ತಿ ಪೂಜೆಗಿಂತ ದೇಶ ಸೇವೆ ಶ್ರೇಷ್ಟ ಎನ್ನವುದು ಜನರಲ್ಲಿ ಬರಬೇಕಿದೆ ಎಂದರು.

ರಾಜ್ಯ ಸರಕಾರ 2013ರಲ್ಲಿ 160 ಕೋಟಿ ರೂ. ವ್ಯಯಮಾಡಿ ಜಾತಿಜನಗಣತಿ ಮಾಡಲಾಗಿದೆ, ಈ ಗಣತಿಯಿಂದ ಹಿಂದುಳಿದವರನ್ನು ಸೇರಿಸಿಕೊಳ್ಳುವುದಕ್ಕೆ ಸರಕಾರ 90 ದಿನಗಳ ಸಮಯ ನಿಗದಿ ಮಾಡಿದೆ, ಇದರಿಂದ ಯಾವುದೇ ಸಮುದಾಯದ ಸಂಖ್ಯೆ ಹೆಚ್ಚು ಕಡಿಮೆ ಮಾಡಲು ಅಲ್ಲ ಸದ್ಯದಲ್ಲಿರುವ ನಿಗದಿತ ದತ್ತಾಂಶ ಸಂಗ್ರಹ ಮಾಡುವುದು ಸರಕಾರದ ಜವಾಬ್ದಾರಿಯಾಗಿದೆ ಎಂದು ಮಾರ್ಮಿಕವಾಗಿ ಹೇಳಿದರು.

ಸಂವಿಧಾನ ಮತ್ತು ಸರಕಾರದ ಮೇಲೇ ಇಲ್ಲಸಲ್ಲದ ಆರೋಪಗಳು ಮಾಡಿ ಪದೇ ಪದೇ ರಾಜೀನಾಮೇ ಕೇಳಿತ್ತಿರುವ ಬಿಜೆಪಿ ತನ್ನ ಚೈಲ್ಡಿಸ್ಟ್ ಬುದ್ಧಿ ಪ್ರದರ್ಶನ ಮಾಡುತ್ತಿರುವುದು ಜನರ ಮುಂದೆ ಬಯಲಾಗಿದೆ ಎಂದರು.

ಈ ಸಂದರ್ಭದಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ, ಜಗದೇವ ಗುತ್ತೇದಾರ, ತಿಪ್ಪಣ್ಣಪ್ಪ ಕಮಕನೂರ, ಡಿ.ಜಿ. ಸಾಗರ ಸೇರಿದಂತೆ ಮತ್ತಿತರರ ಇದ್ದರು.

# ಹೊಸ ವಕ್ಫ್ ಕಾಯ್ದೆ ಮೂಲಕ ಮುಸ್ಲಿಮರ ಧಾರ್ಮಿಕ ಹಕ್ಕು ಕಬಳಿಸುವ ಹುನ್ನಾರ: ಮೌಲಾನಾ ರಹಮಾನಿ ಆರೋಪ

ಮಲ್ಲಮ್ಮ ನುಡಿ ವಾರ್ತೆ
ಬೀದರ. ಜೂ. 16 : ದೇಶದ ಸಂವಿಧಾನ ಹಾಗೂ ನಮ್ಮ ಧಾರ್ಮಿಕ ಹಕ್ಕನ್ನು ಕಬಳಿಸುವ 2025ನೇ ಸಾಲಿನ ವಕ್ಫ್ ಕಾಯಿದೆ ವಿರೂದ್ಧ ನಮ್ಮ ಹೋರಾಟ ಅಚಲವಾಗಿದೆ ಎಂದು ಅಖಿಲ ಭಾರತೀಯ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿ (ಎ.ಐ.ಎಮ್.ಪಿ.ಎಲ್.ಬಿ) ಕಾರ್ಯದರ್ಶಿ ಮೌಲಾನಾ ಉಮರೇನ್ ಮಹಫೋಜ್ ರಹಮಾನಿ ತಿಳಿಸಿದರು.



ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ವಕ್ಸ್ ಕಾಯ್ದೆಗೆ ತಿದ್ದುಪಡಿಗಳು ತಾರತಮ್ಯದಿಂದ ಕೂಡಿದ್ದು, ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗಿದೆ ಮತ್ತು ಮುಸ್ಲಿಂ ವಕ್ಸ್ ಆಸ್ತಿಗಳನ್ನು ಕಬಳಿಸುವ ಮತ್ತು ನಾಶಮಾಡುವ ಪಿತೂರಿಯ ಭಾಗವಾಗಿದೆ ಎಂದರು. ತನ್ನ ಸಂಖ್ಯಾ ಬಲವನ್ನು ಬಳಸಿಕೊಂಡು, ಆಡಳಿತ ಪಕ್ಷವು ದೇಶದ ಲಕ್ಷಾಂತರ ಮುಸ್ಲಿಮರು, ಅಲ್ಪಸಂಖ್ಯಾತರು ಮತ್ತು ನ್ಯಾಯವನ್ನು ಪ್ರೀತಿಸುವ ನಾಗರಿಕರ ಇಚ್ಛೆಗೆ ವಿರುದ್ಧವಾಗಿ ವಕ್ಸ್ ಕಾಯ್ದೆಗೆ ಅನಿಯಂತ್ರಿತ, ತಾರತಮ್ಯದ ತಿದ್ದುಪಡಿಗಳನ್ನು ಅಂಗೀಕರಿಸಿದೆ. ನಾವು ಈ ತಿದ್ದುಪಡಿಗಳನ್ನು ಸಂಪೂರ್ಣವಾಗಿ ತಿರಸ್ಕರಿಸುವುದಾಗಿ ತಿಳಿಸಿದ ಅವರು, ಈ ತಿದ್ದುಪಡಿಗಳು ಭಾರತೀಯ ಸಂವಿಧಾನದ 14, 15, 25, 26 ಮತ್ತು 29 ನೇ ವಿಧಿಗಳ ಅಡಿಯಲ್ಲಿ ಖಾತರಿಪಡಿಸಲಾದ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸುವುದಲ್ಲದೆ, ವಕ್ಸ್ ಆಸ್ತಿಗಳ ಆಡಳಿತದ ಮೇಲೆ ಸಂಪೂರ್ಣ ನಿಯಂತ್ರಣ ಸಾಧಿಸುವ ಸರ್ಕಾರದ ದುರುದ್ದೇಶಪೂರಿತ ಉದ್ದೇಶವನ್ನು ಬಹಿರಂಗಪಡಿಸುತ್ತವೆ ಎಂದು ನಾವು ಸ್ಪಷ್ಟಪಡಿಸಲು ಬಯಸುವುದಾಗಿ ತಿಳಿಸಿದರು.

ಈ ತಿದ್ದುಪಡಿಗಳು ಮುಸ್ಲಿಂ ಅಲ್ಪಸಂಖ್ಯಾತರು ತಮ್ಮದೇ ಆದ ಧಾರ್ಮಿಕ ದತ್ತಿಗಳನ್ನು (ವಕ್ಸ್) ಮುಕ್ತವಾಗಿ ನಿರ್ವಹಿಸುವುದನ್ನು ತಡೆಯುತ್ತದೆ. ಭಾರತೀಯ ಸಂವಿಧಾನದ 25 ಮತ್ತು 26 ನೇ ವಿಧಿಗಳು ಆತ್ಮಸಾಕ್ಷಿಯ ಸ್ವಾತಂತ್ರ್ಯ ಮತ್ತು ಧರ್ಮವನ್ನು ಪ್ರತಿಪಾದಿಸುವ, ಆಚರಿಸುವ ಮತ್ತು ಪ್ರಚಾರ ಮಾಡುವ ಹಕ್ಕನ್ನು ಹಾಗೂ ಧಾರ್ಮಿಕ ಮತ್ತು ದತ್ತಿ ಸಂಸ್ಥೆಗಳನ್ನು ಸ್ಥಾಪಿಸುವ ಮತ್ತು ನಿರ್ವಹಿಸುವ ಹಕ್ಕನ್ನು ಖಾತರಿಪಡಿಸುತ್ತವೆ. ಹೊಸದಾಗಿ ಜಾರಿಗೆ ತಂದ ಕಾನೂನು ಮುಸ್ಲಿಮರಿಂದ ಈ ಮೂಲಭೂತ ಹಕ್ಕುಗಳನ್ನು ಕಸಿದುಕೊಳ್ಳುತ್ತದೆ ಎಂದರು.

ಕೇಂದ್ರ ವಕ್ಸ್ ಮಂಡಳಿ ಮತ್ತು ರಾಜ್ಯ ವಕ್ಸ್ ಮಂಡಳಿಗಳಿಗೆ ಸದಸ್ಯರ ಆಯ್ಕೆಗೆ ಸಂಬಂಧಿಸಿದ ತಿದ್ದುಪಡಿಗಳು ಇದಕ್ಕೆ ಸ್ಪಷ್ಟ ಉದಾಹರಣೆಯಾಗಿದೆ. ಇದಲ್ಲದೆ, ವಾಕಿಫ್ (ದಾನಿ) ಐದು ವರ್ಷಗಳ ಕಾಲ ಧರ್ಮವನ್ನು ಆಚರಿಸುವ ಮುಸ್ಲಿಂ ಆಗಿರಬೇಕೆಂಬ ಷರತ್ತು ಭಾರತೀಯ ಕಾನೂನು ಚೌಕಟ್ಟು ಮತ್ತು ಸಾಂವಿಧಾನಿಕ ವಿಧಿಗಳು 14 ಮತ್ತು 26 ರ ವಿರುದ್ಧ ಮಾತ್ರವಲ್ಲದೆ ಇಸ್ಲಾಮಿಕ್ ಶರಿಯಾ ತತ್ವಗಳೊಂದಿಗೆ ಸಂಘರ್ಷಿಸುತ್ತದೆ ಎಂದರು.

ಹಿಂದೂಗಳು, ಸಿಬ್ಬರು, ಕ್ರಿಶ್ಚಿಯನ್ನರು, ಜೈನರು ಮತ್ತು ಬೌದ್ಧರು ಮುಂತಾದ ಧಾರ್ಮಿಕ ಸಮುದಾಯಗಳು ತಮ್ಮ ಧಾರ್ಮಿಕ ಆಸ್ತಿಗಳ ಮೇಲೆ ಕೆಲವು ಹಕ್ಕುಗಳು ಮತ್ತು ರಕ್ಷಣೆಗಳನ್ನು ಅನುಭವಿಸುತ್ತಿದ್ದರೂ, ಈ ತಿದ್ದುಪಡಿಗಳ ಮೂಲಕ ಮುಸ್ಲಿಮರು ಅದೇ ಹಕ್ಕುಗಳಿಂದ ವಂಚಿತರಾಗಿದ್ದಾರೆ ಎಂದು ಹೇಳಿದರು. ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯು ವಿವಿಧ ಧಾರ್ಮಿಕ ಮತ್ತು ಸಮುದಾಯ ಸಂಘಟನೆಗಳು ಮತ್ತು ಮುಸ್ಲಿಂ ಬುದ್ಧಿಜೀವಿಗಳೊಂದಿಗೆ ಸಂಸತ್ತು ಸ್ಥಾಪಿಸಿದ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಮುಂದೆ ಈ ತಿದ್ದುಪಡಿಗಳನ್ನು ವಿರೋಧಿಸಿ ಮೌಖಿಕ ಮತ್ತು ಲಿಖಿತ ಪ್ರಾತಿನಿಧ್ಯಗಳನ್ನು ನೀಡಿತು. ಹೆಚ್ಚುವರಿಯಾಗಿ, ದೇಶಾದ್ಯಂತ 50 ಮಿಲಿಯನ್ ಮುಸ್ಲಿಮರು ಈ ಬದಲಾವಣೆಗಳನ್ನು ಸಂಪೂರ್ಣವಾಗಿ ತಿರಸ್ಕರಿಸಿ ಜೆಪಿಸಿ ಅಧ್ಯಕ್ಷರಿಗೆ ಇಮೇಲ್‌ಗಳನ್ನು ಕಳುಹಿಸಿದರು. ಇದರ ಹೊರತಾಗಿಯೂ, ಮತ್ತು ಪ್ರಜಾಪ್ರಭುತ್ವ ಮತ್ತು ಸಂಸದೀಯ ಮಾನದಂಡಗಳನ್ನು ಧಿಕ್ಕರಿಸಿ, ಆಕ್ಷೇಪಣೆಗಳನ್ನು ನಿರ್ಲಕ್ಷಿಸಲಾಯಿತು ಎಂದವರು ಹೇಳಿದರು. ಅಂತಿಮ ಮಾರ್ಗವಾಗಿ, ನಾವು ಈ ತಿದ್ದುಪಡಿಗಳನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದ್ದೇವೆ ಮತ್ತು ಈಗ ನಾವು ಈ ವಿಷಯವನ್ನು ಜನರ ನ್ಯಾಯಾಲಯಕ್ಕೂ ಕೊಂಡೊಯ್ಯುತ್ತಿದ್ದೇವೆ. ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿಯು ಈ ನಿಟ್ಟಿನಲ್ಲಿ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಿದೆ ಮತ್ತು ಮೂರು ತಿಂಗಳ ಶಾಂತಿಯುತ ಅಭಿಯಾನವನ್ನು ರೂಪಿಸಿದೆ, ಇದನ್ನು ದೇವರು ಬಯಸಿದರೆ, ಪೂರ್ಣ ಶಕ್ತಿ ಮತ್ತು ಪ್ರಾಮಾಣಿಕತೆಯಿಂದ ಹೋರಾಟ ಹಮ್ಮಿಕೊಳ್ಳಲಾಗುವುದು. ನಮ್ಮ ರಾಜ್ಯ ಸಮಿತಿಯು ರಾಜ್ಯವ್ಯಾಪಿ ಕಾರ್ಯಕ್ರಮವನ್ನು ಚರ್ಚಿಸಿದ ಮತ್ತು ಆಯೋಜಿಸುತ್ತಿದೆ. ರಾಜ್ಯದ ಎಲ್ಲಾ ಅಲ್ಪಸಂಖ್ಯಾತ ಮತ್ತು ಧಾರ್ಮಿಕ ಸಮುದಾಯಗಳು, ಪ್ರಮುಖ ಧಾರ್ಮಿಕ ಮತ್ತು ರಾಜಕೀಯ ನಾಯಕರು ಮತ್ತು ನಾಗರಿಕ ಸಮಾಜದ ಪ್ರಮುಖ ಸದಸ್ಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ. ಇಡೀ ಕಾರ್ಯಕ್ರಮವು ಶಾಂತಿಯುತವಾಗಿ ಮತ್ತು ಸಂವಿಧಾನ ಮತ್ತು ಕಾನೂನಿನ ಮಿತಿಯೊಳಗೆ ಇರುತ್ತದೆ. ಜುಲೈವರೆಗೆ ಮೇಲಿನ ಈ ಎಲ್ಲ ಹೋರಾಟಗಳು ನಡೆಯಲಿದ್ದು, ಸರ್ಕಾರ ಈ ಕಾನೂನು ಹಿಂಪಡೆಯದಿದ್ದರೆ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ಮಾಡುವುದಾಗಿ ರಹಮಾನಿ ಎಚ್ಚರಿಸಿದರು.

ಆಲ್ ಇಂಡಿಯಾ ಮಿಲ್ಲಿ ಕೌನ್ಸಿಲ್ ಕರ್ನಾಟಕದ ಅಧ್ಯಕ್ಷ ಸುಲೇಮಾನ್ ಖಾನ್, ಶಾಹೀನ್ ಸಮೂಹ ಶಿಕ್ಷಣ ಸಂಸ್ಥೆ ಅಧ್ಯಕ್ಷರು ಹಾಗೂ ಅಖಿಲ ಭಾರತೀಯ ಮುಸ್ಲಿಮ್ ವಯಕ್ತಿಕ ಕಾನೂನು ಮಂಡಳಿಯ ಆಡಳಿತ ಮಂಡಳಿಯ ಸದಸ್ಯರಾದ ಡಾ.ಅಬ್ದುಲ್ ಖದೀರ್ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿದ್ದರು.

ವೈಭವದಿಂದ ಜರುಗಿದ ಎರಡನೇ ಪುಣ್ಯಾರಾಧನೆ ಕಾರ್ಯಕ್ರಮ

# ದಾಸೋಹ ಮೂರ್ತಿ ಲಿಂಗೈಕ್ಯ ಚನ್ನಮಲ್ಲೇಶ್ವರ ತ್ಯಾಗಿಗಳ ಕೊಡುಗೆ ಅಪಾರ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಚನ್ನಮಲ್ಲೇಶ್ವರ ತ್ಯಾಗಿಗಳು ಘೋರ ತಪಸ್ಸು ಮಾಡಿ ದಿವ್ಯ ಶಕ್ತಿ ಸಂಪಾದನೆ ಮಾಡಿದಂತಹ ಮಹಾನ ತ್ಯಾಗಿಯೆಂದು ತಾಲೂಕಿನ ಇಟಗಾ ಗ್ರಾಮದ ಶಿವಸಿದ್ಧ ಯೋಗಾಶ್ರಮದ ಶಾಖಾ ಮುಕ್ತಿ ಮಠದ ಪೀಠಾಧಿಪತಿಗಳಾದ ಶಿವಸಿದ್ಧ ಸೋಮೇಶ್ವರ ಶಿವಾಚಾರ್ಯರು ಲಿಂಗೈಕ್ಯ ಚನ್ನಮಲ್ಲೇಶ್ವರ ತ್ಯಾಗಿಗಳ 2ನೇಯ ಪುಣ್ಯಾರಾಧನೆ ಹಾಗೂ ಹಸಿರು ಹಬ್ಬ ಹಾಗೂ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಚನ್ನಮಲ್ಲೇಶ್ವರ ತ್ಯಾಗಿಗಳು ಧಾರ್ಮಿಕ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾ–ರೆ, ಸರ್ವ ಧರ್ಮ ಜನತೆಯ ಪ್ರೀತಿಯ ಸ್ವಾಮಿಗಳಾಗಿದ್ದರು. ಪ್ರತಿ ವರ್ಷ ತಮ್ಮ ಹುಟ್ಟು ಹಬ್ಬವನ್ನು ಹಸಿರು ಹಬ್ಬವನ್ನಾಗಿ ಆಚರಿಸಲು ಅದೇಶಿದಂತೆ ಪ್ರತಿ ವರ್ಷ ಪರಿಸರವಾದಿ ಶೈಲೇಂದ್ರ ಕಾವಡಿ ಅವರ ನೇತೃತ್ವದಲ್ಲಿ ಆಚರಿಸಲಾಗುತ್ತಿದೆ. ಸ್ವಾಮೀಜಿಗಳು ಪರಿಸರ ಸಂರಕ್ಷಣೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಶ್ರೀಮಠದಲ್ಲಿ 12 ಜ್ಯೋತಿರ್ಲಿಂಗ ಸ್ಥಾಪಿಸಿ ಭಕ್ತರಿಗೆ 12 ಜ್ಯೋತಿರ್ಲಿಂಗಗಳ ದರ್ಶನಕ್ಕೆ ಸಹಾಯವಾಗಿದೆ. ಆಶ್ರಮದಲ್ಲಿ ಹಗಲಿರಳು ಎನ್ನದೇ ಭಕ್ತರಿಗೆ ದಾಸೋಹ ವ್ಯವಸ್ಥೆ ಶ್ರೀ ಮಠದಿಂದ ಮಾಡುತ್ತಿದ್ದರು. ಇಲ್ಲಿನ ಭಕ್ತಾಧಿಗಳು ಲಿಂಗೈಕ್ಯ ಸ್ವಾಮೀಜಿಯವರಿಗೆ ದಾಸೋಹ ಮೂರ್ತಿ ಎಂದು ಹೆಸರು ಇಟ್ಟರು. ಪಂಚಪೀಠಾಧೀಶರನ್ನು ಶ್ರೀ ಮಠಕ್ಕೆ ಆಮಂತ್ರಿಸಿ ಅಡ್ಡ ಪಲ್ಲಕ್ಕಿ ಉತ್ಸವ ಮಾಡಿ, ಆಚಾರ್ಯ ತತ್ವಗಳನ್ನು ಪ್ರಚಾರ ಮಾಡಲು ಸಹಾಯವಾಗಿದೆ. ಇದೇ ಸಂದರ್ಭದಲ್ಲಿ ಪರಿಸರ ವಾಹಿನಿ ಬೀದರ್ ವತಿಯಿಂದ ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ ಏರ್ಪಡಿಸಿ ಹಿರಿಯ ನಾಗರಿಕರಿಗೆ ಹಾಗೂ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ ಸಹಾಯ ಮಾಡುತ್ತಿದ್ದಾರೆ. ಶೈಲೇಂದ್ರ ಕಾವಡಿ ಅವರ ಸೇವೆ ಅಮೋಘವಾಗಿದೆ ಎಂದರು. ಈ ಕಾರ್ಯಕ್ರಮಕ್ಕೆ ಶಾಸಕ ಡಾ. ಸಿದ್ದು ಪಾಟೀಲ್ ಆಗಮಿಸಿ ಲಿಂಗೈಕ್ಯ ಚನ್ನಮಲ್ಲೇಶ್ವರ ತ್ಯಾಗಿಗಳ ಗದ್ದುಗೆಗೆ ಮಾಲಾರ್ಪಣೆ ಮಾಡಿ ದರ್ಶನ ಪಡೆದರು. ಇದೇ ಸಂದರ್ಭದಲ್ಲಿ ಮುಕ್ತಿ ಮಠದ ಆವರಣದಲ್ಲಿ ಶಾಸಕರ ಅನುದಾನದಲ್ಲಿ ಸ್ಥಾಪಿಸಿರುವ ಹೈಮಾಸ್ಟ್ ದೀಪವನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಂಭುಲಿಂಗ ಶಿವಾಚಾರ್ಯರು, ಸಿದ್ದಯ್ಯಾ ಸ್ವಾಮಿ, ಮಲ್ಲಯ್ಯಾ ಶಾಸ್ತ್ರಿ, ಗ್ರಾಮ ಪಂಚಾಯತ್ ಅಧ್ಯಕ್ಷ ತೆಂಗೆಮ್ಮಾ ಶಾಂತವೀರ್, ಉಪಾಧ್ಯಕ್ಷೆ ಲಕ್ಷ್ಮಿ ನಾಗರಾಜ ಯಾಧವ, ಉಪ ವಲಯ ಅರಣ್ಯಾಧಿಕಾರಿ ವೀರಯ್ಯಾ ಪೂಜಾರಿ, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್, ಬಿಜೆಪಿ ಹಳ್ಳಿಖೇಡ್(ಕೆ) ಪಿಕೆಪಿಎಸ್ ಅಧ್ಯಕ್ಷ ಸಂತೋಷ್ ಪಾಟೀಲ್, ಇಂದ್ರಣ್ಣ ಮೈಲುರ್, ಅಣ್ಣೇಪ್ಪ ಇಸ್ಲಾಂಪುರ್, ರೇವಪ್ಪ ಪೊಲೀಸ್ ಪಾಟೀಲ್, ವೀರಶೆಟ್ಟಿ ಮಾಲಿ ಪಾಟೀಲ್, ಬಸವರಾಜ ಪೊಲೀಸ್ ಪಾಟೀಲ್, ಆನಂದಸಾಗರ್ ನಾರಾಯಣಪುರ್, ಶ್ರೀನಿವಾಸರೆಡ್ಡಿ, ಕಂಠಯ್ಯಾ ಸ್ವಾಮಿ, ಚಂದ್ರಕಾಂತ ನಾರಾಯಣಪುರ್, ಮಲ್ಲು ರೆಡ್ಡಿ, ಅಶೋಕ ಚೌದ್ರಿ, ಸಿದ್ದಪ್ಪ ವಾಲಿ, ಕಲಯ್ಯಾ ಸ್ವಾಮಿ, ರಾಜಕುಮಾರ ಉಪ್ಪಾರ, ರೇವಣಸಿದ್ದ ತಾಥಾ, ಹುಡಗಿ ಆಯುರ್ವೇದಿಕ್ ಆಸ್ಪತ್ರೆಯ ಡಾ. ಮೈನಕಾ ಇವರ ಮಾರ್ಗದರ್ಶನದಲ್ಲಿ ಹಾಗೂ ಡಾ. ಮಲ್ಲಿಕಾರ್ಜುನ ಇವರಿಂದ ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ತಪಾಸಣೆ ಮಾಡಿದರು. ಶೈಲೇಂದ್ರ ಕಾವಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮವನ್ನು ನೀಲಕಂಠ ಇಸ್ಲಾಂಪುರ್ ನಿರೋಪಿಸಿ ವಂದಿಸಿದರು. ಪುಣ್ಯಾರಾಧನೆ ಕಾರ್ಯಕ್ರಮ ಅಂಗವಾಗಿ ವಿಶೇಷ ಅನ್ನ ದಾಸೋಹ ಜರುಗಿತ್ತು.

# ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷ–ರಿಂದ ಮೂಲಭೂತ ಸೌಲಭ್ಯಗಳ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 16– ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶ್ರೀ ಕೆ. ನಾಗಣ್ಣ ಗೌಡ ಅವರು ರಾಯಚೂರು ನಗರದ ವಿವಿಧ ಸರ್ಕಾರಿ ಶಾಲೆ, ಖಾಸಗಿ ಶಾಲೆ, ವಸತಿ ನಿಲಯ ಹಾಗೂ ಆಸ್ಪತ್ರೆಗಳಿಗೆ ಜೂನ್ 16ರಂದು ಭೇಟಿ ನೀಡಿ ಮಕ್ಕಳ ಸುರಕ್ಷತೆ ಮತ್ತು ಮಕ್ಕಳಿಗೆ ಮೂಲಭೂತ ಸೌಲಭ್ಯಗಳ ಬಗ್ಗೆ ಪರಿಶೀಲಿಸಿದರು.

ಮೊದಲಿಗೆ ನಗರದ ವಿದ್ಯಾಭಾರತಿ ಆಂಗ್ಲ ಮಾಧ್ಯಮ ಸಿಬಿಎಸ್ಇ ಪ್ರೌಢಶಾಲೆಗೆ ಭೇಟಿ ನೀಡಿದ ಅವರು, ಮಕ್ಕಳ ಕುಂದುಕೊರತೆಗಳ ಬಗ್ಗೆ, ಶುಲ್ಕದ ವಿವರ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ ಅನುಷ್ಠಾನದ ಬಗ್ಗೆ ಪರಿಶೀಲಿಸಿದರು. ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜು, ವಸತಿ ನಿಲಯ ಹಾಗೂ ಇತರೆ ಸರ್ಕಾರಿ ಕಟ್ಟಡಗಳ ಭಾಗದಲ್ಲಿ ಮಕ್ಕಳ ಸಹಾಯವಾಣಿ 1098 ಮತ್ತು ಪೊಲೀಸ್ ಸಹಾಯವಾಣಿ –112 ಕಡ್ಡಾಯವಾಗಿ ಬರೆಯಿಸಬೇಕು, ಮಕ್ಕಳ ಹಕ್ಕುಗಳ, ಪೋ–ಕ್ಸೋ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆಗಳ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ನಂತರ ಬೋಳಮಾನ ದೊಡ್ಡಿ ಅಲ್ಪಸಂಖ್ಯಾತ ವಸತಿ ನಿಲಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಭೇಟಿ ನೀಡಿ ಮಕ್ಕಳಿಗೆ ನೀಡುತ್ತಿರುವ ಆಹಾರ ಸಾಮಗ್ರಿಗಳ ಗುಣಮಟ್ಟ, ಸ್ವಚ್ಚತೆ, ಕುಡಿಯುವ ನೀರಿನ ಸೌಲಭ್ಯಗಳ ಕುರಿತು ಪರಿಶೀಲಿಸಿದರು. ಮಕ್ಕಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸೌಲತ್ತುಗಳನ್ನು ಸರಿಯಾಗಿ ತಲುಪಿಸಬೇಕು ಮಕ್ಕಳ ಸುರಕ್ಷತೆ ವಿಷಯದಲ್ಲಿ ಯಾವುದೇ ಲೋಪ ದೋಷಗಳು ಕಂಡು ಬಂದಲ್ಲಿ ಆಯೋಗವು ಗಂಭೀರವಾಗಿ ಪರಿಗಣಿಸಿ ಸಂಬಂಧಪಟ್ಟವರ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚನೆ ನೀಡಿದರು.

ನಂತರ ಮುನ್ನೂರುವಾಡಿ ಕರ್ನಾಟಕ ಪಬ್ಲಿಕ್ ಶಾಲೆಗೆ ಭೇಟಿ ನೀಡಿ ಮಕ್ಕಳಿಗೆ ಬಿಸಿ ಊಟ ವಿತರಣೆ, ಮೊಟ್ಟೆ ವಿತರಣೆಯನ್ನು ಪರಿಶೀಲಿಸಿದರು. ಶಾಲೆಗಳಿಗೆ ಬಿಸಿ ಊಟಕ್ಕಾಗಿ ಪೂರೈಕೆ ಆಗಿರುವ ಆಹಾರ ಸಾಮಗ್ರಿಗಳ ಗುಣಮಟ್ಟ ಪರಿಶೀಲಿಸಿ ಗುಣಮಟ್ಟದ ಆಹಾರ ಸಾಮಗ್ರಿಗಳನ್ನು ಪಡೆದು ಮಕ್ಕಳಿಗೆ ವಿತರಿಸಲು ಸೂಚಿಸಿದರು. ಶಾಲೆಯ ಆವರಣದಲ್ಲಿ ನೀರು ನಿಂತಿದ್ದು ಮಕ್ಕಳಿಗೆ ಆಟವಾಡಲು ಸಮಸ್ಯೆ ಆಗುತ್ತದೆ. ಕೂಡಲೇ ಮೈದಾನವನ್ನು ಸಮತಟ್ಟುಗೊಳಿಸಿ ಶಾಲೆಯ ನಿರ್ವಹಣೆಗೆ ಬಿಡುಗಡೆ ಆದ ಅನುದಾನವನ್ನು ಬಳಕೆ ಮಾಡಿಕೊಂಡು ಶಾಲೆಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಮಕ್ಕಳ ಸ್ನೇಹಿ ವಾತಾವರಣ ನಿರ್ಮಿಸಲು ಕ್ಷೇತ್ರ ಶಿಕ್ಷಣ ಅಧಿಕಾರಿ ಈರಣ್ಣ ಕೋಸಗಿ ಇವರಿಗೆ ಸೂಚಿಸಿದರು. ನಂತರ ರಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಎನ್ಆರ್‌ಸಿ ಘಟಕಕ್ಕೆ ಬೇಟಿ ನೀಡಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ್ ಹಾವಿನ್, ಕ್ಷೇತ್ರ ಶಿಕ್ಷಣ ಅಧಿಕಾರಿ ಈರಣ್ಣ ಕೊಸಗಿ, ರಕ್ಷಣಾಧಿಕಾರಿ ಹನುಮೇಶ ಇತರ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

# ಚಪೆಟ್ಲಾ ಶಾಲೆಯಲ್ಲಿ ಶಾಲಾ ದಾಖಲಾತಿ,ಹಾಜರಾತಿ ಆಂದೋಲನ




ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್,ಜೂ.16: ಜಿಲ್ಲಾ ಪಂಚಾಯತ ಯಾದಗಿರಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮತ್ತು ಕಲಿಕೆ ಟಾಟಾ ಟ್ರಸ್ಟ್ ಸಹಯೋಗದಲ್ಲಿ ಚಪೆಟ್ಲಾ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ದಾಖಲಾತಿ ಮತ್ತು ಹಾಜರಾತಿ ಆಂದೋಲನದ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಶಾಲೆಯ ಮುಖ್ಯಗುರು ಮಲ್ಲಿಕಾರ್ಜುನ, ಸಿ ಆರ್ ಪಿ ಸಿದ್ದಲಿಂಗಪ್ಪ ಹಾಗೂ ಎಸ್ ಡಿ ಎಂ ಸಿ ಅದ್ಯಕ್ಷ ಮೋನಪ್ಪ ಮತ್ತು ಶಾಲೆಯ ಎಲ್ಲಾ ಶಿಕ್ಷಕರು ಮಕ್ಕಳಿಗೆ ಅಕ್ಷರ ಅಭ್ಯಾಸ ಮಾಡಿಸುವದರ ಮೂಲಕ ಹಾಗೂ ನನ್ನ ಗುರುತು ನನ್ನ ಚಿತ್ರ ಮತ್ತು ಹೂ ಗುಚ್ಚ ನೀಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಜಾಥಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿನಿಯರು ಕುಂಭವನ್ನು ಹೊತ್ತು ಶಾಲಾ ಘೋಷಣೆಯನ್ನು ಕೂಗುತ್ತಾ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿದರು. ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು, ಗ್ರಾಮದ ಪಂಚಾಯತ ಅಧ್ಯಕ್ಷ ಉಪಾದ್ಯಕರು, ಎಸ್ ಡಿ ಎಂ ಸಿ ಅಧ್ಯಕ್ಷ , ಉಪಾಧ್ಯಕ್ಷ ಮತ್ತು ಸದಸ್ಯರು ಮುಖ್ಯೋಪಾಧ್ಯಾಯರು ಶಿಕ್ಷಕ ವೃಂದದವರು, ಅಂಗನವಾಡಿ ಮಕ್ಕಳು ಮತ್ತು ಶಾಲೆಯ ಮಕ್ಕಳು ಭಾಗವಹಿಸಿದರು.

# ಅಶೋಕ ಗುರ್ನಾಳೆ ಲಯನ್ಸ್ ಕ್ಲಬ್ ಅಧ್ಯಕ್ಷರಾಗಿ ಎರಡನೇ ಬಾರಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:– ತಾಲೂಕಿನ ಮೇಥಿಮೇಳಕುಂದಾ ಗ್ರಾಮದ ಅಶೋಕ ಗುರ್ನಾಳೆ ಅವರನ್ನು ಲಯನ್ಸ್ ಕ್ಲಬ್ ಸಂಭಾಜಿ ನಗರ ಶಾಖೆಯ 2025–26ನೇ ಸಾಲಿನ ಅಧ್ಯಕ್ಷರಾಗಿ ಎರಡನೇ ಬಾರಿಗೆ ಏಕಮತದಿಂದ ಆಯ್ಕೆ ಮಾಡಲಾಗಿದೆ. ಅಶೋಕ್ ಗುರ್ನಾಳೆ ಅವರು ಲಯನ್ಸ್ ಕ್ಲಬ್ ನಲ್ಲಿ ಕಳೆದ 8 ವರ್ಷಗಳಿಂದ ಸಕ್ರಿಯವಾಗಿ ಪಾಲ್ಗೊಳ್ಳುತ್ತ ಬಂದಿದ್ದಾರೆ ಅವರಿಗೂ ಸಂಗಣಕ ಕ್ಷೇತ್ರದಲ್ಲಿ 29 ವರ್ಷದ ವೃತ್ತಿಪರ ಅನುಭವವಿದ್ದು ಅವರು ಈಗಾಗಲೇ ಮರಾಠವಾಡ, ಖಂಡೇಶ್ ಮತ್ತು ವಿಧ್ಯರ್ಭ ಈ ಮೂರು ವಿಭಾಗಗಳ 13 ಜಿಲ್ಲೆಗಳಲ್ಲಿ ವಿವಿಧ ನೇತೃತ್ವದ ಹೊಣೆಗಾರಿಕೆಗಳನ್ನು ನಿರ್ವಹಿಸಿದ್ದಾರೆ. ಅವರ ಈ ಆಯ್ಕೆಗೆ ಹಲವಾರು ಗಣ್ಯರು, ಕ್ಲಬ್ ಸದಸ್ಯರು, ಸಮಾಜ ಸೇವಾ ಸಂಸ್ಥೆಗಳ ಪ್ರತಿನಿಧಿಗಳು ಅಭಿನಂದನೆಗಳು ಸಲ್ಲಿಸಿದ್ದಾರೆ.

# ಜೂನ್ 18 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.16–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–2ರ ವತಿಯಿಂದ 110/33/11 ಕೆ.ವಿ.ನಾಲವಾರ ವಿದ್ಯುತ್ ಉಪ–ಕೇಂದ್ರದಲ್ಲಿ ಮೆಂಟೇನನ್ಸ್ ಕಾರ್ಯ ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ಕೆಳಕಂಡ ಗ್ರಾಮಗಳಲ್ಲಿ ಇದೇ ಜೂನ್ 18 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗುತ್ತಿದ್ದು, ಸಾರ್ವಜನಿಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ. ಶಹಾಬಾದ 110/33/11 ಕೆ.ವಿ ನಾಲವಾರ ವಿದ್ಯುತ್ ವಿತರಣಾ ಕೇಂದ್ರ: ಚಿತ್ತಾಪೂರ ತಾಲೂಕಿನ ನಾಲವಾರ (ಐ.ಪಿ), ತರಕಸಪೇಟ, ಸನ್ನತ್ತಿ, ಯರಗೊಲ (ಐ.ಪಿ), ಕೋಂಚೂರ್, ಕುಂಬಾರಹಳ್ಳಿ, ರಾಂಪುರಳ್ಳಿ (ಐ.ಪಿ), ಕೊಲ್ಲುರ (ಐ.ಪಿ) ಗ್ರಾಮ ಪಂಚಾಯತಿಯ ಎಲ್ಲಾ ಗ್ರಾಮಗಳು.

# ಸತ್ಕಾರ್ಯವೇ ಸದಾಶಿವನ ಪೂಜೆ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜೂ 16 ನಾವು ಮಾಡುವ ಸತ್ಕಾರ್ಯಗಳೇ ಸದಾಶಿವನ ನಿಜವಾದ ಪೂಜೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ಇಲ್ಲಿನ ಹೊಳಕುಂದೆ ಮನೆತನದ ಹಿರಿಯ ಜೀವ ನಿವೃತ್ತ ಜಿಲ್ಲಾ ವೈದ್ಯಾಧಿಕಾರಿಗಳಾದ ಡಾ. ಸುಶೀಲಾಬಾಯಿ ಹೊಳಕುಂದೆ ರವರ 75ನೇ ಜನ್ಮದಿನದ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಪೂಜ್ಯರು, ಆದರ್ಶ ಸೇವೆಯಿಂದ ಜೀವನದಲ್ಲಿ ಎತ್ತರದ ಸ್ಥಾನ ಗಳಿಸಬಹುದು, ಸರಳತೆಯಿಂದ ಜನಮಾನಸ ದಲ್ಲಿ ಶಾಶ್ವತವಾಗಿ ನೆಲೆ ನಿಲ್ಲಬಹುದು ಎನ್ನುವುದಕ್ಕೆ ಡಾ. ಸುಶೀಲಾಬಾಯಿ ಹೊಳಕುಂದೆ ರವರು ನಮಗೆ ಮಾದರಿಯಾಗಿ ಕಾಣಸಿಗುವರು.

ವೈದ್ಯ ವೃತ್ತಿಯಲ್ಲಿ ಆಧ್ಯಾತ್ಮ ಹಾಗೂ ಗುರು ನಿಷ್ಠೆಯನ್ನು ಮೇಳಸಿಕೊಂಡು ಸೇವೆ ಮಾಡಿದ ಅಪರೂಪದ ಸಾಮಾಜಿಕ ಕಳಕಳಿ ಹೊಂದಿರುವ ವೈದ್ಯರಾಗಿ ಬಸವ ನೆಲದ ಜನ ಮೆಚ್ಚಿದ ವೈದ್ಯರು ಎನ್ನುವ ಖ್ಯಾತಿ ಗಳಿಸಿದವರು ಡಾ. ಸುಶೀಲಾಬಾಯಿ ಹೊಳಕುಂದೆ. ಸರಕಾರದ ಕೆಲಸ ದೇವರ ಕೆಲಸ ಎನ್ನುವುದಕ್ಕೆ ನಿಜಾರ್ಥ ಕಲ್ಪಿಸಿಕೊಟ್ಟು ಸಾರ್ಥಕ ಸೇವೆ ಸಲ್ಲಿಸಿದ ಡಾ. ಸುಶೀಲಾಬಾಯಿ ಹೊಳಕುಂದೆ ರವರು ಶತಾಯುಷಿಯಾಗಿ ಬಾಳಿ ಬದುಕಲಿ, ಹಾಗೂ ಈ ಸಮಾರಂಭ ಆಯೋಜಿಸಿದ ಅವರ ಪರಿವಾರದವರೆಲ್ಲರಿಗೂ, ಬಂಧು ಮಿತ್ರರಿಗೂ, ಸರ್ವರಿಗೂ ಸನ್ಮಂಗಳವಾಗಲಿ ಎಂದು ಶುಭ ಹಾರೈಸಿದರು.

ಸುಶೀಲಾಬಾಯಿ ಹೊಳಕುಂದೆ ಮಾತನಾಡಿದರು. ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು. ಎಂಎಲ್ಸಿ ಮಾರುತಿ ರಾವ ಮೂಳೆ, ಮಾಜಿ ಶಾಸಕರಾದ ಮಲ್ಲಿಕಾರ್ಜುನ ಖೂಬಾ. ಸಾವಿತ್ರಿ ಶರಣು ಸಲಗರ, ನಿವೃತ್ತ ನ್ಯಾಯಾಧೀಶರಾದ ಸುಭಾಷ ಚಂದ್ರ ನಾಗರಾಳೆ, ಸುವಾಸ ಹೊಳಕುಂದೆ, ಮಲ್ಲಿನಾಥ ಹಿರೇಮಠ ಹಾರಕೂಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಹಾಡಿದರು. ನವಲಿಂಗ ಪಾಟೀಲ ನಿರೂಪಿಸಿದರು.

# ಬಿಕೆಐಟಿಗೆ ಶೈಕ್ಷಣಿಕ ಸಾಧನಾ ಪ್ರಶಸ್ತಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಪಟ್ಟಣದ ಭೀಮಣ್ಣಾ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯಕ್ಕೆ (ಬಿಕೆಐಟಿ) ಬಿಗಿನ್‌ಅಪ್ ರಿಸರ್ಚ ಇಂಟಲಿಜೆನ್ಸ್ ಪ್ರೈ. ಲಿ. ಸಂಸ್ಥೆಯ ವತಿಯಿಂದ ಕೊಡಮಾಡುವ ಎಕ್ಸಲೆನ್ಸ್ ಇನ್ ಎಜುಕೇಶನಲ್ ಸ್ಟಾ ಂಡರ್ಡ್ ಅಡಾಪ್ಟೆಬಿಲಿಟಿ ಆಂಡ್ಯ ಇಂಪ್ಲಿಮೆಂಟೇಶನ್ ಅವಾರ್ಡ (ಶೈಕ್ಷಣಿಕ ಸಾಧನಾ ಪ್ರಶಸ್ತಿ) ನೀಡಲಾಗಿದೆ ಎಂದು ಬಿಕೆಐಟಿ ಪ್ರಾಂಶುಪಾಲ ಡಾ. ಉದಯಕುಮಾರ ಕಲ್ಯಾಣೆ ತಿಳಿಸಿದರು.

ಪಟ್ಟಣದ ಬಿಕೆಐಟಿ ಸಭಾಂಗಣದಲ್ಲಿ ಸೋಮವಾರ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ರಾಷ್ಟ್ರಮಟ್ಟದ ಸಂಸ್ಥೆಯ ವತಿಯಿಂದ ಇಂತಹ ಪ್ರತಿಷ್ಠಿತ ಪ್ರಶಸ್ತಿ ಸಿಕ್ಕಿರಿವುದು ಹೆಮ್ಮೆಯ ವಿಷಯವಾಗಿದೆ. ಬಿಗಿನ್‌ಅಪ್ ರಿಸರ್ಚ ಇಂಟಲಿಜೆನ್ಸ್ ಸಂಸ್ಥೆಯವರು ಕೂಲಂಕುಶವಾಗಿ ಪರಿಶೀಲನೆ ನಡೆಸಿದ ನಂತರವೇ ಇಂತಹ ಪ್ರಶಸ್ತಿ ನೀಡುತ್ತಾರೆ. ಕರ್ನಾಟಕದಲ್ಲಿಯೇ ಬಿಕೆಐಟಿಗೆ ಈ ಪ್ರಶಸ್ತಿ ನೀಡಿರುವುದು ಈ ಕಾಲೇಜಿನ ಶೈಕ್ಷಣಿಕ ಕ್ಷಮತೆಗೆ ಕಾರಣವಾಗಿದೆ. ಸಂಸ್ಥೆಯ ಅಧ್ಯಕ್ಷ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮತ್ತು ಕಾರ್ಯದರ್ಶಿ ಸಂಸದ ಸಾಗರ ಖಂಡ್ರೆಯವರು ಬಿಕೆಐಟಿ ಕಾಲೇಜನ್ನು ಐ ಐ ಟಿ ಮಾದರಿಯಲ್ಲಿ ಅಭಿವೃದ್ಧಿ ಪಡಿಸುವ ಇಚ್ಛೆ ಹೊಂದಿದ್ದಾರೆ. ಈ ನಿಟ್ಟಿನಲ್ಲಿ ಕಾಲೇಜಿನ ಉತ್ಕೃಷ್ಟತಾ ಕೇಂದ್ರದ ಮುಖಾಂತರ ಮೊದಲನೆ ಸೆಮಿಸ್ಟರ್‌ನಿಂದಲೇ ಕೈಗಾರಿಕಾ ನೈಪುಣ್ಯತೆ ಮತ್ತು ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಮೂರನೆ ವರ್ಷಕ್ಕೆ ಬಂದಾಗ ಕ್ಯಾಂಪಸ್ ಸಂದರ್ಶನಕ್ಕೆ ಬೇಕಾದ ಎಲ್ಲಾ ಕೌಶಲ್ಯ ತರಬೇತಿ ಹೊಂದಿ ಉತ್ತಮ ಕ್ಷತೆ ತೋರುವಂತಾಗುತ್ತದೆ. ಇಂತಹ ಒಂದು ವಿನೂತನ ಪ್ರಯೋಗ ಮಾಡುತ್ತಿರುವ ಕ.ಕ.ಭಾಗದ ಏಕೈಕ ಕಾಲೇಜು ಬಿಕೆಐಟಿ ಯಾಗಿದೆ. ಹೀಗಾಗಿ ಇಂತಹ ಪ್ರತಿಷ್ಠಿತ ಪ್ರಶಸ್ತಿ ಈ ಕಾಲೇಜಿಗೆ ಲಭಿಸಿದೆ. ಅಲ್ಲದೇ ಕಾಲೇಜಿನಲ್ಲಿ ಪಠ್ಯೇತರ ಚಟುವಟಿಕೆಗಳಿಗೆ ಒತ್ತು ಕೊಡುವ ನಿಟ್ಟಿನಲ್ಲಿ ದಲ್ಲೈಹಿಕ ಶಿಕ್ಷಣ ಮತ್ತು ಸಂಗೀತ ತರಗತಿಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ ಎಂದರು.

ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಪ್ರೊ. ಅಂಕುಶ ಢೋಲೆ ಮಾತನಾಡಿ, ಬೆಂಗಳೂರಿನ ಪ್ರತಿಷ್ಠಿತ ತರಬೇತಿ ಕೇಂದ್ರಗಹಳೊಂದಿಗೆ ಒಪ್ಪಂದ ಮಾಡಿಕೊಂಡು ವಿಶೇಷ ಉಪನ್ಯಾಸ, ತರಬೇತಿಗಳನ್ನು ಆನಲೈನ್ ಮುಖಾಂತರ ನೀಡಿ, ಪ್ರಚಲಿತ ವಿದ್ಯಮಾನಕ್ಕೆ ವಿದ್ಯಾರ್ತಿಗಳನ್ನು ಸನ್ನದ್ದು ಮಾಡಲಾಗುತ್ತಿದೆ. ನಾಲ್ಕು ವರ್ಷಗಳ ವಿಶೇಷ ಕೌಶಲ್ಯ ತರಬೇತಿಗೆ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಂದ ಯಾವುದೇ ಶುಲ್ಕ ಪಡೆಯುವದಿಲ್ಲ. ಈ ತರಬೇತಿಕೆಯ ಮುಖಾಂತರ ಪ್ರತಿ ಸೆಮಿಸ್ಟರ್‌ಗೆ ಒಂದರಂತೆ, ಮೌಲ್ಯವೃದ್ಧಿ (ವ್ಯಾಲು ಆಡೆಡ್) ಕೋರ್ಸಗಳನ್ನು ಕಲಿಸಿ ಕೊಡಲಾಗುತ್ತಿದೆ ಎಂದು ಮಾಹತಿ ನೀಡಿದರು.



ಪ್ರಸ್ತುತ ಸಾಲಿನಿಂದ ಒಂದು ವಿದೇಶಿ ಭಾಷೆ ಕಲಿಸುವ ಉದ್ದೇಶ ಹೊಂದಿದ್ದು, ಜಪಾನ್ ಭಾಷೆಯಿಂದ ಆರಂಭಗೊಂಡು ಜರ್ಮನ ಮತ್ತು ರಷ್ಯನ್ ಭಾಷೆಗಳಿಗೆ ಇದನ್ನು ವಿಸ್ತರಿಸಲಾಗುತುವುದು. ಭಾಷಾ ಕಲಿಕೆಯನ್ನು ಆನ್‌ಲೈನ್ ಮೂಲಕ ಕಲಿಸಿಕೊಡಲಾಗುವುದು.

**–ಡಾ. ಉದಯವಕುಮಾರ ಕಲ್ಯಾಣೆ, ಪ್ರಾಂಶುಪಾಲರು, ಬಿಕೆಐಟಿ ಭಾಲ್ಕಿ.**

# ಎನ್‌ಎಬಿಲ್ ಮಾನ್ಯತೆ ಕುರಿತು ಜಾಗೃತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜೂನ್.16– NABL ಜಾಗೃತಿ ಕಾರ್ಯಕ್ರಮವು ಜನರಲ್ಲಿ ಮಾನ್ಯತೆ ಸಂಬಂಧಿತ ಲಾಭಗಳ ಬಗ್ಗೆ ತಿಳಿವು ನೀಡುವ ದಿಕ್ಕಿನಲ್ಲಿ ಒಳ್ಳೆಯ ಹೆಜ್ಜೆಯಾಗಿದೆ. ಇಂದಿನ ಕಾಲಘಟ್ಟದಲ್ಲಿ ಪರೀಕ್ಷಾ ಪ್ರಯೋಗಾಲಯಗಳಲ್ಲಿ ಗುಣಮಟ್ಟ ಎಷ್ಟೊಂದು ಪ್ರಮುಖ ಎಂಬುದುರ ಕುರಿತು ಬೀದರ ತೋಟಗಾರಿಕೆ ಕಾಲೇಜಿನ ಡೀನ್ ಪ್ರೊ.ಡಾ.ಎಸ್.ವಿ.ಪಾಟೀಲ ತಿಳಿಸಿದರು.


ಅವರು ಸೋಮವಾರ QCI–NABL ಪ್ರಾದೇಶಿಕ ಕಚೇರಿ, ಬೆಂಗಳೂರು ಇವರು ಗುಣಮಟ್ಟದ ಕುರಿತು ಜಾಗೃತಿ ಮೂಡಿಸಲು ಹಾಗೂ ಎನ್‌ಎಬಿಎಲ್ ಮಾನ್ಯತೆ ಮತ್ತು ಅದರ ಲಾಭಗಳು, ಜೊತೆಗೆ ಕ್ಯೂಸಿಐ ಚಟುವಟಿಕೆಗಳ ಪರಿಚಯ ನೀಡಲು ಕರ್ನಾಟಕದ ತೋಟಗಾರಿಕೆ ಕಾಲೇಜು ಬೀದರ್‌ನಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಬೀದರ ಕೆಆರ್‌ಇ ಸೊಸೈಟಿಯ ಕರ್ನಾಟಕ ಆರ್ಟ್ಸ್ ಆ್ಯಂಡ್ ಕಾಮರ್ಸ ಕಾಲೇಜಿನ ಐಕ್ಯೂಎಸಿ ಸಂಯೋಜಕರಾದ ಡಾ.ರಾಜಮೋಹನ ಪರದೇಶಿ ಮಾತನಾಡಿ, ಇದು ಜೈವಿಕ ತಂತ್ರಜ್ಞಾನ, ಕೃಷಿ, ಆಹಾರ, ಮಣ್ಣು ಪರೀಕ್ಷೆ ಮತ್ತು ಇತರ ಹಲವಾರು ಕ್ಷೇತ್ರಗಳಿಗೆ ಹೇಗೆ ಸಹಕಾರಿ ಎಂಬುದನ್ನು ವಿವರಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಎನ್‌ಎಬಿಎಲ್ ನಿರ್ದೇಶಕ ಶ್ರೀಕಾಂತ್ ಆರ್. ಮಾತನಾಡಿ, ಬೆಂಗಳೂರು ಪ್ರಾದೇಶಿಕ ಕಚೇರಿ ಐದು ದಕ್ಷಿಣ ರಾಜ್ಯಗಳು ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳನ್ನು ಒಳಗೊಂಡು ಎನ್‌ಎಬಿಎಲ್ ಮಾನ್ಯತೆ, ಕ್ಯೂಸಿಐ ಯ ಚಟುವಟಿಕೆಗಳು ಹಾಗೂ ಅದರ ಮಂಡಳಿಗಳು ಮತ್ತು ವಿಭಾಗಗಳ ಬಗ್ಗೆ ಕನ್ನಡ, ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಮಾಹಿತಿಯನ್ನು ಒದಗಿಸುತ್ತಿರುವುದಾಗಿ ವಿವರಿಸಿದರು.

ಎನ್‌ಎಬಿಎಲ್ ಸಮನ್ವಯಕರಾದ ಅಕ್ಷಯ್ ಜಿ.ಎಂ. ಅವರು ಎನ್‌ಎಬಿಎಲ್ ಮಾನ್ಯತೆ ಪಡೆಯುವ ಪ್ರಕ್ರಿಯೆ ಮತ್ತು ಅರ್ಜಿ ಸಲ್ಲಿಸುವ ವಿಧಾನವನ್ನು ವಿವರಿಸಿದರು.

ಎನ್‌ಎಬಿಎಲ್ ಸಮನ್ವಯಕರಾದ ಮಾನಸಿ ಕುಲಕರ್ಣಿ ಅವರು ಎನ್‌ಎಬಿಎಲ್‌ಯ recognition schemes ಹಾಗೂ QCI ಯ ವಿವಿಧ ಉಪಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಈ ಗುಣವತ್ತ ಯಾತ್ರದಲ್ಲಿ ವಿವಿಧ ಪ್ರಯೋಗಾಲಯಗಳು, ಶೈಕ್ಷಣಿಕ ಸಂಸ್ಥೆಗಳು ಮತ್ತು ಕೈಗಾರಿಕಾ ಪ್ರತಿನಿಧಿಗಳಾದ 35 ಕ್ಕೂ ಹೆಚ್ಚು ಜನರು ಭಾಗವಹಿಸಿ ಪ್ರಯೋಜನ ಪಡೆದುಕೊಂಡರು.

# ನೀಟ್: ವಿಸಡಂ ಕಾಲೇಜಿಗೆ ಉತ್ತಮ ಫಲಿತಾಂಶ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 16 : ಪ್ರಸಕ್ತ ಸಾಲಿನ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್)ಯಲ್ಲಿ

ಇಲ್ಲಿಯ ವಿಸಡಂಪದವಿಪೂರ್ವ ವಿಜ್ಞಾನ ಕಾಲೇಜಿಗೆ ಉತ್ತಮ ಫಲಿತಾಂಶ ಬಂದಿದೆ.

ಕೆಟೆಗರಿ ವಿಭಾಗದಲ್ಲಿ ಮೊಹಮ್ಮದ್ ಇಸ್ಮಾಯಿಲ್ ಮೊಹಮ್ಮದ್ ಅಖಿಲ್ (545 ಅಂಕ 6,266ನೇ ಯಾರ್ಂಕ್, ಮಹೆಕ್ ಕೌಸರ್ ಮಹಮ್ಮದ್ ರಯಿಸ್ ಅಹಮ್ಮದ್ (530 ಅಂಕ) 10,754ನೇ ಯಾರ್ಂಕ್, ಶಹಾನಾ ಫಿರ್ದೋಸ್ ಮೊಹಮ್ಮದ್ ರಯಿಸ್ (508 ಅಂಕ) 20,343ನೇ ಯಾರ್ಂಕ್, ಸೈಯದ್ ಫೈಜಾನುದ್ದಿನ್ ಸೈಯದ್ ಅಲಿಮುದ್ದೀನ್ (489 ಅಂಕ), 31,323ನೇ ಯಾರ್ಂಕ್, ಮದಿಹಾ ಕೌಸ್ ಸೈಯದ್ ಸಲೀಂ (484 ಅಂಕ) 34,585ನೇ ಯಾರ್ಂಕ್ ಹಾಗೂ ತಹಿನಿಯತ್ ಶಮ್ಸ್

ಮೊಹಮ್ಮದ್ ಶಂಶೊದ್ದಿನ್ (460 ಅಂಕ) 51,147ನೇ ಯಾರ್ಂಕ್ ಗಳಿಸಿದ್ದಾರೆ ಎಂದು

ಕಾಲೇಜಿನ ಕಾರ್ಯದರ್ಶಿ ಮಹಮ್ಮದ್ ಆಸಿಫೊದ್ದೀನ್ ತಿಳಿಸಿದ್ದಾರೆ. ಸಂವಿಧಾನದ 371ನೇ ಕಲಂ ತಿದ್ದುಪಡಿ ಕಾಯ್ದೆ ಹಾಗೂ ಇತರ ಮೀಸಲಾತಿ ಅನ್ವಯ ಕಾಲೇಜಿನ

20ಕ್ಕೂ ಹೆಚ್ಚು ವಿದ್ಯಾರ್ಥಿಗಳು ಎಂ.ಬಿ.ಬಿ.ಎಸ್. ಹಾಗೂ ಬಿ.ಡಿ.ಎಸ್ ಸೀಟುಗಳನ್ನು

ಪಡೆಯಲಿದ್ದಾರೆ. 60ಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಬಿಎಎಂಎಸ್, ಬಿಯುಎಂಎಸ್ ಹಾಗೂ

ಬಿಎ???ಎಎಸ್ ಸೀಟು ಸಿಗುವ ನಿರೀಕ್ಷೆ ಇದೆ. ನೀಟ್ನಲ್ಲಿ 150ಕ್ಕೂ ಹೆಚ್ಚು

ವಿದ್ಯಾರ್ಥಿಗಳು ಅರ್ಹತೆ ಗಳಿಸಿದ್ದಾರೆ ಎಂದು ಹೇಳಿದ್ದಾರೆ.

150ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಎಐಐಎಂಎಸ್, ಜೆಐಪಿಎಂಇಆರ್, ಪುಣೆಯ ಎಎ???ಎಸಿಯಲ್ಲಿ ಸೀಟು ದೊರೆಯುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

ವಿದ್ಯಾರ್ಥಿಗಳ ಸಾಧನೆ ಮುಕ್ತ ಕಂಠದಿಂದ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

# ರಾಜ್ಯ ಅಲ್ಪ ಸಂಖ್ಯಾತರ ಆಯೋಗದ ಸದಸ್ಯರಾಗಿ ಮನದೀಪ್ ಕೌರ್ ನೇಮಕ



ಮಲ್ಲಮ್ಮನುಡಿವಾರ್ತೆ ಬೀದರ. ಜೂ.16 : ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಸದಸ್ಯರನ್ನಾಗಿ ಬೀದರ್ ನಗರದ ಮನದೀಪ ಕೌರ್ ಸರದಾರ ಮನಪ್ರೀತಸಿಂಗ್ ಅವರನ್ನು ಮುಂದಿನ 3 ವರ್ಷಗಳ ಅವಧಿಗೆ ಅಥವಾ ಮುಂದಿನ ಆದೇಶದ ವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ನಾಮ ನಿರ್ದೇಶಿಸಿ ಆದೇಶ ಹೊರಡಿಸಲಾಗಿದೆ. ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ ಇಲಾಖೆಯ ಸರ್ಕಾರದ ಉಪಕಾರ್ಯದರ್ಶಿ ಎಂ. ಜ್ಯೋತಿಪ್ರಕಾಶ ಅವರು ಜೂನ್ 12 ರಂದು ರಾಜ್ಯದ ವಿವಿಧ ಜಿಲ್ಲೆಯ 8 ಜನರನ್ನು ನಾಮನಿರ್ದೇಶಿತಮಾಡಿ ಆದೇಶ ಹೊರಡಿಸಿದ್ದು ಅದರಲ್ಲಿ ಬೀದರ್ ಜಿಲ್ಲೆಯಿಂದ ಮನದೀಪ್ ಕೌರ್ ಅವರಿಗೆ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ಎಂದು ಆದೇಶ ಪತ್ರದಲ್ಲಿ ತಿಳಿಸಿದ್ದಾರೆ.

# 320 ಜನರ ಉಚಿತ ನೇತ್ರ ತಪಾಸಣೆ




ಬೀದರ. ಜೂ. 16 : ಇಲ್ಲಿಯ ಡಾ. ಸಾಲಿನ್ಸ್ ನೇತ್ರ ಆಸ್ಪತ್ರೆಯಲ್ಲಿ ಸಂಸ್ಥಾಪನಾ ದಿನದ ಪ್ರಯುಕ್ತ ಶನಿವಾರ ನಡೆದ ಶಿಬಿರದಲ್ಲಿ 320 ಜನರ ಉಚಿತ ನೇತ್ರ ತಪಾಸಣೆ ಮಾಡಲಾಯಿತು.

157 ಆಶಾ ಕಾರ್ಯಕರ್ತೆಯರು ಹಾಗೂ ಆಟೊ ಚಾಲಕರಿಗೆ ಉಚಿತ ಕನ್ನಡಕ ವಿತರಿಸಲಾಯಿತು. 58 ಮಂದಿಗೆ ಕಣ್ಣಿನ ಶಸ್ತ್ರಚಿಕಿತ್ಸೆಗೆ ಒಳಗಾಗಲು ಸಲಹೆ ನೀಡಲಾಯಿತು.

ಆಸ್ಪತ್ರೆಯ 57ನೇ ಸಂಸ್ಥಾಪನಾ ದಿನ, ಡಾ. ಸಾಲಿನ್ಸ್ ಹಾಗೂ ಎ.ಸಿ. ಸಾಲಿನ್ಸ್ ಅವರ ಜನ್ಮದಿನದ ನಿಮಿತ್ತ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಆಸ್ಪತ್ರೆಯ ನಿರ್ದೇಶಕಿ ಡಾ. ಸಿಬಿಲ್ ಸಾಲಿನ್ಸ್ ಹೇಳಿದರು.

ಆಸ್ಪತ್ರೆ ಕಳೆದ 57 ವರ್ಷಗಳಿಂದ ಜಿಲ್ಲೆಯ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುತ್ತಿದೆ. ಉಚಿತ ನೇತ್ರ ತಪಾಸಣೆ, ಶಸ್ತ್ರಚಿಕಿತ್ಸೆ ಶಿಬಿರಗಳ ಮೂಲಕ ಬಡವರಿಗೆ ನೆರವಾಗುತ್ತಿದೆ ಎಂದು ತಿಳಿಸಿದರು.

ಮಾನವನ ಅಂಗಗಳಲ್ಲಿ ಕಣ್ಣು ಪ್ರಮುಖವಾದದ್ದು. ಕಣ್ಣಿದ್ದರೆ ಮಾತ್ರ ಸೃಷ್ಟಿಯ ಸೌಂದರ್ಯ ನೋಡಲು ಸಾಧ್ಯ. ಹೀಗಾಗಿ ಪ್ರತಿಯೊಬ್ಬರೂ ಕಣ್ಣಿನ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ಅಂಧತ್ವ ನಿಯಂತ್ರಣ ಘಟಕದ ಅಧಿಕಾರಿ ಡಾ. ಕಿರಣ ಪಾಟೀಲ ಸಸಿಗೆ ನೀರೆರೆದು ಶಿಬಿರ ಉದ್ಘಾಟಿಸಿದರು. ನಗರಸಭೆ ಮಾಜಿ ಉಪಾಧ್ಯಕ್ಷ ಫಿಲೋಮನ್‌ರಾಜ್ ಪ್ರಸಾದ್, ಕೆಪಿಸಿಸಿ ಕಾರ್ಯದರ್ಶಿ ಇರ್ಷಾದ್ ಅಲಿ ಪೈಲ್ವಾನ್, ಚಾರ್ಟೆಡ್ ಅಕೌಂಟೆಂಟ್ ಅರುಣ ಅಟ್ಟಲ್, ಶಿವಕುಮಾರ ಗುಮ್ಮಾ, ಡಾ. ವೀರೇಂದ್ರ ಪಾಟೀಲ, ಡಾ. ಹುಮೇರಾ ಖಾನಂ, ಡಾ. ಮುಕ್ತಾ, ಪುಟ್ಟರಾಜ ಬಲ್ಲೂರಕರ್ ಮತ್ತಿತರರು ಇದ್ದರು.

# ಸನಾತನ ಧರ್ಮಕ್ಕೆ ಅಹಿಲ್ಯಾದೇವಿ ಕೊಡುಗೆ ಅಪಾರ: ಭೂಷಣಸಿಂಹ ರಾಜೆ ಹೋಳ್ಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 16 : ಸನಾತನ ಧರ್ಮದ ಏಳ್ಗೆಗೆ ಮಾತೋಶ್ರೀ ಪುಣ್ಯಶ್ಲೋಕ ಅಹಿಲ್ಯಾದೇವಿ ಹೋಳ್ಕರ್ ಕೊಡುಗೆ ಅಪಾರವಾಗಿದೆ ಎಂದು ಅಹಿಲ್ಯಾಬಾಯಿ ಹೋಳ್ಕರ್ ಅವರ 13ನೇ ವಂಶಸ್ಥರಾದ ಕೋಲಾಪುರದ ಶ್ರೀಮಂತ ಭೂಷಣಸಿಂಹ ರಾಜೆ ಹೋಳ್ಕರ್ ತಿಳಿಸಿದರು.

ನಗರದ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ರಾಜಮಾತಾ ಅಹಿಲ್ಯಾದೇವಿ ಹೋಳ್ಕರ್ ಜಯಂತಿ ಸಮಿತಿ ಹಾಗೂ ಹಟಕಾರ, ಧನಗಾರ ಮತ್ತು ಗೊಂಡ ಸಮಾಜದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಪುಣ್ಯಶ್ಲೋಕ ಅಹಿಲ್ಯಾದೇವಿ ಹೋಳ್ಕರ್ ಅವರ 300ನೇ ಜಯಂತಿ ಉತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಮೊಘಲರ ಆಳ್ವಿಕೆ ಸಂದರ್ಭದಲ್ಲಿ ದೇವಸ್ಥಾನಗಳನ್ನು ಕೆಡವುತ್ತಿದ್ದರು. ಅಂತಹ ಸಂದರ್ಭದಲ್ಲಿ ಕಾಶಿ ವಿಶ್ವನಾಥ ದೇವಾಲಯದಿಂದ ಹಿಡಿದು ದೇಶದಾದ್ಯಂತ ದೇವಾಲಯಗಳ ಜೀರ್ಣೋದ್ಧಾರ ಕಾರ್ಯ ಕೈಗೆತ್ತಿಕೊಂಡು ರಾಷ್ಟ್ರ ಕಟ್ಟುವ ಕಾರ್ಯ ಅಹಿಲ್ಯಾದೇವಿ ಮಾಡಿದ್ದಾರೆ. ಒಂದು ಕಾಲದಲ್ಲಿ ಧರ್ಮಾಂಧ ಟಿಪ್ಪು ಸುಲ್ತಾನ್ ಮತಾಂತರ ಮಾಡುವ ಸಂದರ್ಭದಲ್ಲಿ ಹೋಳ್ಕರ್ ಪರಿವಾರದ ತುಕಾಜಿರಾವ ಹೋಳ್ಕರ್ ಹೋರಾಟ ಮಾಡಿದ್ದಾರೆ. ಛತ್ರಪತಿ ಶಿವಾಜಿ ಮರಣದ ನಂತರ ಸನಾತನ ಸಂಸ್ಕೃತಿಗಾಗಿ ಮಾಡುವ ಹೋರಾಟ ಮೊಟಕುಗೊಂಡಿತ್ತು. ಆ ಹೋರಾಟದ ಪರಂಪರೆ ಕೈಯಲ್ಲಿ ಖಡ್ಗ ಹಿಡಿದು ವೀರತನದಿಂದ ಮುಂದುವರೆಸಿದ ಕೀರ್ತಿ ಅಹಿಲ್ಯಾದೇವಿ ಅವರಿಗೆ ಸಲ್ಲುತ್ತದೆ ಎಂದು ಪ್ರತಿಪಾದಿಸಿದರು.

ಧನಗಾರ, ಹಟಕಾರ ಮತ್ತು ಗೊಂಡ ಪರಿವಾರ ಒಂದೇ. ಯಾವುದೇ ಭೇದಭಾವ ಮಾಡದೆ ಪರಸ್ಪರ ಸಂಬಂಧ ಬೆಳೆಸಿಕೊಳ್ಳಿರಿ. ಐಕ್ಯತೆಯಿಂದ ಸಂಘಟನಾತ್ಮಕ ಹೋರಾಟ ಮಾಡಿದಾಗ ಮಾತ್ರ ರಾಷ್ಟ್ರ ಮತ್ತು ಧರ್ಮ ಉಳಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ ಮಾತನಾಡಿ ರಾಜ್ಯ ಮತ್ತು ರಾಷ್ಟ್ರದ ಶಾಲಾ-ಕಾಲೇಜುಗಳ ಪಠ್ಯಪುಸ್ತಕದಲ್ಲಿ ರಾಜಮಾತೆ ಅಹಿಲ್ಯಾದೇವಿ ಹೋಳ್ಕರ್ ಅವರ ಜೀವನ ಚರಿತ್ರೆ ಅಳವಡಿಸಿ, ತಾಯಿಯ ಹೋರಾಟದ ಜೀವನ ಮುಂದಿನ ಪೀಳಿಗೆಗೆ ತಿಳಿಸುವ ಅಗತ್ಯವಿದೆ. ಪಠ್ಯಪುಸ್ತಕದಲ್ಲಿ ಔರಂಗಜೇಬ, ಟಿಪ್ಪುಸುಲ್ತಾನ, ಅಲೆಕ್ಸಾಂಡರನ ಜೀವನ ಚರಿತ್ರೆ ಇದೆ. ಆದರೆ ದೇಶಕ್ಕಾಗಿ ಧರ್ಮಕ್ಕಾಗಿ ಹೋರಾಡಿದ ಅಹಿಲ್ಯಾದೇವಿ ಚರಿತ್ರೆ ಅಳವಡಿಸಿಲ್ಲ. ಇದೆಂಥಾ ಅನ್ಯಾಯ? ಎಂದು ಪ್ರಶ್ನಿಸಿದರಲ್ಲದೆ ಧನಗಾರ ಮತ್ತು ಹಟಕಾರ ಎರಡೂ ಒಂದೇ ಎನ್ನುವ ಎನ್. ಶಂಕ್ರೆಪ್ಪ ವರದಿ ಜಾರಿಗಾಗಿ ನಾವೆಲ್ಲರೂ ಸೇರಿ ಸರ್ಕಾರದ ಮೇಲೆ ಒತ್ತಡ ಹೇರೋಣ. ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಿಗೆ ಮನವರಿಕೆ ಮಾಡೋಣ ಎಂದು ತಿಳಿಸಿದರು. ಸಿದ್ಧರಾಮಯ್ಯ ಜಾತಿ ಜನಗಣತಿ ವರದಿ ಕೂಡಲೇ ಬಹಿರಂಗ ಮಾಡಬೇಕು. ದೆಹಲಿಗೆ ಹೋಗಿ ಬಂದ ಮೇಲೆ ಬಹಿರಂಗ ಪಡಿಸಲು ಮೀನಮೇಷ ಎಣಿಸುತ್ತಿರುವ ಸಿಎಂ ಸಿದ್ಧರಾಮಯ್ಯ ಜಾರಿ ಮಾಡುತ್ತೇನೆಂದು ಹೇಳಿ ಮಾಡಲಿಲ್ಲ ಎನ್ನುವ ಮೋಸ ಮಾಡಿದ ಮುಖ್ಯಮಂತ್ರಿ ಎನ್ನುವ ಹಣೆಪಟ್ಟಿ ಕಟ್ಟಿಕೊಳ್ಳಬೇಡಿ. "ಜಾರಿ ಮಾಡುವೆ ಇಲ್ಲ ರಾಜೀನಾಮೆ ನೀಡುವೆ" ಎಂದು ಈಗಲೇ ಶಪಥ ಮಾಡಿ ಒತ್ತಾಯಿಸಿದರು.

ಮಾಜಿ ಮಂತ್ರಿ ಹಾಗೂ ಹಾಲಿ ಶಾಸಕ ಪ್ರಭು ಚವ್ಹಾಣ ಮಾತನಾಡಿ ರಾಜಮಾತೆ ಅಹಿಲ್ಯಾದೇವಿ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸುವಂತೆ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು. ನನ್ನ ಕ್ಷೇತ್ರ ಔರಾದನಲ್ಲಿ ಅಹಿಲ್ಯಾದೇವಿ ಹೋಳ್ಕರ್ ಸಮುದಾಯ ಭವನಕ್ಕಾಗಿ ಒಂದು ಎಕರೆ ಸ್ಥಳ ನೀಡಿದ್ದೇನೆ. ಮುಂದಿನ ದಿನಗಳಲ್ಲಿ 2 ಕೋಟಿ ವೆಚ್ಚದಲ್ಲಿ ಭವನ ನಿರ್ಮಾಣವಾಗಲಿದೆ. ಜೊತೆಗೆ ಮುಂದಿನ ವರ್ಷ ಔರಾದನಲ್ಲಿ ಹಟಕಾರ ಮತ್ತು ಧನಗಾರ ಗೊಂಡ ಸಮಾಜದ ಜನರನ್ನು ಸೇರಿಸಿ ಬೃಹತ್ ಅದ್ಧೂರಿ ಜಯಂತಿ ಆಚರಿಸೋಣ ಎಂದರು. ಸಮಾಜದ ಬಂಧುಗಳು ಶಿಕ್ಷಣ ಪಡೆದು ಜಾಗೃತರಾಗಬೇಕು. ಈಗಾಗಲೇ ಜಾಗೃತರಾಗಲು ತುಂಬಾ ವಿಳಂಬವಾಗಿದೆ. ಇನ್ನು ಮುಂದಿಟ್ಟ ಹೆಜ್ಜೆ ಹಿಂದಿಡಬೇಡಿ. ಸರ್ಕಾರಿ ಯೋಜನೆಗಳನ್ನು ಪಡೆದುಕೊಳ್ಳಲು ಪ್ರಯತ್ನ ಮಾಡಿ ಎಂದು ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಉತ್ಸವ ಸಮಿತಿ ಗೌರವಾಧ್ಯಕ್ಷ ಪಂಡಿತ್ ಚಿದ್ರಿ "ಜಾತಿ ಜನಗಣತಿ ಸಂದರ್ಭದಲ್ಲಿ ಕಂಪ್ಯೂಟರ್‌ನಲ್ಲಿ ಅನ್ಯಸಮುದಾಯದ 'ಹಟ್ಟಗಾರ' ಎಂದು ಬರುತ್ತಿದೆ. ಇದರಿಂದ ನಮ್ಮ ಹಟಕಾರ ಸಮಾಜದವರಿಗೆ ಅನ್ಯಾಯವಾಗುತ್ತಿದೆ. ಸರ್ಕಾರ ದಯವಿಟ್ಟು ಇದನ್ನು ಸರಿಪಡಿಸಬೇಕು. ಶಾಸಕ ಪ್ರಭು ಚವ್ಹಾಣ ಅವರು ಔರಾದನಲ್ಲಿ ಅಹಿಲ್ಯಾದೇವಿ ಹೋಳ್ಕರ್ ಸಮುದಾಯ ಭವನಕ್ಕೆ ಒಂದು ಎಕರೆ ನೀಡಿದಂತೆ ಧನಗಾರ ಭವನಕ್ಕೂ ಒಂದು ಎಕರೆ ನೀಡಬೇಕೆಂದು ತಿಳಿಸಿದರು. ಜೊತೆಗೆ ಅಹಿಲ್ಯಾದೇವಿ ಜೀವನ ಚರಿತ್ರೆ ಪುಠ್ಯಪುಸ್ತಕದಲ್ಲಿ ಅಳವಡಿಸಲು ಸರ್ಕಾರಕ್ಕೆ ಒತ್ತಾಯಿಸಿದರು.

ಸೋಲಾಪುರದ ಸುಜಾತಾ ಸಾಗರ ರಾಜೆ ಪಾಂಡ್ರೆ ವಿಶೇಷ ಉಪನ್ಯಾಸ ನೀಡಿದರು. ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ, ಮುಂಬೈನ ಇತಿಹಾಸ ಅಧ್ಯಾಪಕರಾದ ಸುಮಿತರಾವ ಲೋಖಂಡೆ ಮಾತನಾಡಿದರು. ಅಹಿಲ್ಯಾಬಾಯಿ ಹೋಳ್ಕರ್ ಜಯಂತಿ ಉತ್ಸವ ಸಮಿತಿ ಅಧ್ಯಕ್ಷ ಈಶ್ವರಸಿಂಗ್ ಠಾಕೂರ್ ಮಾತನಾಡಿದರು. ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ಶಿವಯೋಗಿ ಮಚೇಂದ್ರನಾಥ ಮಹಾರಾಜರು ಔದತಪುರ ಅವರು ಆಶೀರ್ವಚನ ನೀಡಿದರು.

ವೇದಿಕೆ ಮೇಲೆ ಪ್ರಮುಖರಾದ ಧೋಂಡಿಬಾ ನರೋಟೆ, ಗೀತಾ ಪಂಡಿತ್ ಚಿದ್ರಿ, ಬಾಲಾಜಿ ನಾಯಕ, ಎಂ.ಎಸ್. ಕಟಗಿ, ಕೊಂಡಿಬಾ ಪಾಂಡ್ರೆ, ಬಾಬು ಮಲ್ಕಾಪುರ, ಅಂಗದರಾವ ಸಿಂಗಾಡೆ, ಮಹೇಶ್ವರ ಸ್ವಾಮಿ, ವೆಂಕಟರಾವ ಮದಕಟ್ಟಿ, ಲೋಕೇಶ ಮರ್ಜಾಪುರ, ರಾಮ ನರೋಟೆ, ಸಂತೋಷ ಜೋಳದಾಪಕೆ ಸೇರಿದಂತೆ 40 ವಿವಿಧ ಸಮಾಜ ಸಂಘದ ಅಧ್ಯಕ್ಷರು ಉಪಸ್ಥಿತರಿದ್ದರು.

ಜಯಂತಿ ಉತ್ಸವ ಸಮಿತಿ ಪ್ರಧಾನ ಕಾರ್ಯದರ್ಶಿ ಮಾಳಪ್ಪ ಅಡಸಾರೆ ಸ್ವಾಗತಿಸಿದರು. ವಿಜಯಕುಮಾರ ಡುಮ್ಮೆ ನಿರೂಪಿಸಿದರೆ, ವೆಂಕಟರಾವ ಡೊಂಬಾಳೆ ವಂದಿಸಿದರು.

ಮೆರವಣಿಗೆ: ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ನಗರದ ಬೊಮ್ಮಗೊಂಡೇಶ್ವರ ವೃತ್ತದಿಂದ ಮಾತೋಶ್ರೀ ಪುಣ್ಯಶ್ಲೋಕ ಅಹಿಲ್ಯಾದೇವಿ ಹೋಳ್ಕರ್ ಅವರ ಭಾವಚಿತ್ರದ ಮೆರವಣಿಗೆ ಅದ್ಧೂರಿಯಾಗಿ ಜರುಗಿತು. ಡೊಳ್ಳು ಕುಣಿತ, ಹಲಗೆ ವಾದನದ ಜೊತೆಗೆ ಯುವಕರು ಹೆಜ್ಜೆ ಹಾಕಿದರು. ಇದೇ ವೇಳೆ ಮಾಜಿ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ, ಶ್ರೀಮಂತ ಭೂಷಣಸಿಂಹ ರಾಜೆ ಹೋಳ್ಕರ್, ಈಶ್ವರಸಿಂಗ್ ಠಾಕೂರ್, ಪಂಡಿತ್ ಚಿದ್ರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಮೆರವಣಿಗೆಯು ಬೊಮ್ಮಗೊಂಡೇಶ್ವರ ವೃತ್ತ, ಬಸವೇಶ್ವರ ವೃತ್ತ, ಭಗತಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತದ ಮುಖಾಂತರ ರಂಗಮಂದಿರ ತಲುಪಿತು.

## ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ

# 'ಶಾಹೀನ್'ಗೆ 500 ವೈದ್ಯಕೀಯ ಸೀಟು ನಿರೀಕ್ಷೆ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 16 : ನಗರದ ಶಾಹೀನ್ ಪದವಿಪೂರ್ವ ವಿಜ್ಞಾನ ಕಾಲೇಜು ವಿದ್ಯಾರ್ಥಿಗಳು ಪ್ರಸಕ್ತ

ಸಾಲಿನ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್) ಯಲ್ಲಿ ಉತ್ತಮ ಸಾಧನೆ

ಮಾಡಿದ್ದಾರೆ. ಸೈಮ್ ಶಾಬಾಜ್ 587 ಅಂಕ, ಅಲ್ಮಾ ಫಾತಿಮಾ 586 ಅಂಕ, ಅನಸ್ ಅಲಂ 578 ಅಂಕ, ಮೆಹನಾಜ್ ಫಾತಿಮಾ 577 ಅಂಕ, ಮಹಮ್ಮದ್ ಅರಹಂ ಖಾನ್ 577 ಅಂಕ, ಮಹಮ್ಮದ್ ತೌಫಿಕ್ 575 ಅಂಕ, ಅಜಿತ್ 575 ಅಂಕ, ಯುನುಸ್ ಅಖ್ತರ್ 574 ಅಂಕ, ಇಬ್ರಾಹಿಂ ಸಿದ್ದಿಕಿ 574 ಅಂಕ, ಅಹಮ್ಮದ್ ಅಬ್ದುಲ್ಲಾ 571 ಅಂಕ, ಯಾಸೀರಾ ಫಿರದೋಸ್ 568 ಅಂಕ, ಹಾಶಿಮ್ ಮಹಮ್ಮದ್ ಅಸೀಮ್ 568 ಅಂಕ, ಮಹಮ್ಮದ್ ಹಸನ್ ಅಕ್ಮಲ್ 565 ಅಂಕ, ಶೇಕ್ ಮಹಮ್ಮದ್ ಉಮರ್ 563 ಅಂಕ, ಅಸ್ರಾ ಸಿದ್ದಿಕಿ 563 ಅಂಕ, ಮಹಮ್ಮದ್ ಅಬ್ರಾರ್ ಅಖ್ತರ್ 563 ಅಂಕ, ಅಬ್ದುಲ್ ರೌಫ್ ಖಾನ್ 559 ಅಂಕ, ಓವೈಸ್ ಅಫ್ಜಲ್ ಅನ್ಸಾರಿ 559 ಅಂಕ, ದಿನೇಶ್ ಕೋರೆ 558 ಅಂಕ, ಖುರೈಶಿ ಅರಿಶಾ 557 ಅಂಕ, ಮಹಮ್ಮದ್ ಕೈಫ್ ಅಲಿ 556 ಅಂಕ, ಮಹಮ್ಮದ್ ಹಝಿಕ್ 556 ಅಂಕ,

ಉಮೈರ್ ಯುಸೂಫ್ 556 ಅಂಕ ಪಡೆದು ಸಾಧನೆ ತೋರಿದ್ದಾರೆ. ಈ ಬಾರಿ ಕಾಲೇಜಿನ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸರ್ಕಾರಿ ಕೋಟಾದಡಿ ವೈದ್ಯಕೀಯ ಸೀಟು ಗಿಟ್ಟಿಸುವ ನಿರೀಕ್ಷೆ ಇದೆ ಎಂದು ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ತಿಳಿಸಿದ್ದಾರೆ. ಕಾಲೇಜು ಅಖಿಲ ಭಾರತ ಮಟ್ಟದ ಒಟ್ಟು ವೈದ್ಯಕೀಯ ಸೀಟುಗಳ ಪೈಕಿ ಶೇ 1 ರಷ್ಟು ಹಾಗೂ ರಾಜ್ಯದ ಒಟ್ಟು ಸೀಟುಗಳ ಪೈಕಿ ಶೇ 15 ರಷ್ಟು ಸೀಟುಗಳನ್ನು ಪಡೆಯಲಿದೆ ಎಂದು

ಹೇಳಿದ್ದಾರೆ. ಕಾಲೇಜು 20 ವರ್ಷಗಳ ಅವಧಿಯಲ್ಲಿ ಸರ್ಕಾರಿ ಕೋಟಾದಡಿ 6,000 ಸೀಟು ಹಾಗೂ ಐದು ವರ್ಷಗಳ ಅವಧಿಯಲ್ಲಿ 2,500 ಸೀಟುಗಳನ್ನು ಗಳಿಸಿದೆ ಎಂದು ತಿಳಿಸಿದ್ದಾರೆ. ಈ ವರ್ಷ ನೀ???ನಲ್ಲಿ ಸಾಧನೆಗೈದ ವಿದ್ಯಾರ್ಥಿಗಳಲ್ಲಿ ಗ್ರಾಮೀಣ ಭಾಗದ ಹಾಗೂ ಕನ್ನಡ ಮಾಧ್ಯಮದ ವಿದ್ಯಾರ್ಥಿಗಳು ಅಧಿಕ ಸಂಖ್ಯೆಯಲ್ಲಿದ್ದಾರೆ. ಉತ್ತಮ ಶೈಕ್ಷಣಿಕ ವಾತಾವರಣ, ಆಡಳಿತ ಮಂಡಳಿ, ಉಪನ್ಯಾಸಕರ ಮಾರ್ಗದರ್ಶನ, ಪಾಲಕರ ಸಹಕಾರ ಹಾಗೂ ವಿದ್ಯಾರ್ಥಿಗಳ ಪರಿಶ್ರಮದಿಂದ ಕಾಲೇಜು ನೀನಲ್ಲಿ ಉತ್ತಮ ಸಾಧನೆ ತೋರಲು ಸಾಧ್ಯವಾಗಿದೆ ಎಂದು ಹೇಳಿದ್ದಾರೆ. 40 ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಎಎಸಿ ದ್ವಿತೀಯ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಯಾಗಿ, ಸರ್ಕಾರಿ ವಸತಿನಿಲಯಗಳಲ್ಲಿ ಸೀಟು ಪಡೆದ ಜಿಲ್ಲೆಯ ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳ 40 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶಾಹೀನ್ ಪದವಿಪೂರ್ವ ವಿಜ್ಞಾನ ಕಾಲೇಜಿನಲ್ಲಿ ಉಚಿತ ಪಿಯು ಶಿಕ್ಷಣ ಕೊಡಲಾಗುವುದು ಎಂದು ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ತಿಳಿಸಿದ್ದಾರೆ. ಶಿಕ್ಷಣ ಇಲಾಖೆಯ ಮೆರಿಟ್ ಪಟ್ಟಿ ಆಧಾರದಲ್ಲಿ ವಿದ್ಯಾರ್ಥಿಗಳನ್ನು ಆಯ್ಕೆ

ಮಾಡಲಾಗುವುದು. ಕನ್ನಡ ಮಾಧ್ಯಮ ವಿದ್ಯಾರ್ಥಿಗಳಿಗೆ ಪ್ರಾತಿನಿಧ್ಯ ನೀಡಲಾಗುವುದು ಎಂದು ಹೇಳಿದ್ದಾರೆ. ಹಿಂದೆ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಜಿಲ್ಲಾಡಳಿತದಿಂದ ಖಾಸಗಿ ಕಾಲೇಜುಗಳಲ್ಲಿ

ಉಚಿತ ಸೀಟುಗಳನ್ನು ಕೊಡಿಸಲಾಗಿತ್ತು. ಆಗ ಶಾಹೀನ್ ಕಾಲೇಜಿನಲ್ಲಿ ಜಿಲ್ಲಾಡಳಿತ ಆಯ್ಕೆ

ಮಾಡಿದ ವಿದ್ಯಾರ್ಥಿಗಳಿಗೆ ಉಚಿತ ಸೀಟುಗಳನ್ನು ಕಲ್ಪಿಸಲಾಗಿತ್ತು. ಈಗಲೂ ಶಾಹೀನ್ ಬಡ

ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಲು ಸಿದ್ಧವಿದೆ ಎಂದು ತಿಳಿಸಿದ್ದಾರೆ.

# ಬೇಡಿಕೆಯಂತೆ ಸೋಯಾಬೀನ್ ಬಿತ್ತನೆ ಬೀಜ, ಆತಂಕ ಬೇಡ: ಈಶ್ವರ ಖಂಡ್ರೆ

ಬೀದರ, ಜೂ.16: ಬೀದರ್ ಜಿಲ್ಲೆಯ ರೈತರ ಬೇಡಿಕೆಗೆ ಅನುಗುಣವಾಗಿ ಸೋಯಾಬೀನ್ ಬಿತ್ತನೆ ಬೀಜ ಪೂರೈಕೆ ಮಾಡಲು ಕ್ರಮ ವಹಿಸಲಾಗಿದ್ದು, ರೈತರು ಆತಂಕ ಪಡುವ ಅಗತ್ಯವಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ ಭರವಸೆ ನೀಡಿದ್ದಾರೆ.

ಈ ಬಾರಿ ವಾಡಿಕೆಗಿಂತಲೂ ಉತ್ತಮ ಮಳೆಯಾಗಿರುವ ಕಾರಣ ಸೋಯಾಬಿನ್ ಬಿತ್ತನೆ ಬೀಜಕ್ಕೆ ಬೇಡಿಕೆ ಹೆಚ್ಚಾಗಿದೆ. ಪ್ರಸಕ್ತ ಸಾಲಿನಲ್ಲಿ 102500 ಕ್ವಿಂಟಾಲ್ ಸೋಯಾಬೀನ್ ಬಿತ್ತನೆ ಬೀಜ ಮಂಜೂರಾಗಿದ್ದು, ಈಗಾಗಲೇ 87500 ಕ್ವಿಂಟಾಲ್ ವಿತರಣೆ ಮಾಡಲಾಗಿದೆ. 15000 ಕ್ವಿಂಟಾಲ್ ಸೋಯಾಬೀನ್ ಬಿತ್ತನೆ ಬೀಜ ಬೀದರ್ ಗೆ ರವಾನೆ ಆಗಿದ್ದು 2-3 ದಿನಗಳಲ್ಲಿ ರೈತರಿಗೆ ಲಭ್ಯವಾಗಲಿದೆ ಎಂದು ತಿಳಿಸಿದ್ದಾರೆ.

ಕಳೆದ ವರ್ಷ ಜಿಲ್ಲೆಯಲ್ಲಿ 112000 ಕ್ವಿಂಟಾಲ್ ಸೋಯಾಬಿನ್ ಬಿತ್ತನೆ ಬೀಜಗಳ ವಿತರಣೆ ಮಾಡಲಾಗಿತ್ತು. ಈ ಬಾರಿ ಉತ್ತಮ ಪೂರ್ವ ಮುಂಗಾರು ಮಳೆಯಿಂದ ಬೇಡಿಕೆ ಹೆಚ್ಚಾಗಿದೆ. ಹೀಗಾಗಿ ನಿನ್ನೆ ಯಾದಗಿರಿಯಲ್ಲಿ ನಡೆದ ಆರೋಗ್ಯ ಆವಿಷ್ಕಾರ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳಿಗೆ ಈ ಸಂಬಂಧ ಮನವಿ ಸಲ್ಲಿಸಿದ್ದು, 15000 ಕ್ವಿಂಟಾಲ್ ಸೋಯಾಬೀನ್ ಬಿತ್ತನೆ ಬೀಜವನ್ನು ಮಾರುಕಟ್ಟೆಯಲ್ಲಿ ಖರೀದಿಸಿ ಹಚ್ಚುವರಿಯಾಗಿ ವಿತರಿಸಲು ಸಮ್ಮತಿಸಿದ್ದಾರೆ ಎಂದು ಈಶ್ವರ ಖಂಡ್ರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಧ್ಯಾರ್ಥಿಗಳ ಸಾಧನೆ ಇತರ ವಿಧ್ಯಾರ್ಥಿಗಳಿಗೆ ಪ್ರೇರಣೆಯಾಗಲಿ : ಶಾಸಕ ತುನ್ನೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಸ್ಪರ್ಧಾತ್ಮಕ ಯುಗದಲ್ಲಿ ನಮ್ಮ ಭಾಗ ಶೈಕ್ಷಣಿಕವಾಗಿ ಇನ್ನೂ ಪ್ರಗತಿ ಸಾಧಿಸುವುದು ಬಹಳಷ್ಟಿದೆ, ಆರ್ಯಭಟ್ಟ ಕಾಲೇಜಿನ ಪಿಯು ವಿಧ್ಯಾರ್ಥಿಗಳು ನೀಟ್ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ, ಇದು ಇತರ ವಿಧ್ಯಾರ್ಥಿಗಳಿಗೆ ಬರುವ ದಿನಗಳಲ್ಲಿ ಪ್ರೇರಣೆಯಾಗಲಿ ಎಂದು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಸಲಹೆ ನೀಡಿದರು.

ನಗರದ ಹೊರವಲಯದಲ್ಲಿರುವ ಆರ್ಯಭಟ್ಟ ಅಂತರಾಷ್ಟ್ರೀಯ ಅಕಾಡೆಮಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪಿಯುಸಿ ಅಭ್ಯಾಸದ ನಂತರ ನಡೆದ ನೀಟ್ ಪರಿಕ್ಷೆಯಲ್ಲಿ ಗಣನೀಯ ಸಾಧನೆ ಮಾಡಿದ 6 ವಿಧ್ಯಾರ್ಥಿಗಳ ಪೈಕಿ ಹಾಜರಿದ್ದ 5 ವಿಧ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಗಿರಿ ಜಿಲ್ಲೆಯಲ್ಲಿ ಎಸ್ ಎಸ್ ಎಲ್ ಸಿ ನಂತರ ಪೋಷಕರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಲಿ, ಜೊತೆಗೆ ನೀಟ್ ತರಭೇತಿ ಸಿಗಲಿ ಎಂಬ ದೃಷ್ಟಿಯಿಂದ ಬೇರೆ ನಗರಗಳಲ್ಲಿ ಅಭ್ಯಾಸಕ್ಕೆ ಸೇರಿಸುತ್ತಾರೆ, ಆದರೆ ಇಲ್ಲಿ ಆರ್ಯಭಟ್ಟ ಶಿಕ್ಷಣ ಸಂಸ್ಥೆಯವರು ವಿಧ್ಯಾರ್ಥಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಅನುಭವಿ ವಿಷಯ ತಜ್ಞರಿಂದ ವಿಧ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರಿಕ್ಷೆಗಳನ್ನು ಎದುರಿಸಲು ಸೂಕ್ತ ತರಬೇತಿ ನೀಡಿದ ಪರಿಣಾಮ ಈ ವಿಧ್ಯಾರ್ಥಿಗಳು ಸಾಧನೆ ಮಾಡಿದ್ದಾರೆ, ಬರುವ ದಿನಗಳಲ್ಲಿ ಶಿಕ್ಷಣ ಸಂಸ್ಥೆಯವರು ಇನ್ನೂ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಿ, ಹೆಚ್ಚಿನ ಬಡ ವಿಧ್ಯಾರ್ಥಿಗಳ ಆಸೆ-ಆಕಾಂಕ್ಷೆಗಳು ಈಡೇರಲಿ ಎಂದು ಅಭಿಪ್ರಾಯ ಪಟ್ಟರು.

ಇಂದು ನಾವೆಲ್ಲರೂ ಗಮನಿಸಿದಂತೆ ಆಂಗ್ಲ ಭಾಷೆಯಲ್ಲಿ ಅಭ್ಯಾಸ ಮಾಡಿದ ವಿಧ್ಯಾರ್ಥಿಗಳಿಗಿಂತ ಮಾತೃಭಾಷೆ ಕನ್ನಡ ಭಾಷೆಯಲ್ಲಿ ಅಭ್ಯಾಸ ಮಾಡಿದ ವಿಧ್ಯಾರ್ಥಿಗಳಲ್ಲಿ ಪ್ರತಿಭೆ ಹಾಗೂ ಆತ್ಮವಿಶ್ವಾಸ ಹೆಚ್ಚಾಗಿರುವುದನ್ನು ಕಾಣುತ್ತಿದ್ದೇವೆ, ಅದಕ್ಕೆ ಉದಾಹರಣೆ ಕನ್ನಡದಲ್ಲಿ ಅಭ್ಯಾಸ ಮಾಡಿ, ನೀಟ್‌ನಲ್ಲಿ ಉತ್ತಮ ಸಾಧನೆ ಮಾಡಿದ ವಿಧ್ಯಾರ್ಥಿ ನಮ್ಮ ಮುಂದೆಯೇ ಇರುವುದು ಸಂತಸ ತಂದಿದೆ ಎಂದರು.

ವಿಧ್ಯಾರ್ಥಿಗಳಲ್ಲಿ ಗುರಿ, ಪರಿಶ್ರಮದಿಂದ ಅಭ್ಯಾಸ ಮಾಡಿದರೇ ಯಶಸ್ಸು ಖಚಿತ ಎಂದು ನೀವೂ ತೋರಿಸಿಕೊಟ್ಟಿದ್ದೀರಿ, ಇಂದು ಶಿಕ್ಷಣಕ್ಕೆ ಹೆಚ್ಚಿನ ಮಹತ್ವವಿದೆ, ಅದರಿಂದ ಮಾತ್ರ ನಾವೂ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ತಿಳಿಸಿದರು.

ಇನ್ನೋರ್ವ ಮುಖ್ಯ ಅತಿಥಿಗಳಾಗಿದ್ದ ಯೀಮ್ಸ್ ನಿರ್ದೇಶಕರಾದ ಡಾ. ಸಂದೀಪ ಪಾಟೀಲ್ ಮಾತನಾಡಿ, ಮಕ್ಕಳ ಶೈಕ್ಷಣಿಕ ಬೆಳವಣಿಗೆಯಲ್ಲಿ ನಮ್ಮ ಪೋಷಕರ ಪಾತ್ರ ಮಹತ್ವದಾಗಿದೆ, ವಿಧ್ಯಾರ್ಥಿಗಳು ಒಳ್ಳೇಯ ಹವ್ಯಾಸಗಳನ್ನು ಮೈಗೂಡಿಸಿಕೊಂಡು ಉನ್ನತ ಗುರಿ ಕಟ್ಟಿಕೊಂಡು ಶ್ರದ್ದೆಯಿಂದ ಅಭ್ಯಾಸ ಮಾಡಿ, ಗುರಿ ತಲುಪಿ ಸಮಾಜಕ್ಕೆ ನಿಮ್ಮದೇ ಆದ ಕೊಡುಗೆ ನೀಡಿ ಎಂದು ಹೇಳಿದರು.

ನಿವೆಲ್ಲರೂ ಬಹುತೇಕ ವೈಧ್ಯಕೀಯ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡಿದ್ದೀರಿ, ವಿಷಯಗಳನ್ನು ಸಂಪೂರ್ಣವಾಗಿ ಅಭ್ಯಾಸ ಮಾಡಬೇಕು, ಜೊತೆಗೆ ಪ್ರಾಯೋಗಿಕವಾಗಿ ಕಲಿಯಬೇಕು ಅಂದಾಗ ಮಾತ್ರ ನೀವೂ ಮುಂದೆ ರೋಗಿಗಳಿಗೆ ಉತ್ತಮ ಚಿಕಿತ್ಸೆ ನೀಡಲು ಸಹಕಾರಿಯಾಗುತ್ತದೆ ಎಂದು ಕಿವಿ ಮಾತು ಹೇಳಿದರು.

ಯಾವುದೇ ಶಿಕ್ಷಣ ಸಂಸ್ಥೆಯಲ್ಲಿ ಮೊದಲು ಅಲ್ಲಿ ಉತ್ತಮ ಪರಿಸರ ನಿರ್ಮಾಣ ಮಾಡುವುದು ಅವಶ್ಯಕ, ಈ ನಿಟ್ಟಿನಲ್ಲಿ ಆಡಳಿತ ಮಂಡಳಿಯವರು ಗಮನ ನೀಡಿರುವುದು ಮಕ್ಕಳ ಶೈಕ್ಷಣಿಕ ಬೆಳವಣಿಗೆ ಮೇಲೆ ಸಕರಾತ್ಮಕ ಪರಿಣಾಮ ಬೀರುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ವೇದಿಕೆ ಮೇಲೆ ಪಿ.ಅರವಿಂದಾಕ್ಷಣ, ವೆಂಕಟರಡ್ಡಿ ಮಾಲಿ ಪಾಟೀಲ್ ಅನಪೂರ ಉಪಸ್ಥಿತರಿದ್ದರು.

ಅಕಾಡೆಮಿಯ ಅಧ್ಯಕ್ಷ ಸುಧಾ-ಕರರಡ್ಡಿ ಮಾಲಿ ಪಾಟೀಲ್ ಸ್ವಾಗತಿಸಿ ಪ್ರಾಸ್ತಾಪಿಕ ಮಾತನಾಡಿ, ನಾನೂ ನನ್ನ ಜೀವನವನ್ನು ಒಬ್ಬ ಶಿಕ್ಷಕನಾಗಿ ಆರಂಭಿಸಿದೆ, ಶಿಕ್ಷಣದಲ್ಲಿ ಹಿಂದುಳಿದಿರುವ ನಮ್ಮ ಭಾಗದಲ್ಲಿ ವಿಧ್ಯಾರ್ಥಿಗಳಿಗೆ ಎಲ್ಲಾ ಸೌಕರ್ಯಗಳು ಇರುವ ಒಂದು ಒಳ್ಳೆಯ ಶಾಲೆ-ಕಾಲೇಜು ತೆರೆಯಬೇಕು ಎಂಬ ಉದ್ದೇಶದಿಂದ ಕಳೆದ 3 ವರ್ಷದಿಂದ ಪಿಯು ಕಾಲೇಜ್ ಆರಂಭಿಸಿದೆ, ವಿಧ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರಿಕ್ಷೆಗಳಲ್ಲಿ ಹೇಗೆ ಯಶಸ್ಸು ಗಳಿಸಬೇಕು ಎಂಬ ಆತಂಕಕ್ಕೆ ನಮ್ಮ ತಂಡ ಕ್ರೀಯಾಶೀಲವಾಗಿ ಕೆಲಸ ಮಾಡಿದ ಪರಿಣಾಮ ವಿಧ್ಯಾರ್ಥಿಗಳು ಇಂದು ನೀಟ್‌ನಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ, ಬರುವ ದಿನಗಳಲ್ಲಿ ನಾವೂ ಇನ್ನೂ ಪರಿಶ್ರಮದಿಂದ ವಿಧ್ಯಾರ್ಥಿಗಳಿಗೆ ಉತ್ತಮ ಬೋಧನೆ-ತರಬೇತಿ ನೀಡಿ, ಜಿಲ್ಲೆಯಲ್ಲಿ ಶೈಕ್ಷಣಿಕವಾಗಿ ಹೊಸ ವಾತಾವರಣ ನಿರ್ಮಾಣ ಮಾಡುವುದೇ ನಮ್ಮ ಸಂಕಲ್ಪವಾಗಿದೆ ಎಂದು ಹೇಳಿದರು.

ಪ್ರಾಂಶುಪಾಲ ಹರಿನಾಥರಡ್ಡಿ ನಿರೂಪಿಸಿದರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸರಡ್ಡಿ ಮಾಲಿ ಪಾಟೀಲ್ ವಂದಿಸಿದರು,

# ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು: ಡಾ.ಸಿ.ನಾರಾಯಣಸ್ವಾಮಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16-ಸರ್ಕಾರದ ವಿವಿಧ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಗ್ರಾಮ ಪಂಚಾಯತಿಗಳ ಅಭಿವೃದ್ಧಿಗೆ ಅಧಿಕಾರಿಗಳು ಶ್ರಮಿಸಬೇಕು, ಪ್ರತಿ ಪಂಚಾಯತಿಗಳಿಂದ ಬರುವ ಆದಾಯವನ್ನು ಅನುದಾನದ ರೂಪದಲ್ಲಿ ಸಾರ್ವಜನಿಕರಿಗೆ ಪ್ರೋತ್ಸಾಹವಾಗಿ ನೀಡಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕು ಎಂದು 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷ ಡಾ.ಸಿ.ನಾರಾಯಣಸ್ವಾಮಿ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ 5ನೇ ರಾಜ್ಯ ಹಣಕಾಸು ಆಯೋಗದ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿವಿಧ ಸರ್ಕಾರಿ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಡಳಿತಾತ್ಮಕ ಸಮಸ್ಯೆಗಳನ್ನು ಪರಿಹರಿಸಲು ಆಯೋಗದಿಂದ ಶಿಫಾರಸು ಮಾಡಲಾಗುವುದು. ಕಟ್ಟಡ ತೆರಿಗೆ, ವಾಣಿಜ್ಯ ಮಳಿಗೆಗಳ ತೆರಿಗೆ ಬಾಕಿ ವಸೂಲಾತಿಗಳನ್ನು ಕ್ರಮ ವಹಿಸಬೇಕು ಎಂದರು.

ನಗರದ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಆರ್ಥಿಕ ಸ್ಥಿತಿಗಳನ್ನು ಪರಿಶೀಲಿಸಿ ನಂತರ ಸಂಪನ್ಮೂಲಗಳ ಹಂಚಿಕೆ ಹಾಗೂ ವಿಭಜನೆಯ ಶಿಫಾರಸ್ಸುಗಳ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಆಸ್ತಿ ತೆರಿಗೆ, ಉದ್ದಿಮೆ ಪರವಾನಗಿ, ಬಾಡಿಗೆ ಆದಾಯ, ಬಳಕೆದಾರರ ಶುಲ್ಕ, ಇನ್ನಿತರ ಸಂಗ್ರಹ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಸ್ವಂತ ಸಂಪನ್ಮೂಲ ಕ್ರೋಢೀಕರಣಕ್ಕೆ ನಗರ ಸ್ಥಳೀಯ ಸಂಸ್ಥೆಗಳು, ಪಂಚಾಯತ್ ರಾಜ್ ಸಂಸ್ಥೆಗಳು ಹೆಚ್ಚಿನ ಆದ್ಯತೆ ನೀಡಬೇಕು ಅವರು ತಿಳಿಸಿದರು.

ನಗರ ಸ್ಥಳೀಯ ಸಂಸ್ಥೆಗಳಿಗೆ ಸಂಬಂಧಿಸಿದಂತೆ ತೆರಿಗೆ ಪಾವತಿ ಖಾತಾ ಪ್ರತಿ ದಾಖಲೆಗಳನ್ನು ತ್ವರಿತವಾಗಿ ನೀಡುವಿಕೆ, ನೀರು ಸರಬರಾಜು, ಒಳಚರಂಡಿ, ಬೀದಿ ದೀಪಗಳು, ಘನತ್ಯಾಜ್ಯ ನಿರ್ವಹಣೆ, ಇನ್ನಿತರ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ವಿವರಿಸಿದರು.

ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಮೂಲ ಸೌಕರ್ಯ ಒದಗಿಸಲು ಹೆಚ್ಚು ಅನುದಾನ, ವಿವಿಧ ಮಂಜೂರು ಅಗತ್ಯತೆ ಸೇರಿದಂತೆ ಬೇರೆ ಬೇರೆ ವಿಷಯಗಳ ಕುರಿತು ಆಯೋಗದ ಅಧ್ಯಕ್ಷರಿಗೆ ವಿನಂತಿಸಿದರು.

ಈ ಸಂದರ್ಭದಲ್ಲಿ 5ನೇ ರಾಜ್ಯ ಹಣಕಾಸು ಆಯೋಗದ ಸದಸ್ಯರಾದ ಮೊಹಮ್ಮದ್ ಸನಾವುಲ್ಲಾ, ಆರ್.ಎಸ್.ಪೊಂಡೆ, ಆಪ್ತ ಕಾರ್ಯದರ್ಶಿ ಕೆ.ಯಾಲಕ್ಕಿಗೌಡ, ಸಮಾಲೋಚಕರಾದ ಎಂ.ಕೆ ಕೆಂಪೇಗೌಡ, ಸಿ.ಜಿ.ಸುಪ್ರಸನ್ನ, ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ, ಬಳ್ಳಾರಿ ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮ್ಮೈರ್, ವಿಜಯನಗರ ಜಿಪಂ ಸಿಇಒ ನೊಂಗ್ಜ್ಯೆ ಮೊಹಮ್ಮದ್ ಅಲಿ ಅಕ್ರಮ್ ಶಾ, ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಮುಲ್ಲಂಗಿ ನಂದೀಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# 4 ಕೋ.ರೂ.ಗಳ ಕಾಮಗಾರಿಯ ಅಡಿಗಲ್ಲು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 16 : ಲೋಕೋಪಯೋಗಿ ಇಲಾಖೆ ವತಿಯಿಂದ 2024-25ನೇ ಸಾಲಿನ ಲೆಕ್ಕಶೀರ್ಷಿಕ ಅಪೆಂಡಿಕ್ಸ್ ಇ ಅನುದಾನದ ಅಡಿಯಲ್ಲಿ ಗುರುಮಠಕಲ್ ಮತಕ್ಷೇತ್ರದ ಮುಧೋಳ, ಯಲಗೇರಾ (ಎಸ್.ಎಚ್-10) ರಿಂದ ಆಂಧ್ರ ಬಾರ್ಡರ (ಎಸ್.ಎಚ್-127) ಕಿ.ಮೀ. 59 ರಿಂದ 64ರ ವರೆಗೆ ರಸ್ತೆ ನಿರ್ಮಾಣ ಅಂದಾಜು ಮೊತ್ತ 4 ಕೋ.ರೂ.ಗಳ ಕಾಮಗಾರಿಯ ಅಡಿಗಲ್ಲು ಕಾರ್ಯಕ್ರಮವನ್ನು ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಮಾಧವಾರ ಗ್ರಾಮದಲ್ಲಿ ಇದೇ 2025ರ ಜೂನ್ 17 ಬೆಳಿಗ್ಗೆ 10 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ, ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ಲೋಕೋಪಯೋಗಿ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಸತೀಶ ಜಾರಕಿಹೊಳಿ ಅವರು ಮುಧೋಳ, ಯಲಗೇರಾ (ಎಸ್.ಎಚ್-10) ರಿಂದ ಆಂಧ್ರ ಬಾರ್ಡರ (ಎಸ್.ಎಚ್-127) ಕಿ.ಮೀ. 59 ರಿಂದ 64ರ ವರೆಗೆ ರಸ್ತೆ ನಿರ್ಮಾಣ ಅಂದಾಜು ಮೊತ್ತ 4 ಕೋ.ರೂ.ಗಳ ಕಾಮಗಾರಿಯ ಅಡಿಗಲ್ಲು ಕಾರ್ಯಕ್ರಮವನ್ನು ಉದ್ಘಾಟನೆಯನ್ನು ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.


ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ ಅಧ್ಯಕ್ಷತೆಯಲ್ಲಿ ಶಿಲಾನ್ಯಾಸರು ನೆರವೇರಲಿದೆ.

ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಮಾಧವಾರ ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ರೀ ಶಂಕ್ರಪ್ಪ ಅತಿಥಿಗಳಾಗಿ ಪಾಲ್ಗೋಳುವರು.

# ವಿದ್ಯಾರ್ಥಿಗಳ ಯಶಸ್ವಿಗೆ ಶಿಕ್ಷಕರ ಶ್ರಮವೇ ಕಾರಣ : ಹರೀಶ್ವರಯ್ಯ ಹಿರೇಮಠ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ಜಂಗಮ ಸಮಾಜದ ಮುಖಂಡರಾದ ಹರೀಶ್ವರಯ್ಯ ಹಿರೇಮಠ ಮಾತನಾಡಿ ನಮ್ಮ ತಂದೆ ಈ ಶಾಲೆಯಲ್ಲಿ ಸೇವೆ ಸಲ್ಲಿಸಿದ್ದು ಅವರು ಇಂದು ಅನಾರೋಗ್ಯದಿಂದ ಬಳಲುತ್ತಿದ್ದು ಅವರು ಬರದೇ ಇದ್ದ ಕಾರಣದಿಂದ ಅವರ ಪರವಾಗಿ ವೇದಿಕೆ ಮೇಲೆ ನನ್ನನ್ನು ಕರೆದು ಸನ್ಮಾನಿಸಿದ್ದು ನನ್ನ ತಂದೆಯ ಗುರುವಿನ ಸೇವೆಗೆ ನನಗೆ ಸಂದ ಗೌರವವಾಗಿದ್ದು ಇಂತಹ ಸಂದರ್ಭ ಕೇವಲ ಶಿಕ್ಷಕ ವೃತ್ತಿಯಲ್ಲಿ ಸೇವೆ ಸಲ್ಲಿಸಿದವರಿಗೆ ಮಾತ್ರ ದೊರೆಯಲು ಸಾಧ್ಯ ಎಂದರು.

ಪ್ರಪಂಚದಲ್ಲಿಯೇ ಜೀವಂತ ದೇವರುಗಳ ದರ್ಶನವಾಗುವ ದೇವಾಲಯ ಶಾಲೆಯೊಂದೇ. ಈ ಶಾಲೆಯಲ್ಲಿಯೇ ಪ್ರತಿಯೊಬ್ಬರು ಶಿಕ್ಷಣ ಮತ್ತು ಸಂಸ್ಕಾರವಂತರಾಗಿ ಹೊರಬಂದು ಜೀವನದಲ್ಲಿ ಯಶಸ್ವಿ ವ್ಯಕ್ತಿಗಳಾಗುತ್ತಾರೆ ಎಂದು ಶಿಕ್ಷಕ ಈರಪ್ಪ ಗುಡಿಹಿಂದಲ ಹೇಳಿದರು.

ತಾಲೂಕಿನ ಮಂಡಲಗಿರಿ ಗ್ರಾಮದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ 1998-99ನೆಯ ಹತ್ತನೇ ತರಗತಿಯ ವಿದ್ಯಾರ್ಥಿ ವಿದ್ಯಾರ್ಥಿನಿಯರಿಂದ ಗುರುವಂದನ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಈ ವೇಳೆಯಲ್ಲಿ ಶಿಕ್ಷಕ ಈರಪ್ಪ ಗುಡಿಹಿಂದಲಾಸ್ ಮಾತನಾಡಿ ಶಾಲೆ ಎಂಬ ಕಟ್ಟಡವು ಪ್ರತಿಯೊಬ್ಬರ ಜೀವನದಲ್ಲಿ ಮಹೋನ್ನತ ಸ್ಥಾನ ಹೊಂದಿರುವ ಕಟ್ಟಡವಾಗಿದ್ದು ಅಲ್ಲಿ ಕಾರ್ಯನಿರ್ವಹಿಸುವ ಶಿಕ್ಷಕರು ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಸಂಸ್ಕಾರವನ್ನು ನೀಡಿ ಜೀವನದಲ್ಲಿ ಯಶಸ್ವಿಯಾಗುವ ಮಾರ್ಗವನ್ನು ಕಂಡುಕೊಳ್ಳುವಂತೆ ನಿರ್ದೇಶನ ನೀಡುವ ಗುರುಗಳಾಗಿದ್ದಾರೆ. ಹೆತ್ತವರು ಏನು ಅರಿಯದ 5 1/2 ವರ್ಷದ ಮಗುವನ್ನು ಕರೆದುಕೊಂಡು ಬಂದು ಶಾಲೆಯಲ್ಲಿರುವ ಜೀವಂತ ದೇವರೆನಿಸಿಕೊಳ್ಳುವ ಶಿಕ್ಷಣ ಕೈಯಲ್ಲಿ ಕೊಟ್ಟು ಉತ್ತಮವಾದ ಶಿಕ್ಷಣ, ಸಂಸ್ಕಾರ ಹಾಗೂ ಮಾರ್ಗದರ್ಶನಗಳನ್ನು ನೀಡುವಂತೆ ಮನವಿ ಸಲ್ಲಿಸುತ್ತಾರೆ ನಂತರ ಅವರ ಜೀವನದ ಯಶಸ್ವಿಯ ಅವಿಭಾಜ್ಯ ಅಂಗವೆಂದಂತೆ ಗುರುವಿನ ಸ್ಥಾನದಲ್ಲಿರುವ ಜೀವಂತ ದೇವರು ಏನು ಅರಿಯದ ಮಗುವನ್ನು ಸುಸಂಸ್ಕೃತ ನಾಗರಿಕನನ್ನಾಗಿ ನಿರ್ಮಿಸುವಲ್ಲಿ ಯಶಸ್ವಿಗೊಳ್ಳುತ್ತಾರೆ. ಅಂತಹ ಶಿಕ್ಷಕರಿಗೆ ಈ ದಿನ ವಂದನೆಯನ್ನು ಅರ್ಪಿಸುತ್ತಿರುವ ಶಿಷ್ಯ ಬಳಗದ ಕಾರ್ಯ ಸ್ಮರಣೀಯ ಎಂದು ಹೇಳಿದರು.

ಶಿಕ್ಷಕ ಎಸ್ ಎಸ್ ಹಿರೇಮಠ ಮಾತನಾಡಿ ಶಿಷ್ಯ ವರ್ಗದವರ ಒತ್ತಾಯದ ಮೇರೆಗೆ 30 ವರ್ಷಗಳ ನಂತರ ಈ ಗ್ರಾಮಕ್ಕೆ ಬಂದಿದ್ದು ತವರು ಮನೆಗೆ ಬಂದಂತಹ ಅನುಭವ ನನಗಾಗುತ್ತಿದೆ, ಶಿಕ್ಷಕರಿಗೆ ಶಿಷ್ಯ ಬಳಗದ ಪ್ರೀತಿ ವಿಶ್ವಾಸವೇ ನಿಜವಾದ ಆಸ್ತಿಗಳಾಗಿದ್ದು ವಿವಿಧ ರಂಗಗಳಲ್ಲಿ ಪ್ರಶಸ್ತಿ ಸಾಧಿಸಿದ ಶಿಕ್ಷಕವನ್ನು ನೋಡುವಂತಹ ಸಂದರ್ಭವನ್ನು ಪಡೆದುಕೊಂಡ ನಾವೇ ಧನ್ಯರು ಎಂದು ಭಾವಿಕರಾಗಿ ಹೇಳಿದರು.

ದೈಹಿಕ ಶಿಕ್ಷಕ ಪ್ರಶಾಂತ್ ಕುಮಾರ್ ಜೋಶಿ ಮಾತನಾಡಿ ನಾನು ಶಿಕ್ಷಕನಾಗಿ ವೃತ್ತಿ ಪ್ರಾರಂಭಿಸಿದ್ದು ನಂತರ ಶಿಕ್ಷಣ ಇಲಾಖೆಯ ಅಧಿಕಾರಿಗಳಾಗಿ ಸಾಕಷ್ಟು ಬಾರಿ ಮುಂಬಡ್ತಿ ಅವಕಾಶಗಳು ಬಂದರೂ ಸಹ ನಿರಾಕರಿಸಿದ್ದು ನನ್ನ ಕೊನೆಯ ದಿನದ ಸೇವೆಯವರೆಗೂ ಮಕ್ಕಳ ಮಧ್ಯದಲ್ಲಿಯೇ ಸೇವೆ ಸಲ್ಲಿಸಬೇಕೆಂದು ತಮ್ಮ ಮನದಾಳದ ಮಾತನ್ನು ಹಂಚಿಕೊಂಡರಲ್ಲವೇ ಶಾಲೆಯಲ್ಲಿ ಕ್ರೀಡಾ ವಿಭಾಗದಲ್ಲಿ ಯಶಸ್ಸು ಸಾಧಿಸುವ ವಿದ್ಯಾರ್ಥಿಗಳಿಗಾಗಿ ಹತ್ತು ಸಾವಿರ ರೂಪಾಯಿಗಳ ದತ್ತಿ ನಿಧಿಯನ್ನು ನೀಡುವುದಾಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ ಸೋಮಪ್ಪ ಎಸ್ ಶಾನಭೋಗ ವಹಿಸಿಕೊಂಡಿದ್ದು ಹಳೆಯ ವಿದ್ಯಾರ್ಥಿಗಳು ತಮ್ಮ ವಿದ್ಯಾರ್ಥಿ ಜೀವನದ ಸವಿನೆನಪುಗಳನ್ನು ವೇದಿಕೆಯಲ್ಲಿ ಹಂಚಿಕೊಂಡರು.

ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರು, ಶಾಲೆಯ ಶಿಕ್ಷಕರು, ಹಳೆಯ ಹಾಗೂ ಪ್ರಶಸ್ತಿ ಸಾಲಿನ ವಿದ್ಯಾರ್ಥಿಗಳು, ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ನಿರುದ್ಯೋಗಿ ಮಹಿಳೆಯರಿಗೆ ಹೊಲಿಗೆ ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ವಿತರಣೆ

# ಮಹಿಳೆಯರ ಸ್ವಾ-ವಲಂಬಿ ಬದುಕು ನಡೆಸಲು ಇಂತಹ ತರಬೇತಿ ಕಾರ್ಯಕ್ರಮಗಳು ತುಂಬಾ ಸಹಕಾರಿ: ಪೌರಾಯುಕ್ತ ಜೀವನ ಕಟ್ಟಿಮನಿ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ಜೂನ್, 16, ರಾಜ್ಯ ಸರಕಾರ ಮಹಿಳೆಯರ ಸ್ವಾ-ವಲಂಬಿ ಬದುಕು ನಡೆಸಲು ಇಂತ ತರಬೇತಿ ಕಾರ್ಯಕ್ರಮಗಳು ತುಂಬಾ ಸಹಕಾರಿಯಾಗಿವೆ, ಇಂತಹ ತರಬೇತಿಯಲ್ಲಿ ಪರಿಪೂರ್ಣವಾಗಿ ಭಾಗವಹಿಸಿದಾಗ ನೈಪುಣ್ಯತೆ ಸಿಗುತ್ತದೆ ಎಂದು ಪೌರಾಯುಕ್ತರಾದ ಜೀವನ ಕಟ್ಟಿಮನಿ ಅವರು ಅಭಿಪ್ರಾಯಪಟ್ಟರು.

ನಗರ ಸಭೆ ಶಹಾಪುರ ಹಾಗು ಭಾರತಾಂಬೆ ಶಿಕ್ಷಣ ಮತ್ತು ಗ್ರಾಮೀಣಭಿವೃದ್ಧಿ ಸಂಸ್ಥೆ (ರಿ) ರವರ ಸಂಯುಕ್ತಾಶ್ರಯದಲ್ಲಿ 2024-25ನೇ ಸಾಲಿನ ಎಸ್. ಎಫ್. ಸಿ. ಮುಕ್ತ ನಿಧಿ ಅನುದಾನಡದಿಯಲ್ಲಿ ನಿರುದ್ಯೋಗಿ ಮಹಿಳೆಯರಿಗೆ ಹೊಲಿಗೆ ತರಬೇತಿ ಪಡೆದವರಿಗೆ ಪ್ರಮಾಣ ಪತ್ರ ವಿತರಿಸುವ ಕಾರ್ಯಕ್ರಮದಲ್ಲಿ ನಿರುಣಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅಥಿತಿಗಳಾಗಿ ಭಾಗವಹಿಸಿದ ನಗರ ಸಭೆಯ ಅಭಿಯಾನ ವ್ಯವಸ್ಥಾಪಕರಾದ ಶ್ರೀ ಗುರು ತಳವಾರ ಮಾತನಾಡಿ ತರಬೇತಿ ಕಲಿತು ಸಮಯ ವ್ಯರ್ಥ ಮಾಡದೆ ಸ್ವಯಂ ಉದ್ಯೋಗ ಮಾಡಲು ಸಲಹೆ ನೀಡಿದರು. ಈ ಕಾರ್ಯಕ್ರಮದಲ್ಲಿ ನಗರ ಸಭೆಯ ಅಧಿಕಾರಿಯಾದ ಶರಣಬಸವ ಶೆಟ್ಟಿಕೇರಾ, ಮಾಸ್ಟರ್ ಟ್ರೈನರ್ ಆದ ಉಮಾ ಹಿರೇಮಠ, ಸುಮಿತ್ರಾ ಮತ್ತು ತರಬೇತಿದಾರರು ಭಾಗವಹಿಸಿದ್ದರು ಈ ಕಾರ್ಯಕ್ರಮ ಮಲ್ಲಿಕಾರ್ಜುನ್ ಸ್ವಾಗತಿಸಿ, ಭೀಮಾಶಂಕರ್ ಬೆನಕನಹಳ್ಳಿ ನಿರೂಪಿಸಿ ವಂದಿಸಿದರು.

# ಸಮಾಜ ನಿರ್ಮಾಣಕ್ಕಾಗಿ ಶ್ರಮಿಸುವುದು ಕೂಡ ದೇಶಭಕ್ತಿ : ಮುರುಘೇಶ ಶ್ರೀಗಳು




ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್:ಜೂ.16:ಗಡಿಯನ್ನು ಕಾಯುವುದು ಮಾತ್ರ ದೇಶಭಕ್ತಿಯಲ್ಲ, ಗ್ರಾಮಗಳ ಉದ್ಧಾರ, ಸ್ವಸ್ಥ ಸಮಾಜ ನಿರ್ಮಾಣಕ್ಕಾಗಿ ಶ್ರಮಿಸುವುದು ಕೂಡ ದೇಶಭಕ್ತಿ ಎಂದು ಖಾಸಮಠದ ಪೂಜ್ಯಶ್ರೀ ಮನ್ ನಿ. ಪ್ರ. ಸ್ವರೂಪಿ ಶಾಂತವೀರ ಗುರು ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು. ಖಾಸಮಠದಲ್ಲಿ ಗುರುಮಠಕಲ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್.ಎಸ್.ಎಸ್ ಎ ಮತ್ತು ಬಿ ಘಟಕದ ವತಿಯಿಂದ ನಡೆದ ರಾಷ್ಟೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರ ಉದ್ಘಾಟಿಸಿ ಪೂಜ್ಯರು ಮಾತನಾಡಿದರು. ಶಿಬಿರಾಧಿಕಾರಿ ಬಾಬುರಾಯ ದೊರೆ ಪ್ರಾಸ್ತಾವಿಕ ಮಾತನಾಡಿ ರಾಷ್ಟೀಯ ಸೇವಾ ಯೋಜನೆಯು ವಿದ್ಯಾರ್ಥಿಯನ್ನು ಸಮುದಾಯ ಸೇವಾ ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮಾಡುತ್ತದೆ, ಇದು ವೈಯಕ್ತಿಕ ಬೆಳವಣಿಗೆಯ ಜೊತೆಗೆ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಸಾಮರ್ಥ್ಯಗಳು ಮತ್ತು ನಾಗರಿಕ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಸಕ್ರಿಯ ವೇದಿಕೆಯಾಗಿದೆ. ತಂಡದ ಕೆಲಸ, ಸಂವಹನ ಮತ್ತು ಸಮಸ್ಯೆ ಪರಿಹಾರದಂತಹ ನಿರ್ಣಾಯಕ ಜೀವನ ಕೌಶಲ್ಯಗಳು ಮುಂತಾದವುಗಳನ್ನು ಸಕ್ರಿಯವಾಗಿ ಭಾಗವಹಿಸುವ ಮೂಲಕ ಮತ್ತು ನಾಯಕತ್ವದ ಸ್ಥಾನಗಳನ್ನು ತೆಗೆದುಕೊಳ್ಳುವ ಮೂಲಕ, ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಅನ್ವೇಷಣೆಗಳಿಗೆ ಸಜ್ಜುಗೊಳ್ಳುವ ಪ್ರಾಯೋಗಿಕ ಕೌಶಲ್ಯಗಳನ್ನು ಪಡೆದುಕೊಳ್ಳುತ್ತಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಡಾ. ಶ್ರೀನಿವಾಸ ಕೊಂಕಲ್ ಅವರು ಸಾರ್ವಜನಿಕರಲ್ಲಿ ಸ್ವಚ್ಛತಾ ಅಭಿಯಾನದ ಕುರಿತು ಜಾಗೃತಿ ಮೂಡಿಸುವುದು, ರಾಷ್ಟ್ರಪ್ರೇಮ, ಸೇವಾ ಮನೋಭಾವ, ವ್ಯಕ್ತಿವಿಕಸನ ಎನ್.ಎಸ್.ಎಸ್ ನ ಮುಖ್ಯದ್ಯೇಯ. ಇದರಿಂದ ಸಹಬಾಳ್ವೆ, ಸಹಕಾರ ಮನೋಭಾವ ಬೆಳೆಯುತ್ತದೆ. ಶಿಬಿರಾರ್ಥಿಗಳಿಗೆ ಗ್ರಾಮೀಣ ಬದುಕಿನ ಅರಿವು ಅಗತ್ಯ. ಈ ಶಿಬಿರದ ಏಳು ದಿನಗಳು ಬದುಕಿನುದ್ದಕ್ಕೂ ನೆನಪಿಟ್ಟುಕೊಳ್ಳುವಂತವ ಕಾರ್ಯಮಾಡಬೇಕು.

ಸಮಸಮಾಜ ಮತ್ತು ಆರೋಗ್ಯವಂತ ಗ್ರಾಮಗಳ ನಿರ್ಮಾಣ ಮಾಡಲು ತಾವುಗಳು ಶ್ರಮಿಸಬೇಕು ಎಂದರು. ಕಾಲೇಜಿನ ಪ್ರಾಂಶುಪಾಲ ಪುರುಷೋತ್ತಮ ಜೋಶಿಯವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಜಯಶ್ರೀ ರಘುನಾಥರೆಡ್ಡಿ,

ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ಜಗದೀಶ ಅವಂಟಿ, ಮಲ್ಲಮ್ಮ ಮಲ್ಲಿಕಾರ್ಜುನ್, ಖಾಸಮಠ ಶಾಲೆಯ ಮುಖ್ಯೋಪಧ್ಯಾಯರಾದ ವೀರೇಂದ್ರ ನಾಯಕ್, ಸುದರ್ಶನ್ ಗೌಡ ಭಾಗವಹಿಸಿದ್ದರು. ಕಾಲೇಜಿನ ಐಕ್ಯೂಎಸಿ ಸಂಚಾಲಕ ಇಮ್ರಾನ್ ಖಾಜಿ, ಚೆನ್ನಬಸಪ್ಪ ಓಡ್ಕರ್, ಮಾಲತಿ ಸೂರ್ಯಕಾಂತ್, ಮಾಣಿಕಪ್ಪ ಅಲ್ಲಮಪ್ರಭು, ಬಸಣ್ಣ ಈ.ಎಸ್, ಅಂಜನೇಯ ರಾಮತ್ನಾಳ, ರಾಯಪ್ಪ ಡೋಣಗಾಂವ, ಮಹೇಶ್ ಚಂದಾಪೂರ, ಪ್ರವೀಣ ಸರಪುರೆ ಸೇರಿದಂತೆ ಕಾಲೇಜು ಸಿಬ್ಬಂದಿ ಹಾಗೂ ಎನ್.ಎಸ್.ಎಸ್. ಎ ಮತ್ತು ಬಿ ಘಟಕದ ನೂರು ಜನ ವಿದ್ಯಾರ್ಥಿಗಳು ಇದ್ದರು, ಆಂಜನೇಯ ರಾಮತ್ನಾಳ ಕಾರ್ಯಕ್ರಮ ನಿರ್ವಹಿಸಿದರು, ಬಸಣ್ಣ ಸ್ವಾಗತಿಸಿದರು, ಎನ್.ಎಸ್.ಎಸ್. ಬಿ ಘಟಕದ ಸಂಚಾಲಕ ಶರಣಪ್ಪ ಗಡೇದ್ ವಂದಿಸಿದರು.



ತಾಳಿಕೋಟಿ ತಾಲೂಕಿನ ಚಬನೂರ ಗ್ರಾಮದವರಾದ ಖ್ಯಾತ ನೇತ್ರ ತಜ್ಞ, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಲಿಂಗದಳ್ಳಿ ಇವರು ಬಿಲ ಕೆರೂರ ಗ್ರಾಮದಲ್ಲಿ ಶ್ರೀ ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳ ಜನ್ಮ ಸುವರ್ಣ ಮಹೋತ್ಸವ, ಶ್ರೀ ಗುರು ಪಟ್ಟಾಧಿಕಾರದ ರಜತ ಮಹೋತ್ಸವ ಹಾಗೂ ನೂತನ ರಥದ ಲೋಕಾರ್ಪಣೆ ಅಂಗವಾಗಿ ಹಮ್ಮಿಕೊಂಡ ಧರ್ಮಸಭೆ ಕಾರ್ಯಕ್ರಮದಲ್ಲಿ ಉಜ್ಜಯಿನಿ ಜಗದ್ಗುರುಗಳಿಂದ ಆಶೀರ್ವಾದ ಪಡೆದುಕೊಂಡರು. ಪರಮ ಪೂಜ್ಯ ಜಗದ್ಗುರುಗಳು ಡಾ.ಪ್ರಭುಗೌಡರಿಗೆ ಸನ್ಮಾನಿಸಿ ಆಶೀರ್ವಾದ ನೀಡಿದರು. ಕಾರ್ಯಕ್ರಮದಲ್ಲಿ ಶ್ರೀಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯರು,ಹಲವಾರು ರಾಜಕೀಯ ದುರೀಣರು ಹಾಗೂ ಗ್ರಾಮದ ಗಣ್ಯರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

# ಮಲ್ಲಮ್ಮ ನುಡಿ ವರದಿಗೆ ಎಚ್ಚೆತ್ತಕೊಂಡ ಅಧಿಕಾರಿಗಳು ಸ್ವಚ್ಛತೆಗೊಂಡ ಕೊಳಚೆ ನೀರಿನ ಟ್ಯಾಂಕ್

(ವೀರಯ್ಯ ವಿ.ಹಿರೇಮಠ)
ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಕುಕನೂರು ತಾಲೂಕಿನ ಬನ್ನಿ ಕೊಪ್ಪ ಗ್ರಾಮದಲ್ಲಿರುವ ಭೂಗತ ನೀರಿನ ತೊಟ್ಟಿಯಲ್ಲಿ ಸುಮಾರು ಒಂದು ಅಡಿಯಷ್ಟು ಕೆಸರು ಸಂಗ್ರಹವಾಗಿದ್ದು, ಭಾನುವಾರ ಟ್ಯಾಂಕ್ ಶುಚಿಗೊಳಿಸುವ ಕಾರ್ಯ ಬರದಿಂದ ಸಾಗಿತು.

ಸುಮಾರು ಒಂದು ವರ್ಷಗಳಿಂದ 20 ಲಕ್ಷ ಲೀಟರ್ ಸಂಗ್ರಹ ಸಾಮರ್ಥ್ಯವುಳ್ಳ 39 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಭೂಗತ ನೀರಿನ ಪಟ್ಟಿ ಎಲ್ಲಿ ಕೊಳಚೆ ಮಣ್ಣು ಸೇರಿಕೊಂಡಿದ್ದು ಅದರಿಂದ ಗ್ರಾಮಸ್ಥರು ಆಕ್ರೋಶಗೊಂಡಿದ್ದಾರೆ ಎಂಬ ಸುದ್ದಿಯನ್ನು ಮಲ್ಲಮ್ಮನುಡಿ ದಿನ ಪತ್ರಿಕೆ ಭಾನುವಾರದ ಸಂಚಿಕೆಯಲ್ಲಿ ಪ್ರಕಟಿಸಿದ್ದು ವಿಷಯದ ಗಂಭೀರತೆ ಹರಿಯುತ್ತಿದ್ದಂತೆಯೇ ಕುಡಿಯುವ ನೀರು ಸರಬರಾಜು ನೈರ್ಮಲೀಕರಣ ಇಲಾಖೆಯ ಅಧಿಕಾರಿಗಳು


## ಸ್ವಚ್ಛತೆ ಇಲ್ಲದ ನೀರಿನ ಟ್ಯಾಂಕ್;ಗ್ರಾಮಸ್ಥರ ಆಕ್ರೋಶ

ರಾಜೀವ ಗಾಂಧಿ ಸಬ್ ಮಿಶನ್(ಕುಡಿಯುವ ನೀರು)ಯೋಜನೆ ಅಡಿಯಲ್ಲಿ ಬನ್ನಿಕೊಪ್ಪ ಮತ್ತು ಇತರೆ 38 ಹಳ್ಳಿಗಳಿಗೆ ನೀರು ಸರಬರಾಜು ಯೋಜನೆ

ವೀರಯ್ಯ ವಿ ಹಿರೇಮಠ
ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಜಿಲ್ಲೆಯ ಕುಕನೂರು ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಕರ್ನಾಟಕ ಮೂಲಭೂತ ಅಭಿವೃದ್ಧಿ ನಿಯಮಿತ ಕೊಪ್ಪಳ ಇವರಿಂದ ರಾಜೀವ್ ಗಾಂಧಿ ಸಬ್ ಮಿಷನ್ ಕುಡಿಯುವ ನೀರು ಯೋಜನೆಯ ಅಡಿಯಲ್ಲಿ ಬನ್ನಿಕೊಪ್ಪ ಮತ್ತು ಇನ್ನಿತರ 38 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಯೋಜನೆಯ ಉದ್ದೇಶಕ್ಕಾಗಿ ಸುಮಾರು 20 ಲಕ್ಷ ಲೀಟರ ನಿರಿನ ಸಂಗ್ರಹದ ಸಾಮರ್ಥ್ಯವುಳ್ಳ ಭೋಗತ ನೀರಿನ ತೊಟ್ಟಿ ನಿರ್ಮಿಸಲಾಗಿದ್ದು, ವರ್ಷಾನುಗಟ್ಟಲೆ ಕಾಲಗತಿಸಿದರು ಸಹ ಈ ಟ್ಯಾಂಕನ್ನು ಶುಚಿಗೊಳಿಸದೆ ಇದ್ದು ನೀರಿನ ಟ್ಯಾಂಕನ ನೀರು ಶೇಖರಣೆ ಗೊಳ್ಳುವ ಸ್ಥಳದ ಕೆಳಭಾಗದಲ್ಲಿ ಸುಮಾರು ಒಂದು ಅಡಿಯಷ್ಟು ಕೊಳಚೆ ಮಣ್ಣು ಶೇಖರಣೆಯಾಗಿದ್ದು ನೀರಿನ ಟ್ಯಾಂಕ್ ಸಹ ಕೊಳಚೆ ನೀರಿನಿಂದ ಕೂಡಿರುತ್ತದೆ.

ಜಿಲ್ಲೆಯ 39 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಭುಗತ ನೀರಿನ ತೊಟ್ಟಿಯಲ್ಲಿ ಸುಮಾರು ಒಂದು ಅಡಿಯಷ್ಟು ಕೆಸರು ಸಂಗ್ರಹವಾಗಿದ್ದು ಇದೆ ಕೆಸರುಮಯ ನೀರನ್ನು ಗ್ರಾಮಗಳಿಗೆ ಕುಡಿಯುವ ಉದ್ದೇಶದಿಂದ ಪೂರೈಕೆ ಆಗುತ್ತಿರುವುದನ್ನು ವಿರೋಧಿಸಿ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ ಘಟನೆ ಶನಿವಾರ ಜರುಗಿದೆ

ಸದ್ಯ ಸುಮಾರು ಆರು ದಿನಗಳಿಂದ ಈ ನೀರಿನ ಟ್ಯಾಂಕಿಗೆ ನೀರು ಸರಬರಾಜು ಆಗದೇ ಇರುವುದರಿಂದ ಸಂಪೂರ್ಣ ನೀರು ಖಾಲಿಯಾಗಿದ್ದು ತಳಭಾಗದಲ್ಲಿ ಶೇಖರಣೆಗೊಂಡಿರುವ ಕೊಳಚೆ ಮಣ್ಣನ್ನು ಬನ್ನಿಕೊಪ್ಪ ಗ್ರಾಮಸ್ಥರು ನೋಡಿ ಆಶ್ಚರ್ಯಗೊಂಡು ನೀರಿನ ತೊಟ್ಟಿನಿರ್ವಹಣೆಯ ಜವಾಬ್ದಾರಿಯನ್ನು ಹೊತ್ತುಕೊಂಡಿರುವ ಕುಡಿಯುವ ನೀರು ಮತ್ತು ನೈರ್ಮಲೀಕರಣ ಇಲಾಖೆ ಹಾಗೂ ಗುತ್ತಿಗೆದಾರನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ನೀರಿನ ತೊಟ್ಟಿಯಲ್ಲಿ ಶೇಖರಣೆಗೊಂಡಿರುವ ಕೊಳಚೆ ಮಣ್ಣನ್ನು ನೋಡಿದರೆ ಯಾವ ಪ್ರಜೆಯೂ ಸಹ ಇಲ್ಲಿನ ನೀರನ್ನು ಕುಡಿಯಲು ಮುಂದಾಗುವುದಿಲ್ಲ ಆದರೆ ಒಂದಲ್ಲ ಎರಡಲ್ಲ 39 ಹಳ್ಳಿಗಳಿಗೆ ಕುಡಿಯೋ ನೀರು ಮತ್ತು ನೈರ್ಮಲೀಕರಣ ಇಲಾಖೆಯವರು ಇದೇ ನೀರನ್ನು ಸರಬರಾಜು ಮಾಡುತ್ತಿದ್ದು ಇದರಿಂದ ಖಾಯಿಲೆಗಳು ಸಾಮಾನ್ಯವಾಗಿ ಹರಡಲಾರಂಭಿಸಿವೆ ಎಂದು ಗ್ರಾಮಸ್ಥರು ಇಲಾಖೆಯ ವಿರುದ್ಧ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಗ್ರಾಮ ಪಂಚಾಯತಿ ಅಧ್ಯಕ್ಷ ನಾಗರಾಜ ವೆಂಕಟಪುರ ಮಾತನಾಡಿ. ಈ ಭಾಗದ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಕುಡಿಯಲು ಇದೆ ಟ್ಯಾಂಕಿನಲ್ಲಿ ಶೇಖರಣೆಗೊಂಡ ನೀರು ಆಧಾರವಾಗಿದ್ದು ಇಲಾಖೆಯ ಅಧಿಕಾರಿಗಳು ಈ ಟ್ಯಾಂಕನ್ನು ಶುಚಿಗೊಳಿಸುವಲ್ಲಿ ವರ್ಷಾನುಗಟ್ಟಲೆ ಹಿಂದೇಟು ಹಾಕುತ್ತಿದ್ದು ಸಾರ್ವಜನಿಕರಿಗೆ ಕೊಡಿಸುತ್ತಿರುವ ನೀರನ್ನು ತಾವು ಒಂದು ಬಾರಿ ಸೇವಿಸಲಿ ಎಂದು ಅಧಿಕಾರಿಗಳಲ್ಲಿ ದೂರವಾಣಿ ಮೂಲಕ ತಿಳಿಸಿದರಲ್ಲವೇ ಇದನ್ನು

"ನೀರಿನ ಟ್ಯಾಂಕ್‌ನಲ್ಲಿ ಸ್ವಚ್ಛತೆ ಇಲ್ಲದೇ ಜನರು ಹೇಗೆ ನೀರು ಕುಡಿಯಬೇಕೆಂದು ಗ್ರಾಮಸ್ಥರು ಆಗ್ರಹಿಸುತ್ತಿದ್ದಾರೆ. ಈ ನೀರಿನ ಟ್ಯಾಂಕ್‌ನಿಂದ ಹಳ್ಳಿಗಳಿಗೆ ನೀರು ಸರಬರಾಜುವಾಗುತ್ತವೆ. ಜನರು ಸ್ವಚ್ಛತೆ ಇಲ್ಲದೇ ನೀರು ಹೇಗೆ ಕುಡಿಯಬೇಕೆಂದು ಜನರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ಟ್ಯಾಂಕ್‌ನ ಒಳಗಡೆ ಎಷ್ಟು ಮಣ್ಣು ತುಂಬಿದೆ, ಟ್ಯಾಕ್ ಹಾಗೂ ನೀರು ಸ್ವಚ್ಛತೆ ಇದೆ-ಯೋ ಇಲ್ಲವೋ ಎಂದು ನೋಡದೇ ಇರುವುದರಿಂದ ಗ್ರಾಮಸ್ಥರು ಮಲ್ಲಮ್ಮ ನುಡಿ ದಿನಪತ್ರಿಕೆಗೆ ಮಾತನಾಡುತ್ತಾ ತಮ್ಮ ಅಳಲನ್ನು ತೋಡಿಕೊಂಡರು.

ಶೀಘ್ರದಲ್ಲಿಯೇ ಶುಚಿಗೊಳಿಸಿ ಸ್ವಚ್ಛ ನೀರನ್ನು ಪೂರೈಕೆ ಮಾಡದೇ ಇದ್ದಲ್ಲಿ ಇದೆ ನೀರನ್ನು ಶಾಸಕರ ಕಾರ್ಯಾಲಯ ಹಾಗೂ ಮುಖ್ಯಮಂತ್ರಿಗಳಿಗೆ ಅಂಚೆ ಮೂಲಕ ರವಾನಿಸಲಾಗುವುದು ಎಂದು ತಿಳಿಸಿದರು.


ಗ್ರಾಮದ ಪ್ರಮುಖರಾದ ಮರಿಗೌಡರು ತಗ್ಗಿನಮನಿ ಮಾತನಾಡುತ್ತಾ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಶುದ್ಧೀಕರಿಸಿದ ಬಾಟಲ್ ನೀರನ್ನು ಕುಡಿದು ತಮ್ಮ ಇದ್ದ ಹತ್ತನಿಸಿಕೊಳ್ಳುತ್ತಾರೆ ಆದರೆ ಗ್ರಾಮೀಣ ಪ್ರದೇಶದ ಬಡ ಜನತೆಗೆ ಇದೇ ನೀರು ಆಧಾರವಾಗಿದ್ದು ಬಡವರಿಗೆ ಕೊಡಿಸುತ್ತಿರುವ ನೀರನ್ನು ಒಂದು ಬಾರಿ ಅಧಿಕಾರಿಗಳು ಸೇವಿಸಿ ನೋಡಲಿ ಸಾರ್ವಜನಿಕರ ಪರಿಸ್ಥಿತಿ ಅರ್ಥವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಾಗರಾಜ್ ವೆಂಕಟಪುರ್, ಮರಿಗೌಡ್ರು ತಗ್ಗಿನಮನಿ, ಸಿದ್ದಪ್ಪ ಮಾಳೆ ಕೊಪ್ಪ, ಸಿದ್ದಪ್ಪ ಪ್ಯಾಟಿ, ನಾಗರಾಜ್ ಹಳ್ಳಿಕೇರಿ, ಚನ್ನಪ್ಪ ಮಣಸಿನಕಾಯಿ, ರಾಜು ತಗ್ಗಿನಮನಿ, ಶರಣಪ್ಪ ಆದಾಪುರ್, ಆನಂದ್ ತಗ್ಗಿನಮನಿ, ರಮೇಶ್ ತಳವಾರ್, ರಾಜೀವ್ ಗಾಂಧಿ ಸಬ್ ಮಿಷನ್ ಗ್ರಾಮ ಪಂಚಾಯಿತಿ ಸರ್ವ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಫಲಶ್ರುತಿ

ಎಚ್ಚೆತ್ತುಕೊಂಡು ಭಾನುವಾರ ಬೆಳಿಗ್ಗೆಯಿಂದಲೇ ನೀರಿನ ಟ್ಯಾಂಕ್ ಶುಚಿಗೊಳಿಸುವ ಕಾರ್ಯವನ್ನು ಪ್ರಾರಂಭಗೊಳಿಸಿರುತ್ತಾರೆ.

ಬನ್ನಿಕೊಪ್ಪ ಗ್ರಾಮದಲ್ಲಿ ಕರ್ನಾಟಕ ಮೂಲಭೂತ ಅಭಿವೃದ್ಧಿ ನಿಯಮಿತ ಕೊಪ್ಪಳ ಇವರಿಂದ ರಾಜೀವ್ ಗಾಂಧಿ ಸಬ್ ಮಿಷನ್ ಕುಡಿಯುವ ನೀರು ಯೋಜನೆಯ ಅಡಿಯಲ್ಲಿ ಫನ್ನಿ ಕೊಪ್ಪ ಮತ್ತು ಇತರೆ 38 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಉದ್ದೇಶದಿಂದ ನಿರ್ಮಿಸಲಾಗಿದ್ದ ಭೂಗತ ನೀರಿನ




ತೊಟ್ಟಿ ಒಳಗಡೆ ಸುಮಾರು ಅರ್ಧ ಅಡಿಗಳಿಗೂ ಹೆಚ್ಚು ಮಣ್ಣಿನ ಕೊಳಚೆ ಸಂಗ್ರಹವಾಗಿದ್ದನ್ನು ಕಂಡಂತ ಹ ಗ್ರಾಮಸ್ಥರು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು ಪತ್ರಿಕೆಯಲ್ಲಿ ಪ್ರಕಟಗೊಳಿಸಲಾಯಿತು. ಪತ್ರಿಕೆಯನ್ನು ನೋಡುತ್ತಿದ್ದಂತೆಯೇ ಕಾರ್ಯಕ್ರಮದ ಅಧಿಕಾರಿಗಳು ಸಾಯಂಕಾಲದ ವರೆಗೆ ನಿರಂತರವಾಗಿ ನೀರಿನ ಟ್ಯಾಂಕನ್ನು ಶುಚಿಗೊಳಿಸುವ ಕಾರ್ಯವನ್ನು ಪ್ರಾರಂಭಿಸಿದ್ದು ಒಂದೇ ದಿನದಲ್ಲಿ ಸಂಪೂರ್ಣವಾಗಿ ಶುಚಿಗೊಳಿಸಿ ನಂತರವೇ ನೀರನ್ನು ಸಂಗ್ರಹಿಸಿ ಶೀಘ್ರದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುವುದು ಎಂದು ಕುಡಿಯುವ ನೀರು ಸರಬರಾಜು ಹಾಗೂ ನೈರ್ಮಲಿಕರಣ ಇಲಾಖೆ ಅಧಿಕಾರಿ ರಾಜಶೇಖರ ಮಳೆಮಠ ತಿಳಿಸಿದರು. ಮಲ್ಲಮ್ಮ ನುಡಿ ಪತ್ರಿಕೆ ವರದಿಗೆ ಶೀಘ್ರದಲ್ಲಿಯೇ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುವುದನ್ನು ಕಂಡಂತಹ ಬನ್ನಿಕೊಪ್ಪ ಗ್ರಾಮಸ್ಥರು ಪತ್ರಿಕೆಗೆ ಧನ್ಯವಾದಗಳು ತಿಳಿಸಿದ್ದಾರೆ.

# ಮಕ್ಕಳ ಶಿಕ್ಷಣ ಕಲಿಕೆಗೆ ಹೆಚ್ಚು ಒತ್ತು: ಸಚಿವ ಎಸ್.ಮಧು ಬಂಗಾರಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16-ರಾಜ್ಯದ ಎಲ್ಲಾ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಮಕ್ಕಳ ಕಲಿಕೆಗೆ ಹೆಚ್ಚು ಒತ್ತು ನೀಡಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ಸೋಮವಾರ, ನಗರದ ಬಿಪಿಎಸ್ಸಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಶಿಕ್ಷಣದ ಗುಣಮಟ್ಟ ಕಾಪಾಡುವಲ್ಲಿ ನಮ್ಮ ಸರ್ಕಾರವು ಬದ್ಧವಾಗಿದೆ. ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ವಿಶೇಷ ಜವಾಬ್ದಾರಿ ವಹಿಸಲಾಗಿದ್ದು, ಶಾಲಾ ಸಮಯ ಹೊರತುಪಡಿಸಿ, ಸಂಜೆ ಸಮಯದಲ್ಲೂ ಮಕ್ಕಳಿಗೆ ವಿಶೇಷ ತರಗತಿಗಳ ಮೂಲಕ ಅಭ್ಯಾಸಿಸಲು ಮಾರ್ಗದರ್ಶನ ಮಾಡುತ್ತಿದ್ದಾರೆ ಎಂದರು.

ಪರೀಕ್ಷಾ ಪಾವಿತ್ರತೆ ಕಾಪಾಡಲು ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ, ವೆಬ್ ಕಾಸ್ಟಿಂಗ್ ಮಾಡಲಾಗುತ್ತಿದೆ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಮಕ್ಕಳಿಗೆ ಪರೀಕ್ಷೆ ಎದುರಿಸಲು ಮೂರು ಬಾರಿ ಅವಕಾಶ ನೀಡಲಾಗಿದೆ. ಇಲ್ಲಿಯೂ ಉತ್ತೀರ್ಣರಾಗದಿದ್ದರೆ ಅಂತಹ ಮಕ್ಕಳಿಗೆ ಶಾಲೆಗಳಲ್ಲಿ ಪುನಃ ಪ್ರವೇಶಾತಿ ಪಡೆಯಲು ಅವಕಾಶ ನೀಡಲಾಗಿದೆ. ಅಲ್ಲಿಯೂ ಸಹ ಎಲ್ಲಾ ಮಕ್ಕಳಂತೆ ಬಟ್ಟೆ, ಪುಸ್ತಕ, ಶೂ ಹಾಗೂ ಇತರೆ ಸೌಲಭಗಳನ್ನು ಸಹ ನೀಡಲಾಗುತ್ತಿದೆ ಎಂದು ತಿಳಿಸಿದರು.

ಈಗಾಗಲೇ ರಾಜ್ಯದಲ್ಲಿ ಎರಡನೇ ಹಂತದ ಪರೀಕ್ಷೆಗಳು ಮುಕ್ತಾಯಗೊಂಡಿದ್ದು, ಇದರಲ್ಲಿ ಅನುತ್ತೀರ್ಣರಾದ ಮತ್ತು ಶೇಕಡವಾರು ಫಲಿತಾಂಶ ಹೆಚ್ಚಿಸಿಕೊಳ್ಳಲು ನೋಂದಾಯಿಸಿಕೊಂಡ ಮಕ್ಕಳಲ್ಲಿ ಒಟ್ಟಾರೆ 84 ಸಾವಿರ ಮಕ್ಕಳು (ಶೇ.98.25 ರಷ್ಟು) ಉತ್ತೀರ್ಣರಾಗಿದ್ದಾರೆ ಎಂದು ಸಚಿವರು ವಿವರಿಸಿದರು.

ರಾಜ್ಯದ ಶಾಲೆಗಳಲ್ಲಿ ಮುಖಚಹರೆ ಆಧಾರಿತ ಹಾಜರಾತಿ ಕಡ್ಡಾಯವಾಗಿ ಮಾಡಲಾಗುತ್ತಿದ್ದು, ಈಗಾಗಲೇ ಈ ಕುರಿತು ಪ್ರಾಯೋಗಿಕ ಹಂತ ನಡೆಸಲಾಗಿದೆ ಎಂದರಲ್ಲದೇ, ಅಜೀಂ ಪ್ರೇಮ್ ಜೀ, ಇನ್ಫೋಸಿಸ್ ಹಾಗೂ ವಿವಿಧ ಸಂಸ್ಥೆಗಳ ಸಿಎಸ್‌ಆರ್ ಅನುದಾನ ಬಳಸಿಕೊಂಡು ಮಕ್ಕಳ ಆರೋಗ್ಯದ ಪೌಷ್ಟಿಕತೆ, ಗುಣಮಟ್ಟ ಶಿಕ್ಷಣಕ್ಕೆ ಶಿಕ್ಷಕರಿಗೆ ವಿಶೇಷ ತರಬೇತಿ ನೀಡಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದವರು ಸಹ ಶಾಲೆಗೆ ಕೊಡುಗೆ ನೀಡಬೇಕು ಎಂದರು.

ದೇಶದ ಭವಿಷ್ಯವು ಮಕ್ಕಳ ಶಿಕ್ಷಣದ ಬುನಾದಿಯಲ್ಲಿದೆ. ಹಾಗಾಗಿ ನಮ್ಮ ಸರ್ಕಾರವು ಶಾಲೆಗಳಿಗೆ ಮೂಲಭೂತ ಸೌಕರ್ಯ, ಗುಣಮಟ್ಟ ಶಿಕ್ಷಣದ ಬೋಧನೆಗೆ ಆದ್ಯತೆ ನೀಡಲಾಗುತ್ತಿದೆ. ಈ ನಿಟ್ಟಿನಲ್ಲಿ ಮುಂಬರುವ ದಿನಗಳಲ್ಲಿ 13 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಆರಂಭಿಸಲಾಗುವುದು. ಇದಕ್ಕೆ ಮುಖ್ಯಮಂತ್ರಿಯವರು ಸಮ್ಮತಿ ನೀಡಿದ್ದಾರೆ ಎಂದು ತಿಳಿಸಿದರು.

*ನೀತಿ ಶಿಕ್ಷಣ ಅಳವಡಿಕೆ:*

ಮಕ್ಕಳಲ್ಲಿ ನೀತಿ ಶಿಕ್ಷಣ ಬಹುಮುಖ್ಯವಾಗಿದ್ದು, ಪ್ರಸ್ತುತದಿಂದಲೇ ರಾಜ್ಯದ ಎಲ್ಲಾ ಶಾಲೆಗಳಲ್ಲಿ ಒಂದರಿಂದ ಹತ್ತನೇಯ ತರಗತಿಯ ವಿದ್ಯಾರ್ಥಿಗಳಿಗೆ ವಾರದಲ್ಲಿ 2 ದಿನ ಮಾನವೀಯ ಮೌಲ್ಯಗಳ ಕುರಿತು ನೀತಿ ಶಿಕ್ಷಣ ಬೋಧಿಸಲಾಗುತ್ತಿದೆ. ಇದಕ್ಕೆ ನಮ್ಮ ಸರ್ಕಾರವು ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಈ ಬಾರಿ ಬಜೆಟ್ ನಲ್ಲಿ ಶಾಲಾ ಶಿಕ್ಷಣ ಇಲಾಖೆಗೆ 41 ಸಾವಿರ ಕೋಟಿ ರೂ. ಅನುದಾನ ನೀಡಲಾಗಿದೆ. 1008 ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ತರಗತಿ ಪ್ರಾರಂಭಿಸಲಾಗಿದೆ. ರಾಜ್ಯದಲ್ಲಿ ಶಾಲೆಗಳ ಶಿಥಿಲ ಕೊಠಡಿಗಳ ದುರಸ್ತಿಗೆ ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಗಳು ಸಾಕಷ್ಟು ಪ್ರಭಾವ ಬೀರುತ್ತಿವೆ. ಈ ಶಾಲೆಗಳಲ್ಲಿ ಗುಣಮಟ್ಟ ಶಿಕ್ಷಣ ಲಭಿಸುತ್ತಿದ್ದು, ದಾಖಲಾತಿಗೆ ಬೇಡಿಕೆ ಹೆಚ್ಚುತ್ತಿದೆ. ಮಕ್ಕಳ ಭವಿಷ್ಯಕ್ಕೆ ಎಲ್ಲಾ ಸೌಲಭ್ಯ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ. ವಿದ್ಯಾರ್ಥಿಗಳು ಪರೀಕ್ಷೆಗಳಿಗೆ ಭಯಭೀತರಾಗಬಾರದು. ಈ ಹಿಂದೆ ಅವಕಾಶದ ಕೊರತೆಯಿಂದ ವಿದ್ಯಾರ್ಥಿಗಳು ಅನುತ್ತೀರ್ಣರಾಗುತ್ತಿದ್ದರು. ಈಗ ಎಲ್ಲಾ ರೀತಿಯ ಅನುವು ಮಾಡಿಕೊಡಲಾಗುತ್ತಿದೆ ಎಂದರು.

ಕಲ್ಯಾಣ ಕರ್ನಾಟಕ ಭಾಗದ ಶಾಲೆಯ ಮಕ್ಕಳನ್ನು ಮುಂಚೂಣಿಗೆ ತರಲು ರಾಜ್ಯ ಸರ್ಕಾರ ಸಾಕಷ್ಟು ಕೆಲಸ ಮಾಡುತ್ತಿದೆ. ವಿಶೇಷ ಅನುದಾನ ನೀಡಲಾಗಿದೆ. ಶಿಕ್ಷಕರ ನೇಮಕಾತಿಯಲ್ಲಿ ಹೆಚ್ಚಿನ ಶಿಕ್ಷಕರನ್ನು ಇಲ್ಲಿಗೆ ನೀಡಲಾಗುತ್ತಿದೆ ಎಂದು ಹೇಳಿದ ಸಚಿವ ಮಧು ಬಂಗಾರಪ್ಪ ಅವರು, ಗಡಿಭಾಗದ ಶಾಲೆಗಳಲ್ಲಿ ಪೋಷಕರು ತಮ್ಮ ಮಕ್ಕಳಿಗೆ ಪ್ರವೇಶಾತಿ ಪಡೆದು, ವಿದ್ಯಾಭ್ಯಾಸಕ್ಕೆ ಅನುವು ಮಾಡಿಕೊಡಬೇಕು. ಇದರಿಂದ ಶಾಲೆಗಳು ಮುಚ್ಚುವ ಹಂತಕ್ಕೆ ತಲುಪುವುದಿಲ್ಲ. ಇದಕ್ಕೆ ಬೇಕಾದ ಎಲ್ಲಾ ಸೌಲಭ್ಯ ರಾಜ್ಯ ಸರ್ಕಾರ ನೀಡಲಿದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಬಿಪಿಎಸ್‌ಸಿ ವಿದ್ಯಾಸಂಸ್ಥೆಯ ಅಧ್ಯಕ್ಷ ಮಹಿಪಾಲ್ ಸೇರಿದಂತೆ ವಿವಿಧ ಮುಖಂಡರು ಹಾಗೂ ಇತರರು ಹಾಜರಿದ್ದರು.

## ಪ್ರತಿದಿನ ತಪ್ಪದೇ ಶಾಲೆಗೆ ಬರಬೇಕು: ಸಚಿವ ಎಸ್.ಮಧುಬಂಗಾರಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16-ಮಕ್ಕಳು ದಿನಾಲೂ ಶಾಲೆಗೆ ಬರಬೇಕು. ಯಾವುದೇ ಕಾರಣಕ್ಕೂ ಶಾಲೆಗೆ ತಪ್ಪಿಸಬಾರದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಮಧು ಬಂಗಾರಪ್ಪ ಅವರು ಹೇಳಿದರು.

ನಗರದ ಪಟೇಲ್ ನಗರ ಬಡಾವಣೆಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, 7 ತರಗತಿಯ ಮಕ್ಕಳೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

ಮನೆಯಲ್ಲಿ ಶಾಲೆಗೆ ಹೋಗಲು ಅಡ್ಡಿಪಡಿಸಿದರೆ, ನಾನು ತಪ್ಪದೇ ಶಾಲೆಗೆ ಹೋಗುತ್ತೇನೆ ಎಂದು ಹೇಳಬೇಕು. ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಪಡೆಯಬೇಕು. ಆರೋಗ್ಯದಿಂದಿರಬೇಕು. ಶಿಕ್ಷಣ ಪಡೆದುಕೊಂಡು ಉನ್ನತ ವ್ಯಕ್ತಿಗಳಾಗಿ ಹೊರಹೊಮ್ಮಬೇಕು ಎಂದು ಸಚಿವರು ಆಶಿಸಿದರು.

**ಸಂವಿಧಾನ ಪೀಠಿಕೆ ಪ್ರಸ್ತುತಪಡಿಸಿದ ರಿತಿಕಾ:**

ವಿದ್ಯಾರ್ಥಿಗಳಿಗೆ ಸಂವಿಧಾನ ಪೀಠಿಕೆ ಯಾರೂ ಹೇಳುತ್ತೀರಾ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವ ಎಸ್.ಮಧು ಬಂಗಾರಪ್ಪ ಅವರು ಕೇಳಿದಾಗ, ಶಾಲೆಯ ಐದನೇ ತರಗತಿ ವಿದ್ಯಾರ್ಥಿನಿ ರಿತಿಕಾ ಅವರು ಸಂವಿಧಾನ ಪೀಠಿಕೆಯನ್ನು ವಿಸ್ತಾರವಾಗಿ ವಾಚನ ಮಾಡಿದರು.

**ಮಕ್ಕಳೊಂದಿಗೆ ಊಟ ಸವಿದ ಸಚಿವರು:**

ಶಾಲೆಯ ವಿವಿಧ ಕೊಠಡಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಚಿವರು, ಬಳಿಕ ಮಕ್ಕಳೊಂದಿಗೆ ಮಧ್ಯಾಹ್ನದ ಬಿಸಿಯೂಟ ಸವಿದರು. ಊಟದಲ್ಲಿ ಅನ್ನ, ಸಾಂಬಾರು ಜೊತೆಗೆ ಉಪ್ಪಿನಕಾಯಿ ಮತ್ತು ಮೊಟ್ಟೆ ನೀಡಲಾಗಿತ್ತು. ಇದೇ ವೇಳೆ ಊಟದ ರುಚಿಯ ಬಗ್ಗೆ ಮಕ್ಕಳ ಅಭಿಪ್ರಾಯ ಪಡೆದುಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಶಂಕರ್, ಡಿಡಿಪಿಐಬಿ.ಉಮಾದೇವಿ, ವಿಷಯ ಪರಿವೀಕ್ಷಕಿ ವೇದಾವತಿ, ಶಾಲೆಯ ಮುಖ್ಯಗುರುಗಳಾದ ಜಯಶ್ರೀ ಸೇರಿದಂತೆ ಬಿಇಒ, ಎಸ್‌ಡಿಎಂಸಿ ಅಧ್ಯಕ್ಷರು, ಶಾಲಾ ಶಿಕ್ಷಕರು, ಶಾಲಾ ಶಿಕ್ಷಕರು ಹಾಗೂ ಇತರರು ಇದ್ದರು.

# ಜೂ.18 ರಂದು ಪ್ರಗತಿ ಪರಿಶೀಲನಾ ಸಭೆ

ಬಳ್ಳಾರಿ,ಜೂ.16-ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಜೂ.18 ರಂದು ಬಳ್ಳಾರಿಗೆ ಭೇಟಿ ನೀಡಲಿದ್ದು, ಆರ್.ಟಿ.ಇ 2009, ಪೋಕ್ಸೋ 2012, ಬಾಲನ್ಯಾಯ ಕಾಯ್ದೆ-2015 ರ ಅನುಷ್ಠಾನ ಹಾಗೂ ಮಕ್ಕಳಿಗೆ ಸಂಬಂಧಿಸಿದ ಕಾರ್ಯಕ್ರಮ ಮತ್ತು ಯೋಜನೆಗಳ ಕುರಿತು ಸಹಭಾಗೀದಾರರ ಇಲಾಖೆಗಳ ಅಧಿಕಾರಿಗಳೊಂದಿಗೆ ಅಂದು ಮಧ್ಯಾಹ್ನ 2.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಾಬ್ ಸಭಾಂಗಣದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದು, ಎಲ್ಲಾ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಗಳ ಮಾಹಿತಿಯೊಂದಿಗೆ ತಪ್ಪದೇ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಜೂ.19 ರಂದು 2ನೇ ಹಂತದ ವಸತಿ ಶಾಲೆಗಳ ಆಯ್ಕೆಗೆ ಕೌನ್ಸಲಿಂಗ್ ಪ್ರಕ್ರಿಯೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16-ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಸಕ್ತ ಸಾಲಿಗೆ 6ನೇ ತರಗತಿ ದಾಖಲಾತಿ ಪ್ರವೇಶಕ್ಕಾಗಿ ಈಗಾಗಲೇ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿದ್ದು, ಆಯ್ಕೆಯಾದ ವಿದ್ಯಾರ್ಥಿಗಳಿಗೆ ಜೂನ್ 19 ರಂದು 2ನೇ ಹಂತದ ಕೌನ್ಸಲಿಂಗ್ ಪ್ರಕ್ರಿಯೆ ಏರ್ಪಡಿಸಲಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.

ನಗರದ ಹೊಸಪೇಟೆ ರಸ್ತೆಯ ಅಲ್ಲಿಪುರದ ಬಿಐಟಿಎಂ ಕಾಲೇಜು ಹತ್ತಿರ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಜೂ.19 ರಂದು ಬೆಳಿಗ್ಗೆ 10 ಗಂಟೆಗೆ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ 2ನೇ ಹಂತದ ಕೌನ್ಸಲಿಂಗ್ ಮೂಲಕ ಪ್ರವೇಶದ ಸೀಟ್‌ನ್ನು (ವಸತಿ ಶಾಲೆಯನ್ನು) ಆಯ್ಕೆ ಮಾಡಿಕೊಳ್ಳಬಹುದಾಗಿದೆ.

ಒಂದು ವೇಳೆ ಭಾಗವಹಿಸದೇ ಇದ್ದಲ್ಲಿ ಪ್ರವೇಶದ ಸೀಟ್ ರದ್ದಾಗುತ್ತದೆ.

ಕೌನ್ಸಲಿಂಗ್‌ಗೆ ಬೇಕಾದ ದಾಖಲೆಗಳು:

ಆಧಾರ್‌ಕಾರ್ಡ್, ವಿದ್ಯಾರ್ಥಿಯ 5 ಭಾವಚಿತ್ರ, 5ನೇ ತರಗತಿ ಅಂಕಪಟ್ಟಿ, ಹಾಲ್ ಟಿಕೆಟ್ (ಪ್ರವೇಶ ಪತ್ರ), ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿಶೇಷ ಕೋಟಾದಲ್ಲಿ ಆಯ್ಕೆಯಾದ ಪ್ರಮಾಣ ಪತ್ರ ಸೇರಿದಂತೆ ಎಲ್ಲಾ ದಾಖಲೆಗಳನ್ನು ದ್ವಿ ಪ್ರತಿಯ ಝರಾಕ್ಸ್‌ಗಳನ್ನು ಹಾಜರುಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ(ಸಿ.ಬಿ.ಎಸ್.ಇ) ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.9844040035, ಸಂಡೂರು ತಾಲ್ಲೂಕಿನ ತೋರಣಗಲ್ಲು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.9480933730, ಕಂಪ್ಲಿ ಮತ್ತು ಕುರುಗೋಡು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರ ಮೊ.7353346069 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16 ಜಿಲ್ಲೆಯ ಸಂಗನಕಲ್ಲು ಗ್ರಾಮದ ನಿವಾಸಿಯಾದ ವಿ.ನಾಗರಾಜ ಎನ್ನುವ 35 ವರ್ಷದ ವ್ಯಕ್ತಿಯು 2024 ರ ಜ.17 ರಂದು ಕಾಣೆಯಾಗಿರುವ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಠಾಣಾಧಿಕಾರಿ ತಿಳಿಸಿದ್ದಾರೆ.

ಚಹರೆ:

ಅಂದಾಜು 6 ಅಡಿ ಎತ್ತರ, ದುಂಡು ಮುಖ, ಕಪ್ಪು ಮೈಬಣ್ಣ, ಧೃಡವಾದ ಮೈಕಟ್ಟು ಹೊಂದಿದ್ದು, ಕಪ್ಪು ಕೂದಲು ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಟಿ-ಶರ್ಟ್ ಮತ್ತು ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆಯನ್ನು ಮಾತನಾಡುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿ ಬಗ್ಗೆ ಮಾಹಿತಿ ಸಿಕ್ಕಲ್ಲಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, 9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಾಮಧೇಯ ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16-ನಗರದ ರೈಲ್ವೇ ವ್ಯಾಪ್ತಿಯ ಬಳ್ಳಾರಿ ಮತ್ತು ಕಂಟೋನ್‌ಮೆಂಟ್ ರೈಲು ನಿಲ್ದಾಣದ ಮಧ್ಯೆ ಸುಮಾರು 30 ವರ್ಷದ ಅನಾಮದೇಯ ವ್ಯಕ್ತಿಯು ಯಾವುದೋ ಕಾರಣದಿಂದ ರೈಲು ಹಳಿಯ ಮೇಲೆ ಅಡ್ಡಲಾಗಿ ಮಲಗಿ ಜೂ.13 ರಂದು ಆತ್ಮಹತ್ಯೆಯಿಂದ ಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಬಳ್ಳಾರಿ ರೈಲ್ವೇ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ರೈಲ್ವೇ ಪೊಲೀಸ್ ತನಿಖಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.6 ಅಡಿ, ಕೋಲು ಮುಖ, ಗೋದಿ ಮೈಬಣ್ಣ, ತೆಳ್ಳನೆ ಮೈಕಟ್ಟು ಹೊಂದಿದ್ದು, ಮೃತನ ತಲೆಯಲ್ಲಿ 02 ಇಂಚು ಕಪ್ಪು ಕೂದಲು ಮತ್ತು ಮುಖದಲ್ಲಿ 01 ಇಂಚು ಗಡ್ಡ, ಮೀಸೆ ಇರುತ್ತದೆ. ಬಲಗೈ ಮೊಣಕೈ ಮುಂದೆ ಆಂಗ್ಲ ಬಾಷೆಯಲ್ಲಿ ಗೌತಮ್ ಮತ್ತು ಓಂ ಎಂದು ಹಚ್ಚೆ ಹಾಕಿಸಿಕೊಂಡಿರುತ್ತಾನೆ.

ಮೃತನ ದೇಹದ ಮೇಲೆ ಕಪ್ಪು ಬಣ್ಣದ ತುಂಬು ತೋಳಿನ ಶರ್ಟ್, ಕಪ್ಪು ಬಣ್ಣದ ಪ್ಯಾಂಟ್ ಮತ್ತು ಮ್ಯಾಚೋ ಕಂಪನಿಯ ನಶಿ ಬಣ್ಣದ ಅಂಡರವೇರ್ ಇರುತ್ತದೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ರೈಲ್ವೆ ಪೊಲೀಸ್ ಠಾಣೆ ದೂ. 08392-276063 ಅಥವಾ ರೈಲ್ವೇ ಪೊಲೀಸ್ ಕಂಟ್ರೋಲ್ ರೂಂ ದೂ. 080-22871291 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂತರಾಷ್ಟ್ರೀಯ ಯೋಗ ದಿನಾಚರಣೆ: ಜೂ.20 ರಂದು ಯೋಗ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆ ವತಿಯಿಂದ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂ.20 ರಂದು ಬೆಳಿಗ್ಗೆ 08 ಗಂಟೆಗೆ ನಗರದ ಕನಕದುರ್ಗಮ್ಮ ದೇವಸ್ಥಾನದಲ್ಲಿ ಯೋಗ ಜಾಥಾ ಹಮ್ಮಿಕೊಳ್ಳಲಾಗಿದೆ.

ಜಾಥಾವು ಕನಕದುರ್ಗಮ್ಮ ದೇವಸ್ಥಾನದಿಂದ ಆರಂಭಗೊಂಡು ಎಸ್‌ಪಿ ವೃತ್ತ-ಹೆಚ್.ಆರ್.ಗವಿಯಪ್ಪ ವೃತ್ತ ಗಡಿಗಿ ಚೆನ್ನಪ್ಪ ವೃತ್ತ -ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ನಡೆಯಲಿದೆ ಎಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆದವಟ್ಟಿ ಶ್ರೀಗಳ ಪುಣ್ಯ ಸ್ಮರಣೋತ್ಸವ.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರು ಇತ್ತೀಚಿಗೆ ಲಿಂಗೈಕ್ಯರಾದ ತಾಲೂಕಿನ ಬೆದವಟ್ಟಿ ಹಿರೇಮಠದ ಪರಮಪೂಜ್ಯ ಶ್ರೀ ಶಿವಸಂಗಮೇಶ್ವರ ಶ್ರೀಗಳ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಭಾನುವಾರ ಪಟ್ಟಣದ ಅನ್ನದಾನಿಶ್ವರ ಶಾಖಾ ಮಠದಲ್ಲಿ ನಡೆಯಿತು.

ಕಾರ್ಯಕ್ರಮ ಉದ್ಘಾಟನೆ ಮಾಡಿ ಸಾನಿಧ್ಯ ವಹಿಸಿ ಮಾತನಾಡಿದ ಯಲಬುರ್ಗಾ ಹಿರೇಮಠದ ಸಿದ್ದರಾಮೇಶ್ವರ ಶಿವಾಚಾರ್ಯ ಸ್ವಾಮೀಜಿಗಳು ಮಾತನಾಡಿ, ಬೆದವಟ್ಟಿ ಶಿವ ಸಂಗಮೇಶ್ವರ ಶ್ರೀಗಳು ಈ ಭಾಗದ ಎಲ್ಲಾ ಮಾಠಾಧೀಷರಿಗೆ ತಂದೆಯ ಸ್ಥಾನದಲ್ಲಿ ನಿಂತುಕೊಂಡು ಮಾರ್ಗದರ್ಶನ ಮಾಡಿದರು, ಅನೇಕ ಕಿರಿಯ ಮಾಠಾಧೀಷರ ಪಟ್ಟಾಧಿಕಾರ ನೆರವೇರಿಸಿದರು. ಈಗಲೂ ಅವರು ನಮ್ಮೆಲ್ಲರ ಹೃದಯ ಸಿಂಹಾಸನ ಅಲಂಕರಿಸಿದ್ದಾರೆ ಎಂದು ಹೇಳಿದರು.

ಈ ಭಾಗದಲ್ಲಿ ದಾಸೋಹ ಸೇವೆ ಮತ್ತು ಪಂಚಪೀಠಧಿಪತಿಗಳನ್ನು ಕರೆಸಿ ಅಡ್ಡಪ್ಪಲ್ಲಕ್ಕಿ ಉತ್ಸವ ಮಾಡಿ ಭಕ್ತಿಯ ಭಂಡಾರವನ್ನು ಪಸರಿಸಿದವರು ಎಂದು ಗುರುಗಳ ಗುಣಗಾನ ಮಾಡಿದರು.

ಕುಷ್ಟಗಿಯ ಕರಿಬಸವೇಶ್ವರ ಸ್ವಾಮೀಜಿ ಮಾತನಾಡಿ, ಬೆದವಟ್ಟಿ ಶ್ರೀಗಳು ಗುರು ಸ್ವರೂಪವಾಗಿ ನಿಂತುಕೊಂಡು ಭಕ್ತಿಯ, ಸಂಸ್ಕಾರದ ಪರಂಪರೆ ಬೆಳೆಗಿಸಿದರು. ಶ್ರೀಗಂಧದ ಕೊರಡಿನಂತೆ ಸಮಾಜಕ್ಕೆ ಸುವಾಸನೆ ಸೂಸಿದರು ಎಂದು ಹೇಳಿದರು.

ಅನ್ನದಾನಿಶ್ವರ ಮಠದ ಮಹಾದೇವ ಸ್ವಾಮೀಜಿಗಳು ಮಾತನಾಡಿ, ಕುಕನೂರು ತಾಲೂಕು ಮಹಾಮಾಯೇ ದೇವಿ, ಗುದ್ನೇಶ್ವರ ದೇವರು ಮತ್ತು ಬೆದವಟ್ಟಿ ಶ್ರೀಗಳಿಂದ ಹೆಸರು ಪಡೆದಿದೆ. ಅವರು ಹಾಕಿದ ಪುಣ್ಯ ಮಾರ್ಗದಲ್ಲಿ ನಾವೆಲ್ಲ ಸಾಗೋಣ ಎಂದರು.

ಪುಣ್ಯಸ್ಮರಣೆ ಕಾರ್ಯಕ್ರಮ ಅಂಗವಾಗಿ ಸುಮಾರು ಮೂವತ್ತು ಬಂಡಿಗಳಲ್ಲಿ ಶ್ರೀಗಳ ಭಾವಚಿತ್ರದ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ಯಲಬುರ್ಗಾ ಶ್ರೀಧರ ಮುರಡಿ ಹಿರೇಮಠದ ಸಿಬಸವಲಿಂಗೇಶ್ವರ ಸ್ವಾಮೀಜಿ, ಮೈನಳ್ಳಿಯ ಸಿದ್ದೇಶ್ವರ ಸ್ವಾಮೀಜಿ, ಮಂಗಳೂರು ಸಿದ್ದಲಿಂಗ ಶ್ರೀಗಳು, ಅಳವಂಡಿಯ ಮರುಳರಾಧ್ಯ ಶ್ರೀಗಳು, ತಾವರಗೆರೆ ಮಹೇಶ್ವರ ಶರಣರು, ಚಳಗೇರಿ ಶ್ರೀಗಳು ಮತ್ತು ಪ್ರಮುಖರಾದ ಅಂದಪ್ಪ ಜವಳಿ, ವೀರಯ್ಯ ತೊಂಟಾದರ್ಯ ಮಠ, ಮಹೇಶ್ ಕಲ್ಮಠ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ಕಾನೂನು ಸೇವಾ ಪ್ರಾಧಿಕಾರ ವಿವಿಧ ಹುದ್ದೆಗಳಿಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟ : ಜೂನ್ 16– ಜಿಲ್ಲಾ ಕಾನೂನು ಸೇವೆಗಳ ಕಾನೂನು ನೆರವು ರಕ್ಷಣಾ ಪರಿಷತ್ ವ್ಯವಸ್ಥೆಯಡಿ ಕಾನೂನು ಮತ್ತು ನೆರವು ರಕ್ಷಣಾ ಸಲಹೆಗಾರ, ಉಪ ಮುಖ್ಯ ಕಾನೂನು ನೆರವು ರಕ್ಷಣಾ ಸಲಹೆಗಾರ ಮತ್ತು ಸಹಾಯಕ ಕಾನೂನು ನೆರವು ರಕ್ಷಣಾ ಸಲಹೆಗಾರರ ತಲಾ ಒಂದು ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಕೊನೆಯ ದಿನ ಜೂನ್ 19 ಆಗಿದ್ದು, ಮಾಸಿಕ ವೇತನದ ಮೇಲೆ ಎರಡು ವರ್ಷಗಳ ಕಾಲ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುತ್ತಿದೆ. ಕಾನೂನು ಮತ್ತು ನೆರವು ರಕ್ಷಣಾ ಸಲಹೆಗಾರ ಹುದ್ದೆಗೆ 70 ಸಾವಿರ ರೂ, ಉಪ ಮುಖ್ಯ ಕಾನೂನು ನೆರವು ರಕ್ಷಣಾ ಸಲಹೆಗಾರರ ಹುದ್ದೆಗೆ 45 ಸಾವಿರ ರೂ, ಹಾಗೂ ಸಹಾಯಕ ಕಾನೂನು ನೆರವು ರಕ್ಷಣಾ ಸಲಹೆಗಾರರ ಹುದ್ದೆಗೆ 30 ಸಾವಿರ ರೂ.ಗಳ ಮಾಸಿಕವಾಗಿ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಬಾಗಲಕೋಟೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಿಂದ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಎನ್.ವಿ.ವಿಜಯ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತ : ಆರೈಕೆದಾರರಿಗೆ ಪ್ರೋತ್ಸಾಹಧನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟ : ಜೂನ್ 16–ಪ್ರಕಸ್ತ ಸಾಲಿನಲ್ಲಿ ಸೆರೆಬ್ರಲ್ ಪಾಲ್ಸಿ, ಮಸ್ಕ್ಯೂಲರ್ ಡಿಸ್ಟ್ರೋಪಿ, ಪಾರ್ಕಿನ್ಸನ್, ಮಲ್ಟಿಪಲ್ ಸ್ಲೆರೋಸಿಸ್, ಆಟಿಸಂ, ಬೌದ್ಧಿಕ ವಿಕಲತೆ ಮತ್ತು ಬಹುವಿಧ ಅಂಗವಿಕಲತೆ (ಶ್ರವಣ ಮತ್ತು ದೃಷ್ಟಿ ನ್ಯೂನ್ಯತೆ) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಪ್ರೋತ್ಸಾಹ ಧನವನ್ನು ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

ಕಾರಣ ಜಿಲ್ಲೆಯ ಮೇಲ್ಕಾಣಿಸಿದ ವಿಕಲಚೇತನರು ಜೂನ್ 30 ರೊಳಗಾಗಿ ಪ್ರಸಕ್ತ ಸಾಲಿಗೆ ಅರ್ಹ ಫಲಾನುಭವಿಗಳು ನಿಗದಿತ ಅರ್ಜಿ ನಮೂನೆಯೊಂದಿಗೆ ಯು.ಡಿ.ಐ.ಡಿ ಕಾರ್ಡ, ವಾಸಸ್ಥಳ ದೃಢೀಕರಣ ಪ್ರಮಾಣ ಪತ್ರ, ವಿಕಲಚೇತನ ವ್ಯಕ್ತಿಗಳ ಹಾಗೂ ಆರೈಕೆದಾರರ ಆಧಾರ ಕಾರ್ಡ ಮತ್ತು ಜಂಟಿ ಭಾವಚಿತ್ರ, ಆರೈಕೆದಾರರ ಬ್ಯಾಂಕ್ ಖಾತೆಯ ವಿವರ, ಆರೈಕೆ ಪಡೆಯುವವರ ಆರೈಕೆ ಮಾಡುವವರ ಪರಸ್ಪರ ಒಪ್ಪಿರುವ ಬಗ್ಗೆ ಹಾಗೂ ಉತ್ತಮ ಆರೈಕೆ ಒದಗಿಸುವ ಬಗ್ಗೆ ಲಿಖಿತ ಪ್ರಮಾಣ ಪತ್ರದೊಂದಿಗೆ ಸಲ್ಲಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂನ್ 20 ರಂದು ಮಿನಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.16–ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಿಂದ ಕಲಬುರಗಿ ಸರ್ಕಾರಿ ಐಟಿಐ ಕಾಲೇಜು ಹಿಂದುಗಡೆಯಿರುವ ಜಿಲ್ಲಾ ಉದ್ಯೋಗ ವಿನಿಮಯ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಇದೇ ಜೂನ್ 20 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಿನಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಜೋಯಾಲುಕ್ಕಾಸ್‌ದಲ್ಲಿ ಸೇಲ್ಸ್ ಎಕ್ಸಿಕ್ಯೂಟಿವ್, ಸೇಲ್ಸ್ ಟ್ರೇನಿ ಮತ್ತು ಆಫೀಸ್‌ಬಾಯ್ ಹುದ್ದೆಗಳಿಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 32 ವರ್ಷದೊಳಗಿರಬೇಕು. ಫ್ಲಿಪ್‌ಕಾರ್ಟ್‌ದಲ್ಲಿ ಡೆಲಿವರಿ ಎಕ್ಸಿಕ್ಯೂಟಿವ್ ಹುದ್ದೆಗೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 20 ರಿಂದ 38ವರ್ಷದೊಳಗಿರಬೇಕು. ಹಬ್ ಸೊಟರ್ ಹುದ್ದೆಗೆ ಪಿಯುಸಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 20 ರಿಂದ 35 ವರ್ಷದೊಳಗಿರಬೇಕು.

ಅನ್ನಪೂರ್ಣ ಮೈಕ್ರೋಫೈನಾನ್ಸ್‌ದಲ್ಲಿ ಫೀಲ್ಡ್ ಕ್ರೆಡಿಟ ಆಫೀಸರ್ ಹುದ್ದೆ ಹಾಗೂ ಅಸಿಸ್ಟೆಂಟ್ ಬ್ರ್ಯಾಂಚ್ ಮ್ಯಾನೇಜರ್ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ/ಪಿಯುಸಿ/ಐಟಿಐ/ಡಿಪ್ಲೋಮಾ/ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 28 ವರ್ಷದೊಳಗಿರಬೇಕು. ಯುನಿಟ್ ಮ್ಯಾನೇಜರ್ ಹುದ್ದೆಗೆ ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 21 ರಿಂದ 32 ವರ್ಷದೊಳಗಿರಬೇಕು.

ಬ್ರೈಟ್ ಕಂಪ್ಯೂಟರ್ ಟ್ರೈನಿಂಗ್ ಇನ್ಸಿಟ್ಯೂಟ್‌ದಲ್ಲಿ ಅಕೌಂಟೆಂಟ್ ಹುದ್ದೆಗೆ ಬಿ.ಕಾಂ./ ಎಮ್.ಕಾಂ. ವಿದ್ಯಾರ್ಹತೆ ಹೊಂದಿರಬೇಕು. ಕಂಪ್ಯೂಟರ್ ಟೀಚರ್ ಹುದ್ದೆಗೆ ಡಿಪ್ಲೋಮಾ ಬಿ.ಇ/ ಬಿ.ಎಸ್.ಸಿ (ಸಿ.ಎಸ್).ವಿದ್ಯಾರ್ಹತೆಹೊಂದಿರಬೇಕು. ವಯೋಮಿತಿ 22 ರಿಂದ 40 ವರ್ಷದೊಳಗಿರಬೇಕು.

ಸ್ವತಂತ್ರ ಮೈಕ್ರೋ ಫೈನಾನ್ಸ್‌ದಲ್ಲಿ ಕಲೆಕ್ಷನ್ ಆಫೀಸರ್ ಮತ್ತು ಫೀಲ್ಡ್ ಆಫೀಸರ್ ಹುದ್ದೆಗಳಿಗೆ ಪಿಯುಸಿ/ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 28 ವರ್ಷದೊಳಗಿರಬೇಕು. ಶ್ರೀ ಸಾಯಿ ಅರ್ಥ ಮೂವರ್ಸ್‌ದಲ್ಲಿ ಸೇಲ್ಸ್ ಪಿಆರ್‌ಇ, ಸೇಲ್ಸ್ ಇಂಜಿನಿಯರ್, ಸಿ.ಆರ್.ಎಮ್/ಸಿ.ಆರ್.ಇ. ಮತ್ತು ಮಾರ್ಕೇಟಿಂಗ್ ಮ್ಯಾನೇಜರ್ ಹುದ್ದೆಗಳಿಗೆ ಯಾವುದೇ ಪದವಿ ಪಾಸಾಗಿರಬೇಕು. ಸರ್ವಿಸ್ ಇಂಜಿನಿಯರ್ ಹುದ್ದೆಗೆ ಐಟಿಐ/ಡಿಪ್ಲೋಮಾ (ಯಾವುದೇ ಟ್ರೇಡ್) ಪಾಸಾಗಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು.

ಕ್ರೆಡಿಟ್ ಎಕ್ಸೆಸ್ ಗ್ರಾಮೀಣ ಲೀ.ದಲ್ಲಿ ರಿಲೇಷನ್‌ಶೀಫ್ ಆಫೀಸರ್ ಹುದ್ದೆಗೆ ಪಿಯುಸಿ/ಯಾವುದೇ ಪದವಿ ಪಾಸಾಗಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು. ಅಫಜಲಪುರ ತಾಲೂಕಿನ ಚೌಡಾಪುರದ ಪೂಜ್ಯ ಶ್ರೀ ವಿ.ಎಲ್.ಭಟ್ಟ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಇಂಗ್ಲೀಷ ಮತ್ತು ಗಣಿತ ಶಿಕ್ಷಕರ ಹುದ್ದೆಗೆ ಎಮ್.ಎ., ಬಿ.ಎಡ್. ಎಮ್.ಎಸ್.ಸಿ. ಬಿ.ಎಡ್ ವಿದ್ಯಾರ್ಹತೆ ಹೊಂದಿರಬೇಕು. ವಯೋಮಿತಿ 18 ರಿಂದ 30 ವರ್ಷದೊಳಗಿರಬೇಕು.

ಆಸಕ್ತಿಯುಳ್ಳ ಅಭ್ಯರ್ಥಿಗಳು ತಮ್ಮ ಎಲ್ಲಾ ಅಂಕಪಟ್ಟಿಗಳ ಝೆರಾಕ್ಸ್, ರೆಸ್ಯೂಮ್ (ಬಯೋಡೇಟಾ) ಭಾವಚಿತ್ರಗಳು ಹಾಗೂ ಆಧಾರ್ ಕಾರ್ಡ್‌ದೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಮಿನಿ ಉದ್ಯೋಗಮೇಳದಲ್ಲಿ ಭಾಗವಹಿಸಬೇಕು. ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ಯಾವುದೇ ತರಹದ ಭತ್ಯೆಯನ್ನು ನೀಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ದೂರವಾಣಿ ಸಂಖ್ಯೆ 08472–274846, ಮೊಬೈಲ್ ಸಂಖ್ಯೆ 9620095270 ಗೆ ಸಂಪರ್ಕಿಸಲು ಕೋರಲಾಗಿದೆ.

# ಯಶಸ್ವಿಯಾಗಿ ಜರುಗಿದ ಸ್ಟಾರ್ ಕನ್ನಡ ನ್ಯೂಸ್ 24*7 ಸುದ್ದಿ ವಾಹಿನಿಯ ವಾರ್ಷಿಕೋತ್ಸವ ಸಮಾರಂಭ.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ನಗರದಲ್ಲಿ ಕಳೆದ ರವಿವಾರದಂದು ಕನ್ನಡ ಭವನದಲ್ಲಿ ಸಾಯಂಕಾಲ 4ಗಂಟೆಗೆ ರವಿಕುಮಾರ್ ಬಡಿಗೇರ ಅವರ ಸಾರಥ್ಯದ ಸ್ಟಾರ್ ಕನ್ನಡ ನ್ಯೂಸ್ 247 ಸುದ್ದಿ ವಾಹಿನಿಯ ದ್ವಿತೀಯ ವರ್ಷದ ವಾರ್ಷಿಕೋತ್ಸವ ಸಮಾರಂಭ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನ ಅಫಜಲಪುರದ ಶ್ರೀ ಪ.ಪೂ. ಬ್ರಹ್ಮಾನಂದ ಸ್ವಾಮಿಗಳು ವಹಿಸಿಕೊಂಡರು. ಸಸಿಗೆ ನೀರು ಹಾಕುವುದರ ಮೂಲಕ ಕರ್ನಾಟಕ ಕೋಲಿ ಕಬ್ಬಲಿಗ ಎಸ್.ಟಿ ಹೋರಾಟ ಸಮಿತಿಯ ರಾಜ್ಯಾಧ್ಯಕ್ಷರಾದ ಲಚ್ಚಪ್ಪ ಎಸ್. ಜಮಾದಾರ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದ ಉದ್ಘಾಟನೆಯನ್ನು ದತ್ತಾತ್ರೇಯ ವಿಶ್ವಕರ್ಮ ಸಾಹಿತಿಗಳು ನೆರವೇರಿಸಿದರು. ಕಾರ್ಯಕ್ರಮದಲ್ಲಿ ವಿಶೇಷ ಭಾಷಣಕಾರರಾಗಿ ಮಲ್ಲಿಕಾರ್ಜುನ ಪಗಡೆ ಅವರು ಸಂಕ್ಷಿಪ್ತವಾಗಿ ಮಾತನಾಡಿದರು ಇದೇ ಸಂದರ್ಭದಲ್ಲಿ ಹಲವು ಗಣ್ಯರು ಕೂಡ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ವಿಶೇಷವಾಗಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವವರಿಗೆ ವಿಶೇಷ ಸನ್ಮಾನ ಮಾಡಲಾಯಿತು. ಕಾರ್ಯಕ್ರಮದ ನಿರೂಪಣೆಯನ್ನು ಅಚ್ಚುಕಟ್ಟಾಗಿ ರವಿ ಗುಂಡುಗುರ್ತಿ ಅವರು ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ವಿಶೇಷವಾಗಿ ಮಲ್ಲಿಕಾರ್ಜುನ್ ಪಗಡೆ ಅವರ ಸಾರಥ್ಯದ 'ಕಲ್ಯಾಣ ಜ್ಯೋತಿ' ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ನೂತನ ಪತ್ರಿಕೆಗಳನ್ನು ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಖಾಲೀದ್ ಜಾಗಿರದಾರ್, ಶ್ರೀಮಂತ ಬಿರಾದಾರ, ಶಂಕರ್ ಮ್ಯಾಕೇರಿ, ಮಾಹತೇಂಶ್ ಬಡಿಗೇರ, ಸಂಜೀವಕುಮಾರ ಉಕ್ಕಲಿ, ರಾಜಶೇಖರ ಮಾತೋಳಿ, ಭೀಮಶಾ ಖನ್ನಾ, ಸುರೇಶ್ ತಿಬ್ಬಶೆಟ್ಟಿ, ದಶರಥ ಯಾದವ್, ರಮೇಶ್ ಬಡಿಗೇರ, ಮಹೇಶ್ ವಿಶ್ವಕರ್ಮ, ಮಂಜುನಾಥ ನಾಯಕೋಡಿ, ಸೋಮು ನಾಯಕೋಡಿ, ಉಮೇಶ್ ಅಚಲೇರಿ, ಚನ್ನು ಹಿಂಚಗೇರಿ, ವಿಠ್ಠಲ್, ಪವನ್ ಕುಲಕರ್ಣಿ, ಹಣಮಂತ ಚಾಂಬರ್, ಅಮೃತ್ ಹಳ್ಳಿ, ಬಸವರಾಜ್ ಪತ್ತಾರ್, ನಿಂಗರಾಜ ಕೊಟ್ಟನಾಳ, ಈರಣ್ಣ ಸುತಾರ್, ಯಲ್ಲಪ್ಪ ದೊಡ್ಡಮನಿ, ಸೈಪನ್ ಅಳ್ಳಗಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

### ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಪ್ರಗತಿ ನಡೆಸಿದ ಸಚಿವ ಎಸ್.ಮಧು ಬಂಗಾರಪ್ಪ

# ಉತ್ತಮ ಫಲಿತಾಂಶ; ಸರ್ಕಾರಕ್ಕೆ ಅದೇ ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.16–ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಫಲಿತಾಂಶವು ನಿಗದಿತ ಗುರಿ ತಲುಪಬೇಕೆನ್ನುವುದು ಮುಖ್ಯಮಂತ್ರಿಯವರ ಆಶಯವಾಗಿದ್ದು, ಅದರಂತೆ ಬಳ್ಳಾರಿ ಜಿಲ್ಲೆಯು ಸಹ ಉತ್ತಮ ಫಲಿತಾಂಶ ಪಡೆಯಲು ಅಧಿಕಾರಿಗಳು ಶ್ರಮಿಸಬೇಕು. ಇದೇ ಸರ್ಕಾರಕ್ಕೆ ನೀವು ನೀಡುವ ಕೊಡುಗೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಎಸ್.ಮಧು ಬಂಗಾರಪ್ಪ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಧಿಕಾರಿಗಳು ಉತ್ತಮ ಫಲಿತಾಂಶಕ್ಕೆ ಈಗಿನಿಂದಲೇ ಕಾರ್ಯಯೋಜನೆ ರೂಪಿಸಬೇಕು. ಹಂತ–ಹಂತವಾಗಿ ಅದನ್ನು ಕಾರ್ಯರೂಪಕ್ಕೆ ತರಬೇಕು. ಇದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಅಡಿಪಾಯ ಹಾಕಿದಂತಾಗುತ್ತದೆ. ಕೊನೆಯ ಸಮಯದಲ್ಲಿ ಗೊಂದಲದಲ್ಲಿ ಅನುಷ್ಠಾನಗೊಳಿಸುವುದಲ್ಲ ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಕ್ಕಳಿಗೆ ಆತ್ಮಸ್ಥೈರ್ಯ ತುಂಬುವ ಕೆಲಸವಾಗಬೇಕು. ಅಧಿಕಾರಿಗಳು ಶಾಲೆಗಳನ್ನು ದತ್ತು ರೀತಿಯಲ್ಲಿ ಕಾಳಜಿ ವಹಿಸಬೇಕು. ಇದರಿಂದ ಶಾಲೆಗಳು ಅಭಿವೃದ್ಧಿ ಹೊಂದುತ್ತವೆ ಮತ್ತು ಒಳ್ಳೆಯ ಫಲಿತಾಂಶವು ಲಭಿಸುತ್ತದೆ ಎಂದರು.

ಜಿಲ್ಲೆಯ ಎಲ್ಲಾ ಶಾಲೆಗಳಿಗೂ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸಿದೆ. ಇದರಿಂದ ಕಂಪ್ಯೂಟರ್ ಶಿಕ್ಷಣವೂ ಲಭಿಸುತ್ತಿದೆ. ಸಂಜೆಯ ವೇಳೆಯಲ್ಲಿ ವಿಶೇಷ ತರಗತಿ ನಡೆಸಲು ಅನುಕೂಲವಾಗುತ್ತಿದೆ. ಈ ಕುರಿತು ಸಾಕಷ್ಟು ಪ್ರಚಾರ ಮಾಡಬೇಕು. ಮಕ್ಕಳು ಹೆಚ್ಚಿನ ವಿದ್ಯಾಭ್ಯಾಸ ಹೊಂದಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಶಾಲೆ ಬಿಟ್ಟ ಮಕ್ಕಳನ್ನು ಮನೆಗೆ ಹೋಗಿ ಕರೆತರುವ ಕೆಲಸ ಮಾಡಬೇಕು. ಮುಖ್ಯವಾಗಿ ಉನ್ನತ ಅಧಿಕಾರಿಗಳು ಶಾಲೆ ಬಿಟ್ಟ ಮಕ್ಕಳ ಮನೆಗೆ ಭೇಟಿ ನೀಡಿ, ಅವರನ್ನು ತಮ್ಮ ಸರ್ಕಾರಿ ವಾಹನ(ಕಾರ್) ಮೂಲಕ ಕರೆತಂದರೆ ಆ ಮಗುವಿಗೆ ನಾನು ವಿದ್ಯಾಭ್ಯಾಸ ಪಡೆಯಬೇಕೆಂಬ ಹಂಬಲ ಹುಟ್ಟಿಕೊಳ್ಳುತ್ತದೆ. ನಂತರ ಕರೆತಂದ ಅಧಿಕಾರಿಯೂ ಸಹ ಆ ಮಗುವಿನ ಮೇಲೆ ಹೆಚ್ಚಿನ ಕಾಳಜಿ ಕುರಿತು ವಿಚಾರಿಸ ತೊಡಗುತ್ತಾನೆ. ಇದರಿಂದ ಸುತ್ತ–ಮುತ್ತಲಿನ ಪೋಷಕರು ಸಹ ತಮ್ಮ ಮಕ್ಕಳನ್ನು ಶಾಲೆಗಳಿಗೆ ಕಳುಹಿಸಲು ಮುಂದೆ ಬರುತ್ತಾರೆ. ಶಿಕ್ಷಣ ಇಲಾಖೆಯಲ್ಲಿ 6 ಸಾವಿರಕ್ಕೂ ಹೆಚ್ಚು ಅಧಿಕಾರಿಗಳಿದ್ದು, ಒಬ್ಬೊಬ್ಬರು ಒಂದು ಮಗುವನ್ನು ಸರ್ಕಾರಿ ಶಾಲೆಗೆ ದಾಖಲಿಸಿದರೆ, ದಾಖಲಾತಿ ಪ್ರಮಾಣವೇ ಹೆಚ್ಚಳವಾಗುತ್ತದೆ. ಈ ಕುರಿತು ಅಧಿಕಾರಿಗಳು ಒಮ್ಮೆ ಯೋಚಿಸಬೇಕು ಎಂದು ಸಚಿವರು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಜಿಲ್ಲೆಯ ಗಡಿಭಾಗದ ಗ್ರಾಮಗಳಲ್ಲಿ ಜನರು ಗೂಳೆ ಹೋಗದಂತೆ ನೋಡಿಕೊಳ್ಳಬೇಕು. ಅದಕ್ಕಾಗಿಯೇ ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಇವುಗಳ ಪ್ರಯೋಜನ ಅವರು ಪಡೆಯುವಂತರಾಗಬೇಕು. ಇದರಿಂದ ಆ ಕುಟುಂಬದ ಮಕ್ಕಳು ಸಹ ಶಾಲೆ ತಪ್ಪಿಸುವುದಿಲ್ಲ ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ.ಆಕಾಶ್ ಶಂಕರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಈಗಾಗಲೇ ಶೇ.94 ರಷ್ಟು ಪಠ್ಯಪುಸ್ತಕ ಸರಬರಾಜು ಮಾಡಲಾಗಿದೆ. ಜಿಲ್ಲೆಯಲ್ಲಿ 8 ಸಾವಿರ (9 ಮತ್ತು 10 ನೇ ತರಗತಿ) ವಿದ್ಯಾರ್ಥಿಗಳು ಎನ್.ಎಸ್.ಕ್ಯೂ.ಎಫ್ ಐಟಿ ವಿಷಯ ಓದುತ್ತಿದ್ದಾರೆ ಎಂದು ಸಭೆಗೆ ತಿಳಿಸಿದರು.

**ಶಾಲಾ ಆಸ್ತಿ ನೋಂದಣಿಗೆ ಮುತುವರ್ಜಿ ವಹಿಸಿ:**

ಜಿಲ್ಲೆಯಲ್ಲಿ ಒಟ್ಟು 633 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, ಕಳೆದ ವರ್ಷ 362 ಶಾಲೆಗಳ ಆಸ್ತಿ ನೋಂದಣಿ ಮಾಡಲಾಗಿದೆ. ಅದರಲ್ಲಿ 265 ಶಾಲಾ ಆಸ್ತಿ ನೋಂದಣಿ ಬಾಕಿ ಇದ್ದು, ಇದಕ್ಕೆ ಡಿಡಿಪಿಐ ಮತ್ತು ಡಿಡಿಪಿಯು ಅಧಿಕಾರಿಗಳು ಹೊಣೆಗಾರಿಕೆ ಹೊಂದಬೇಕು. ಆಯಾ ವ್ಯಾಪ್ತಿಯ ತಹಶೀಲ್ದಾರ್ ಅವರ ಜೊತೆ ಸಹಭಾಗಿತ್ವ ಹೊಂದಿ ನೋಂದಣಿಗೆ ಆದ್ಯತೆ ವಿಷಯವಾಗಿ ಪರಿಗಣಿಸಲು ಸೂಚಿಸಬೇಕು ಎಂದು ತಿಳಿಸಿದರು.

**ಸಿಎಸ್‌ಆರ್ ಅನುದಾನ ಬಳಸಿ:**

ಮುಖ್ಯಮಂತ್ರಿಯವರ ನಿರ್ದೇಶನದಂತೆ, ಶಿಕ್ಷಣ ಇಲಾಖೆಯನ್ನು ಕೆಡಿಪಿ ಸಭೆಯಲ್ಲಿ ಮುಖ್ಯ ವಿಷಯವಾಗಿ ಚರ್ಚಿಸಬೇಕು ಎಂದು ಹೇಳಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳಿಗೆ ಈ ಇಲಾಖೆಗೆ ಸಾಕಷ್ಟು ಅನುದಾನ ಸರ್ಕಾರ ನೀಡುತ್ತಿದೆ. ಜಿಲ್ಲೆಯಲ್ಲಿ ಸಾಕಷ್ಟು ಕಾರ್ಖಾನೆ ವಲಯಗಳಿದ್ದು, ಅವುಗಳಿಂದ ಬರುವ ಸಿಎಸ್‌ಆರ್ ಅನುದಾನವನ್ನು ಶಾಲೆಗಳ ಅಭಿವೃದ್ಧಿಗೆ ಬಳಸಬೇಕು. ಅವರಿಂದ ಯಾವುದೇ ರೀತಿಯಲ್ಲಾದರೂ ದಾನಪಡೆಯಬೇಕು ಎಂದರು.

ಡಾ.ಆಕಾಶ್ ಶಂಕರ್ ಅವರು ಮಾತನಾಡಿ, "ನನ್ನ ಶಾಲೆ–ನನ್ನ ಜವಾಬ್ದಾರಿ" ಕಾರ್ಯಕ್ರಮದಡಿ ಜಿಲ್ಲೆಯ 719 ಶಾಲೆಗಳಲ್ಲಿ ವಿವಿಧ ಶಾಲೆಗಳು ಸೇರಿ 718 ವಾಟ್ಸ್ ಆಪ್ ಗುಂಪುಗಳನ್ನು ರಚಿಸಲಾಗಿದೆ. ಅದೇರೀತಿಯಾಗಿ "ನಮ್ಮ ಶಾಲೆ– ನನ್ನ ಕೊಡುಗೆ" ಕಾರ್ಯಕ್ರಮದಡಿ ಜಿಲ್ಲೆಯ 719 ಶಾಲೆಗಳಲ್ಲಿ 206 ಶಾಲೆಗಳು ಕೊಡುಗೆ ಸ್ವೀಕೃತವಾಗಿವೆ ಎಂದು ಸಭೆಗೆ ತಿಳಿಸಿದರು.

ಇದಕ್ಕೆ ಸಚಿವರು ಪ್ರತಿಕ್ರಿಯಿಸಿ, ಈ ಹಿಂದೆ ಅದೇ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಿದ ಹಳೆಯ ವಿದ್ಯಾರ್ಥಿಗಳಿಂದ ಶಾಲೆಗಳ ಅಭಿವೃದ್ಧಿಗೆ ದೇಣಿಗೆ ಹಾಗೂ ಕೊಡುಗೆಗಳನ್ನು ಪಡೆಯಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲೆಯ ಶಾಲೆಗಳ ಅಭಿವೃದ್ಧಿ ಕಾಮಗಾರಿ ಮತ್ತು ದುರಸ್ತಿ ಕಟ್ಟಡ ಕಾಮಗಾರಿ, ವಿವಿಧ ಅನುದಾನ ಬಳಕೆಯ ಕುರಿತು ಸುದೀರ್ಘ ಚರ್ಚೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಟಿ.ಪಾಲಾಕ್ಷಿ, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಉಪನಿರ್ದೇಶಕರಾದ ಲಕ್ಷ್ಮೀ ಕಿರಣ್ ಸೇರಿದಂತೆ ಜಿಲ್ಲೆಯ ಎಲ್ಲಾ ಬಿಇಓ ಅಧಿಕಾರಿಗಳು, ಸಿಆರ್‌ಪಿ, ಬಿಆರ್‌ಪಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂದು ರಂದು ವಿಶ್ವ ರಕ್ತದಾನಿಗಳ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.16–ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್‌ಷನ್ ಸೊಸೈಟಿ ಬೆಂಗಳೂರು, ಕರ್ನಾಟಕ ರಾಜ್ಯ ರಕ್ತ ಚಾಲನಾ ಪರಿಷತ್ತು ಬೆಂಗಳೂರು, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ, ಭಾರತೀಯ ರೆಡ್‌ಕ್ರಾಸ್ ಸಂಸ್ಥೆ, ಜಿಲ್ಲಾ ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ರಕ್ತನಿಧಿ ಕೇಂದ್ರ, ರೆಡ್‌ರಿಬ್ಬನ್ ಕ್ಲಬ್‌ಗಳು, ಸ್ವಯಂ ಸೇವಾ ಸಂಸ್ಥೆಗಳು, ಎನ್.ಎಸ್.ಎಸ್. ಘಟಕ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಇದೇ ಜೂನ್ 17ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಜಿಲ್ಲಾ ಸಮೀಕ್ಷಣಾ ಘಟಕದ ಪಕ್ಕದಲ್ಲಿರುವ ಜಿಲ್ಲಾ ಉಗ್ರಾಣ ಕೇಂದ್ರದ ಸಭಾಭವನದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ ಹಾಗೂ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಕಲಬುರಗಿ ವಿಭಾಗೀಯ ಜಂಟಿ ನಿರ್ದೇಶಕರ ಕಚೇರಿಯ ಸಹ ನಿರ್ದೇಶಕ ಡಾ. ಶಂಕ್ರಪ್ಪಾ ಮೈಲಾರಿ ಮತ್ತು ಉಪ ನಿರ್ದೇಶಕರುಗಳಾದ ಎ.ಎಸ್. ರುದ್ರವಾಡಿ, ಡಾ. ಶರಣಬಸಪ್ಪಾ ಗಣಜಲಖೇಡ್, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಜ್ಞರಾದ ಡಾ. ರುಖಯ್ಯಾ ಅಸ್ನಾರಬಾ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಕಲಬುರಗಿ ಜಿಲ್ಲಾ ಆಸ್ಪತ್ರೆಯ ರಕ್ತನಿಧಿ ಕೇಂದ್ರದ ವೈದ್ಯಾಧಿಕಾರಿ ಡಾ. ಮಮತಾ ಪಾಟೀಲ ಅವರು ಅತಿಥಿ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ. ಚಂದ್ರಕಾಂತ ನರಬೋಳಿ ಅವರು ಉಪಸ್ಥಿತರಿರುವರು. "ರಕ್ತ ನೀಡಿ, ಭರವಸೆ ನೀಡಿ: ಜೊತೆಯಾಗಿ ನಾವು ಜೀವ ಉಳಿಸೋಣ" ಎಂಬ ಘೋಷವಾಕ್ಯದೊಂದಿಗೆ ಈ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಜಾಥಾಕ್ಕೆ ಚಾಲನೆ: ಇದಕ್ಕೂ ಮೊದಲು ಅಂದು ಬೆಳಿಗ್ಗೆ 9 ಗಂಟೆಗೆ ಕಲಬುರಗಿ ಜಿಲ್ಲಾ ಆಸ್ಪತ್ರೆಯಲ್ಲಿ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಜಾಥಾಕ್ಕೆ ಚಾಲನೆ ನೀಡುವರು. ಕಲಬುರಗಿ ಜಿಲ್ಲಾ ಆಸ್ಪತ್ರೆಯಿಂದ ಆರಂಭಗೊಂಡ ಈ ಜಾಥಾವು ಕಲಬುರಗಿ ಜಿಲ್ಲಾ ಸಮೀಕ್ಷಣಾ ಘಟಕದ ಪಕ್ಕದಲ್ಲಿರುವ ಜಿಲ್ಲಾ ಉಗ್ರಾಣ ಕೇಂದ್ರದ ಸಭಾಭವನಕ್ಕೆ ಬಂದು ಕೊನೆಗೊಳ್ಳಲಿದೆ.

# ವಿವಿಧ ಕಲ್ಯಾಣ ಕಾರ್ಯಕ್ರಮಗಳಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.16–ಕಲಬುರಗಿ ಮಹಾನಗರ ಪಾಲಿಕೆಯ ಶೇ. 24.10ರ ಅನುಮೋದಿತ ಕ್ರಿಯಾ ಯೋಜನೆ 2012–13 ಮತ್ತು 2014–15ನೇ ಸಾಲಿನ ಪಾಲಿಕೆ ನಿಧಿ ಹಾಗೂ 2009–10 ರಿಂದ 2015–16ನೇ ಸಾಲಿನ ಪರಿಷ್ಕೃತ ಕ್ರೀಯಾ ಯೋಜನೆಯಡಿ ನಿಗದಿಪಡಿಸಿದ ಕೆಳಕಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರ ಕಲ್ಯಾಣ ಕಾರ್ಯಕ್ರಮಗಳಡಿ 2025–26 ನೇ ಸಾಲಿಗೆ ಕೆಳಕಂಡ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ. 2012–13 ಮತ್ತು 2014–15ನೇ ಸಾಲಿನ ಪಾಲಿಕೆ ನಿಧಿಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಸಮುದಾಯ ಭವನಗಳಿಗೆ ಆಟದ ಸಾಮಗ್ರಿಗಳು ಒದಗಿಸಲು, 2009–10 ರಿಂದ 2015–16 ನೇ ಸಾಲಿನ ಪರಿಷ್ಕೃತ ಕ್ರೀಯಾ ಯೋಜನೆಯಡಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಮುದಾಯ ಭವನಗಳಿಗೆ ಶವಪೆಟ್ಟಿಗೆ (ಫ್ರೀಜರ) ಒದಗಿಸಲು ಹಾಗೂ 2015–16ನೇ ಸಾಲಿನ ಎಸ್.ಎಫ್.ಸಿ ಕ್ರಿಯಾ ಯೋಜನೆ ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಜನರಿಗೆ ಬ್ಯಾಂಡಸೆಟ್ ವಿತರಿಸಲಾಗುತ್ತಿದೆ. ಅರ್ಹ ಫಲಾನುಭವಿಗಳು ಕಲಬುರಗಿ ಮಹಾನಗರ ಪಾಲಿಕೆಯ ಶೇ. 24.10 ಮತ್ತು ಆವಕ ಶಾಖೆಯಿಂದ ನಿಗದಿತ ಅರ್ಜಿ ನಮೂನೆಯನ್ನು ಕಚೇರಿ ಸಮಯದಲ್ಲಿ 2025ರ ಜೂನ್ 26 ರೊಳಗಾಗಿ ಪಡೆದು ಭರ್ತಿ ಮಾಡಿ ಅವಶ್ಯಕಗಳನ್ನು ಕಡ್ಡಾಯವಾಗಿ ದೃಢೀಕರಣದೊಂದಿಗೆ 2025ರ ಜೂನ್ 26ರ ಸಂಜೆ 4.30 ಗಂಟೆಯೊಳಗಾಗಿ ಸದರಿ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಈ ಮೊದಲು ಮಹಾನಗರ ಪಾಲಿಕೆಯಿಂದ ಅಥವಾ ಸರ್ಕಾರದ ವಿವಿಧ ಯೋಜನೆಯಡಿ ಸೌಲಭ್ಯ ಪಡೆದವರು ಪುನಃ ಸೌಲಭ್ಯಕ್ಕೆ ಅರ್ಜಿ ಸಲ್ಲಿಸುವಂತಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾನಗರ ಪಾಲಿಕೆಯ ಶೇ.24.10ರ ಶಾಖೆಯನ್ನು ಹಾಗೂ ಮಹಾನಗರ ಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಬೇಕು.

# ಪರೀಕ್ಷಾ ವಿಚಕ್ಷಣ ದಳವು ಡಾ. ಸುಧಾಮೂರ್ತಿ ಮಹಿಳಾ ಪದವಿ ಮಹಾ ವಿದ್ಯಾಲಯ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಡಾ. ಸುಧಾಮೂರ್ತಿ ಮಹಿಳಾ ಪದವಿ ಮಹಾ ವಿದ್ಯಾಲಯಕ್ಕೆ ರಾಯಚೂರು ಜಿಲ್ಲೆಯ ಪರೀಕ್ಷಾ ವಿಚಕ್ಷಣ ದಳವು ಗುರುವಾರ ಭೇಟಿ ನೀಡಿತು.

ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಟ್ಟಿರುವ ರಾಯಚೂರು ಜಿಲ್ಲೆಯ ಲಿಂಗಸೂರಿನ ಡಾ. ಸುಧಾಮೂರ್ತಿ ಮಹಿಳಾ ಪದವಿ ಕಾಲೇಜಿನಲ್ಲಿ ಆರಂಭವಾಗಿರುವ ಸ್ನಾತಕ ಪದವಿ ಪರೀಕ್ಷಾ ಕೇಂದ್ರಕ್ಕೆ ಮಹಿಳಾ ವಿಶ್ವವಿದ್ಯಾನಿಲಯದ ರಾಯಚೂರು ಜಿಲ್ಲೆಯ ಪರೀಕ್ಷಾ ವಿಚಕ್ಷಣ ದಳದ ಅಧ್ಯಕ್ಷರಾದ ಪ್ರೋ. ಎಸ್. ಆರ್ ಸಾಹು ಹಾಗೂ ಮಹಿಳಾ ಅಧಿಕಾರಿಗಳಾದ ಡಾ. ರೇಣುಕಾರೆಡ್ಡಿ, ಪ್ರೋ. ಲಕ್ಷ್ಮೀ ಹೆಬ್ಬಾಳ ಭೇಟಿ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರೋ. ಎಸ್ ಆರ್ ಸಾಹು ರಾಯಚೂರು ಜಿಲ್ಲೆಯಲ್ಲಿ ಬರುವ ಡಾ. ಸುದಾಮೂರ್ತಿ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದಾಗ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ನಕಲು ಮಾಡದೆ ಸುಸೂತ್ರವಾಗಿ ಪರೀಕ್ಷೆ ಬರೆಯಲು ಕಲ್ಪಿಸಿರುವ ವ್ಯವಸ್ಥೆ, ಸಿ ಸಿ ಕ್ಯಾಮೆರಾ ಅಳವಡಿಕೆ ಮಾಡಿರುವುದು ಪರೀಕ್ಷೆಯ ನೈಜತೆಯನ್ನು ತೋರಿಸುತ್ತದೆ ಹಾಗೂ ಈ ಪರೀಕ್ಷಾ ಕೇಂದ್ರದಲ್ಲಿ ಇಲ್ಲಿಯವರೆಗೆ ಯಾವುದೆ ತಾಂತ್ರಿಕ ತೊಂದರೆ ಇಲ್ಲದೆ ಶಾಂತತೆಯಿಂದ ಪರೀಕ್ಷೆಗಳು ನಡೆದಿವೆ ಎಂದು ತಿಳಿಸಿದರು.

ವಿಶ್ವವಿದ್ಯಾಲಯವು ನಡೆಸುವ ಸ್ನಾತಕ ಪದವಿಗಳ ಪರೀಕ್ಷೆಯು ಅವ್ಯವಹಾರಗಳಿಂದ ಕುಡಿವೆ ಇದಕ್ಕೆ ಪರೀಕ್ಷಾ ವಿಚಕ್ಷಣ ದಳದವರು ಮತ್ತು ಮೌಲ್ಯಮಾಪನದ ಕುಲಪತಿಗಳೆ ಕಾರಣ ಎಂದು ವೃಥಾ ಆರೋಪ ಮಾಡುತ್ತಿರುವುದು ಸತ್ಯಕ್ಕೆ ದೂರವಾದುದು ಎಂದು ರಾಯಚೂರು ಪರೀಕ್ಷೆಯ ಪರಿವಿಕ್ಷಣೆಯ ಅಧ್ಯಕ್ಷಕಾದ ಪ್ರೋ. ಎಸ್ ಆರ್ ಸಾಹು ತಿಳಿಸಿದರು.

ಈ ಸಂದರ್ಭದಲ್ಲಿ ಡಾ. ಸುಧಾಮೂರ್ತಿ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ರಮೇಶ್ ವೆಂಕಟಾಪುರ, ಜಮದಗ್ನಿ, ಡಿ. ಭವಾನಿ ಹಾಗೂ ನೂರ ಪಾಷ ಬಾಹ್ಯ ಹಿರಿಯ ಮೇಲ್ವಿಚಾರಕರು ಹಾಗೂ ಉಪನ್ಯಾಸಕರು ಸಿಬ್ಬಂದಿ ವರ್ಗ ಇದ್ದರು.

# ನೇಕಾರರು ಮುದ್ರಾ ಯೋಜನೆಯಡಿ ಅರ್ಜಿ ಆಹ್ವಾನ

ಕಲಬುರಗಿ,ಜೂ.16–ಪ್ರಸಕ್ತ 2025–26ನೇ ಸಾಲಿಗೆ ನೇಕಾರರು ಮುದ್ರಾ ಯೋಜನೆಯಡಿ ಕೇಂದ್ರ ಕಚೇರಿಯಿಂದ ಜಿಲ್ಲೆಗೆ ಭೌತಿಕ 10 ಗುರಿ ನಿಗದಿಪಡಿಸಿದ್ದು, ಈ ಯೋಜನೆಯಡಿ ಬ್ಯಾಂಕ್‌ನಿಂದ ಸಾಲ ಸೌಲಭ್ಯ ಪಡೆಯಲು ಆಸಕ್ತಿಯುಳ್ಳ ಕೈಮಗ್ಗ ನೇಕಾರರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಪಂಚಾಯತ್ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳೀಸಿದ್ದಾರೆ.

ಈ ಯೋಜನೆಯಡಿ ನೇಕಾರರು ಕೈಮಗ್ಗ ನೇಕಾರಿಕೆ ಉದ್ದೇಶಕ್ಕಾಗಿ ಕೈಮಗ್ಗ ಸಲಕರಣೆಗಳನ್ನು ಖರೀದಿಸಲು / ದುಡಿಮೆ ಬಂಡವಾಳಕ್ಕಾಗಿ ಸಾಲ ಸೌಲಭ್ಯವನ್ನು ಪಡೆಯಲು ಅವಕಾಶವಿದ್ದು, ಸಾಲದ ಮೊಬಲಗಿನ ಮೇಲೆ ಶೇ.20 ರಷ್ಟು ಅಥವಾ ಗರಿಷ್ಠ 25,000 ರೂ.ಗಳನ್ನು ಮಾರ್ಜಿನ್ ಮನಿಯಾಗಿ ಪಡೆಯಲು ಅವಕಾಶವಿರುತ್ತದೆ.

ಆಸಕ್ತಿಯುಳ್ಳ ಭರ್ತಿ ಮಾಡಿದ ಅರ್ಜಿಯೊಂದಿಗೆ ಕೈಮಗ್ಗ ನೇಕಾರರು ಕೇಂದ್ರ ಅಥವಾ ರಾಜ್ಯ ಸರ್ಕಾರ ನೀಡಿರುವ ನೇಕಾರರ ಗುರುತಿನ ಚೀಟಿ ಅಥವಾ ಪಾಸ್‌ಬುಕ್, ಆಧಾರ್ ಕಾರ್ಡ್ ಹಾಗೂ ಬ್ಯಾಂಕ್ ಖಾತೆ ಪ್ರತಿಯನ್ನು ಕೂಡಲೇ ಕಲಬುರಗಿ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸದರಿ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

